24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 85 | ನವದೆಹಲಿ | ಬೆಲೆ ₹10 | ಸೆಪ್ಟಂಬರ್ 20 2026 ಭಾನುವಾರ

## ಒಳಪುಟಗಳಲ್ಲಿ

ಕೃಷಿ ಚಟುವಟಿಕೆಗಳಿಗೆ ಖಾಸಗಿ ಜಮೀನಿನ ಮೂಲಕ -ತೆರಳಲು ಇರುವ ಕಾಲುದಾರಿ, ಬಂಡಿದಾರಿ, ರಸ್ತೆಗಳಿಗೆ ಅಡ್ಡಿಪಡಿಸಿದರೆ ಕ್ರಮ: ಕಂದಾಯ ಇಲಾಖೆ ಎಚ್ಚರಿಕೆ - ಪು.5



ಬಂದರಿನಲ್ಲಿ ಅಸಮರ್ಪಕ ನಿರ್ವಹಣೆ, ನೈರ್ಮಲ್ಯ ಕೊರತೆ: ಅಧಿಕಾರಿ ಅಮಾನತಿಗೆ ಸಿಎಂ ಆದೇಶ - ಪು.6

ಸಿದ್ದರಾಮಯ್ಯ ಮೂರ್ತಿ ತೆರವು ವಿರೋಧಿಸಿ ಪ್ರತಿಭಟನೆ - ಪು.7

# ಸಹಕಾರ ಪದ್ಧತಿಯಿಂದ ರೈತರ ಪ್ರಗತಿ ಸಾಧ್ಯ: ಸಿಎಂ ಡಿ.ಕೆ. ಶಿವಕುಮಾರ್

**ತೀರ್ಥಹಳ್ಳಿ, ಸೆ.19: ಜೊತೆಗೂಡುವುದು ಆರಂಭ, ಜೊತೆಗೂಡಿ ಆಲೋಚಿಸುವುದು ಪ್ರಗತಿ, ಜೊತೆಗೂಡಿ ಕೆಲಸ ಮಾಡುವುದು ಯಶಸ್ಸು. ಇದೇ ಸಹಕಾರ ತತ್ವ. ಸಹಕಾರ ಪದ್ಧತಿಯಿಂದ ರೈತರ ಪ್ರಗತಿ ಸಾಧ್ಯವಾಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅಭಿಪ್ರಾಯ ವ್ಯಕ್ತಪಡಿಸಿದರು.**



ತೀರ್ಥಹಳ್ಳಿ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್) ಅಮೃತ ಮಹೋತ್ಸವ ಉದ್ಘಾಟಿಸಿ, ಟಿಎಪಿಸಿಎಂಎಸ್ 75 ವರ್ಷ ಆಚರಿಸುತ್ತಿದೆ. ಒಂದು ಸಂಸ್ಥೆ ಇಷ್ಟು ವರ್ಷಗಳ ಕಾಲ ಉಳಿಯುವುದು ಕಷ್ಟ. ಅದನ್ನು ತೀರ್ಥಹಳ್ಳಿ ಟಿಎಪಿಸಿಎಂಎಸ್ ಸುಳ್ಳಾಗಿಸಿದೆ. ಇಲ್ಲಿನ ಆಡಳಿತ ಮಂಡಳಿಗೆ ಅಭಿನಂದನೆಗಳು ಎಂದರು

ಕಬ್ಬಿನ ಕಾರ್ಖಾನೆಗಳು ಸಹಕಾರಿ ಪದ್ಧತಿಯಲ್ಲಿ ನಡೆದು ರೈತರನ್ನು ಕಾಪಾಡಿವೆ. ಮಲೆನಾಡು ಭಾಗದಲ್ಲಿ ಬಸ್, ಆಸ್ಪತ್ರೆ, ಬ್ಯಾಂಕ್‌ಗಳು ಸಹಕಾರಿ ಪದ್ಧತಿಯಲ್ಲಿ ನಡೆಯುತ್ತಿವೆ. ಇದು ಈ ಭಾಗದ ಹೆಗ್ಗಳಿಕೆ. ಮಲೆನಾಡು ಭಾಗವನ್ನು ಉಳಿಸುವ ಬಗ್ಗೆ ಜನರ ಅಭಿಪ್ರಾಯ ಪಡೆದು ತೀರ್ಮಾನ, ಚರ್ಚೆ ಮಾಡೋಣ ಎಂದರು. ಸಿಎಂ ಡಿ.ಕೆ. ಶಿವಕುಮಾರ್ ಅವರು ಕಸ್ತೂರಿ ರಂಗನ್ ವರದಿ ವಿಚಾರವಾಗಿ ಚರ್ಚಿಸಲು ಶಿವಮೊಗ್ಗದ ತೀರ್ಥಹಳ್ಳಿಯಲ್ಲಿ ಸಾರ್ವಜನಿಕರೊಂದಿಗೆ ನೇರ ಸಂವಾದವನ್ನು ಉದ್ಘಾಟಿಸಿದರು. ಸಚಿವರಾದ ರಾಮಲಿಂಗಾರೆಡ್ಡಿ, ಮಧು ಬಂಗಾರಪ್ಪ, ಸಂಸದ ಬಿ.ವೈ. ರಾಘವೇಂದ್ರ, ಶಾಸಕರಾದ ಬೇಳೂರು ಗೋಪಾಲಕೃಷ್ಣ, ಆರಗ ಜ್ಞಾನೇಂದ್ರ, ಶಾರದಾ ಪೂರ್ಯಾನಾಯ್ಕ್, ಎಸ್ ಎನ್ ಚನ್ನಬಸಪ್ಪ, ಪರಿಷತ್ ಸದಸ್ಯರಾದ ಬಿಲ್ಕಿಸ್ ಬಾನು, ಧನಂಜಯ್ ಸರ್ಜಿ, ಡಿ. ಎಸ್.ಅರುಣ್, ಮಲೆನಾಡು ಅಭಿವೃದ್ಧಿ ಮಂಡಳಿ ಅಧ್ಯಕ್ಷ ಮಂಜುನಾಥ ಗೌಡ, ಭದ್ರಾ ಅಚ್ಚುಕಟ್ಟು ಪ್ರದೇಶ ಪ್ರಾಧಿಕಾರ ಅಧ್ಯಕ್ಷ ಅಂಶುಮನ್, ಸೂಡಾ ಅಧ್ಯಕ್ಷ ಎಚ್ ಎಸ್ ಸುಂದರೇಶ್, ಜವಳಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಚೇತನ್‌ಗೌಡ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಸಿ ಎಸ್ ಚಂದ್ರಭೂಪಾಲ, ಶ್ರೀನಿವಾಸನ್ ಕರಿಯಣ್ಣ ಮತ್ತಿತರರು ಉಪಸ್ಥಿತರಿದ್ದರು.

### ಹೊಸದಾಗಿ ಯಾವುದೇ ರೈತರಿಗೆ ನೋಟಿಸ್ ನೀಡುವಂತಿಲ್ಲ: ಅರಣ್ಯ ಇಲಾಖೆಗೆ ಸಿಎಂ ಸೂಚನೆ

ತೀರ್ಥಹಳ್ಳಿಯಲ್ಲಿ ಆಯೋಜಿಸಲಾಗಿದ್ದ ಕಸ್ತೂರಿ ರಂಗನ್ ವರದಿ ಕುರಿತ ಸಂವಾದ ಸಭೆಯಲ್ಲಿ ಬೃಹತ್ ಜನಪ್ರತಿನಿಧಿಗಳು ಹಾಗೂ ರೈತರ ಸಂವಾದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ರೈತರ ಭೂಮಿ ಹಕ್ಕು, ಕಸ್ತೂರಿರಂಗನ್ ವರದಿ, ಬಗರ್‌ಹುಕುಂ, ಅರಣ್ಯ ಒತ್ತುವರಿ ಹಾಗೂ ಪರಿಸರ ಸೂಕ್ಷ್ಮ ವಲಯದ ಸಮಸ್ಯೆಗಳ ಕುರಿತು ಸುದೀರ್ಘವಾಗಿ ಸರ್ಕಾರದ ನಿಲುವನ್ನು ಸ್ಪಷ್ಟಪಡಿಸಿದರು. ಮಲೆನಾಡಿನ ರೈತರು ತಲೆತಲಾಂತರಗಳಿಂದ ಸಾಂಪ್ರದಾಯಿಕವಾಗಿ ಉಳುಮೆ ಮಾಡಿಕೊಂಡು ಬಂದಿರುವ ಜಮೀನು ಹಾಗೂ ನಿರ್ಮಿಸಿಕೊಂಡಿರುವ ಮನೆಗಳಿಗೆ ಯಾವುದೇ ಕಾರಣಕ್ಕೂ ತೊಂದರೆ ಕೊಡಬಾರದು. ಯಾವೊಬ್ಬ ರೈತನಿಗೂ ಹೊಸದಾಗಿ ಅರಣ್ಯ ಇಲಾಖೆಯಿಂದ ನೋಟಿಸ್ ಜಾರಿ ಮಾಡಬಾರದು ಎಂದು ಸಭೆಯಲ್ಲಿಯೇ ಹಾಜರಿದ್ದ ಅರಣ್ಯ ಸಚಿವರು ಮತ್ತು ಅಪರ ಮುಖ್ಯ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು. ಇದೇ ವೇಳೆ, ರೈತರೂ ಕೂಡ ಹೊಸದಾಗಿ ಅರಣ್ಯಭೂಮಿಯನ್ನು ಒತ್ತುವರಿ ಮಾಡಲು ಮುಂದಾಗಬಾರದು ಎಂದು ಎಚ್ಚರಿಸಿದರು.

# 15000 ಕೋಟಿ ರೂ. ಬಂಡವಾಳ ಹರಿವು: ಎಂ.ಬಿ. ಪಾಟೀಲ್



■ ಸೆಮಿಕಾನ್ ಇಂಡಿಯಾ ಸಮಾವೇಶ: 20ಕ್ಕೂ ಹೆಚ್ಚು ಕಂಪನಿಗಳ ಜತೆ ಚರ್ಚೆ

**ಬೆಂಗಳೂರು, ಸೆ.19:** ದೆಹಲಿಯಲ್ಲಿ ನಡೆದ ಸೆಮಿಕಾನ್ ಇಂಡಿಯಾ–2026 ಸಮಾವೇಶದಲ್ಲಿ 20ಕ್ಕೂ ಹೆಚ್ಚು ಕಂಪನಿಗಳ ಜತೆ ಮಾತುಕತೆ ನಡೆಸಿದ್ದು, ರಾಜ್ಯಕ್ಕೆ 15 ಸಾವಿರ ಕೋಟಿಗೂ ಹೆಚ್ಚಿನ ಬಂಡವಾಳ ಹರಿದು ಬರುವ ಸಾಧ್ಯತೆ ನಿಚ್ಚಳವಾಗಿದೆ. ಈ ಅವಕಾಶವನ್ನು ನಮ್ಮದಾಗಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ.

ಸೆಮಿಕಾನ್ ಇಂಡಿಯಾ ಸಮಾವೇಶದಲ್ಲಿ ಭಾಗವಹಿಸಿದ್ದ ಅವರು ದೆಹಲಿಯಿಂದ ವಾಪಸ್ ಆದ ಬಳಿಕ ಶನಿವಾರ ಮಾತನಾಡಿದ ಅವರು, ಸಮಾವೇಶದಲ್ಲಿ ಲ್ಯಾಮ್ ರೀಸರ್ಚ್ ಕಂಪನಿಯು ರಾಜ್ಯದಲ್ಲಿ 9,298 ಕೋಟಿ ಮತ್ತು ಅಪ್ಲೈಡ್ ಮೆಟೀರಿಯಲ್ಸ್ ಮುಂದಿನ 10 ವರ್ಷಗಳಲ್ಲಿ ಮೊದಲ ಹಂತದಲ್ಲಿ 3,600 ಕೋಟಿ ಬಂಡವಾಳ ಹೂಡುವುದಾಗಿ ಘೋಷಿಸಿವೆ. ಈ ಯೋಜನೆಗಳಿಂದ ರಾಜ್ಯದ ಸೆಮಿಕಂಡಕ್ಟರ್ ಪೂರೈಕೆ ಸರಪಳಿ, ಚಿಪ್ ವಿನ್ಯಾಸ ಮತ್ತು ಈ ಕ್ಷೇತ್ರದ ಸಾಧನಗಳ ತಯಾರಿಕೆ, ಪ್ರಿಸಿಷನ್ ಎಂಜಿನಿಯರಿಂಗ್, ಸಂಶೋಧನೆ ಮತ್ತು ಅಭಿವೃದ್ಧಿ ಚಿತ್ರಣವೇ ಬದಲಾಗಲಿದೆ. ಲ್ಯಾಮ್ ರೀಸರ್ಚ್ ಕಂಪನಿಗೆ ದೊಡ್ಡಬಳ್ಳಾಪುರ ತಾಲ್ಲೂಕಿನ ಆದಿನಾರಾಯಣ ಹೊಸಹಳ್ಳಿ ಕೈಗಾರಿಕಾ ಪ್ರದೇಶದಲ್ಲಿ 73 ಎಕರೆ ಭೂಮಿ ನೀಡಲಾಗಿದೆ. ಇಲ್ಲಿ ದೇಶದ ಪ್ರಪ್ರಥಮ ಸಿಲಿಕಾನ್ ಬಿಡಿಭಾಗಗಳ ತಯಾರಿಕಾ ಸ್ಥಾವರ ಬರಲಿದ್ದು, 1,000ಕ್ಕೂ ಹೆಚ್ಚು ನೇರ ಹೈಟೆಕ್ ಉದ್ಯೋಗಗಳು ಸೃಷ್ಟಿಯಾಗಲಿವೆ. ಜತೆಗೆ ರಾಜ್ಯದಲ್ಲಿ ಇದರಿಂದ ಉನ್ನತ ಮಟ್ಟದ ಸೆಮಿಕಂಡಕ್ಟರ್ ಮೆಟೀರಿಯಲ್ಸ್ ಮತ್ತು ಬಿಡಿಭಾಗಗಳ ತಯಾರಿಕೆ ಕೂಡ ಆರಂಭವಾಗಲಿದೆ. ಈ ಘಟಕ ನಿರ್ಮಾಣಕ್ಕೆ ಸದ್ಯದಲ್ಲೇ ಶಂಕುಸ್ಥಾಪನೆ ನೆರವೇರಿಸಲಾಗುವುದು. ಒಂದೂವರೆ ವರ್ಷದಲ್ಲಿ ಕಾರ್ಯಾರಂಭ ಮಾಡುವ ವಿಶ್ವಾಸ ಕೂಡ ಇದೆ ಎಂದು ತಿಳಿಸಿದ್ದಾರೆ.

ಇದೇ ರೀತಿ ಸೆಮಿಕಂಡಕ್ಟರ್ ಮೆಟೀರಿಯಲ್ಸ್ ಎಂಜಿನಿಯರಿಂಗ್ ಮತ್ತು ಈ ಕ್ಷೇತಕ್ಕೆ ಅಗತ್ಯವಿರುವ ಸಾಧನಗಳ ತಯಾರಿಕೆಗೆ ಹೆಸರಾಗಿರುವ ಅಮೆರಿಕದ ಅಪ್ಲೈಡ್ ಮೆಟೀರಿಯಲ್ಸ್ ಕಂಪನಿಯು 2035ರ ವೇಳೆಗೆ ಭಾರತದಲ್ಲಿ 500 ಕೋಟಿ ಡಾಲರ್ ಹೂಡಿಕೆ ಮಾಡಲಿದೆ. ಕಂಪನಿಯು ತನ್ನ ದೀರ್ಘಾವಧಿ ಚಟುವಟಿಕೆಗಳ ವಿಸ್ತರಣೆಗೆ ಬೆಂಗಳೂರನ್ನು ಆಯ್ಕೆ ಮಾಡಿಕೊಂಡಿದೆ. ಇದರಂತೆ, ಇನ್ನು 10 ವರ್ಷಗಳಲ್ಲಿ ಅದು ರಾಜ್ಯದಲ್ಲಿ 3,600 ಕೋಟಿ ರೂ. ಬಂಡವಾಳ ಹೂಡಲಿದೆ. ಇದಕ್ಕಾಗಿ ಬೆಂಗಳೂರು ಸಿಗ್ನೇಚರ್ ಬಿಝಿನೆಸ್ ಪಾರ್ಕ್ ಪ್ರದೇಶದಲ್ಲಿ ಕಂಪನಿಗೆ 140 ಎಕರೆ ಭೂಮಿ ನೀಡಲಾಗುತ್ತಿದೆ. ಇದರಿಂದಲೂ 1,000ಕ್ಕೂ ಹೆಚ್ಚು ಗುಣಮಟ್ಟದ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಪಾಟೀಲ್ ನುಡಿದಿದ್ದಾರೆ.

# ರಾಷ್ಟ್ರಸೇವೆಯಲ್ಲಿ ಯುವಕರ ಪಾಲ್ಗೊಳ್ಳುವಿಕೆ ಹೆಚ್ಚಳಕ್ಕೆ ಪ್ರಧಾನಿ ಪ್ರೇರಣೆ



■ ಇಪ್ಪತ್ತನೇ ಉದ್ಯೋಗ ಮೇಳದಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿಕೆ


**ಬೆಂಗಳೂರು, ಸೆ.19:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಪ್ರೇರಣೆಯಿಂದ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ರಾಷ್ಟ್ರಸೇವೆಯಲ್ಲಿ ತೊಡಗಿಸಿಕೊಳ್ಳುತ್ತಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಉದ್ಯೋಗ ಮೇಳದ (ರೋಜ್‌ಗಾರ್ ಮೇಳ) ಇಪ್ಪತ್ತನೇ ಆವೃತ್ತಿಯ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು; ಪ್ರಧಾನಮಂತ್ರಿಗಳ ದೂರದೃಷ್ಟಿಯ ಸಂಕಲ್ಪ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಯುವ ಜನತೆಗೆ ಹೆಚ್ಚೆಚ್ಚು ಅವಕಾಶ ಕಲ್ಪಿಸುವ ಉದ್ದೇಶದಿಂದ ಆರಂಭಿಸಲಾದ ರೋಜ್‌ಗಾರ್ ಯೋಜನೆಯಿಂದ ಯುವಕರಿಗೆ ಹೆಚ್ಚು ಉದ್ಯೋಗ ಅವಕಾಶಗಳು ಸಿಗುತ್ತಿದೆ ಎಂದು ಹೇಳಿದರು.


ಕರ್ನಾಟಕ ರಾಜ್ಯ ಸೇರಿ ದೇಶಾದ್ಯಂತ 51,000ಕ್ಕೂ ಹೆಚ್ಚು ಯುವಜನರಿಗೆ ನೇಮಕಾತಿ ಪತ್ರಗಳನ್ನು ನೀಡಲಾಗಿದೆ. ಮೇಕ್ ಇನ್ ಇಂಡಿಯಾ, ಆತ್ಮನಿರ್ಭರ ಭಾರತ ಮುಂತಾದ ಕಾರ್ಯಕ್ರಮಗಳ ಮೂಲಕ ವಿಕಸಿತ ಗುರಿ ಸಾಧಿಸುವ ನಿಟ್ಟಿನಲ್ಲಿ ಈ ನೇಮಕಾತಿ ಪರ್ವವೂ ಬಹುದೊಡ್ಡ ಕಾಣಿಕೆ ನೀಡುತ್ತಿದೆ. ಎಂದು ಹೇಳಿದರು.

ಈ ಉದ್ಯೋಗ ಮೇಳವು ದೇಶದ 45 ವಿವಿಧ ಕೇಂದ್ರಗಳಲ್ಲಿ ಏಕಕಾಲದಲ್ಲಿ ನಡೆದು, ಆಯ್ಕೆಯಾದ ಅಭ್ಯರ್ಥಿಗಳು ಕೇಂದ್ರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರ್ಪಡೆಗೊಳ್ಳಲಿದ್ದಾರೆ. ಕಂದಾಯ, ರೇಲ್ವೆ, ಗೃಹ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಹಣಕಾಸು, ರಕ್ಷಣೆ ಸೇರಿದಂತೆ ಹಲವಾರು ಪ್ರಮುಖ ಇಲಾಖೆಗಳಲ್ಲಿ ನೇಮಕ ಅಗಲಿದ್ದಾರೆ. ಈ 20ನೇ ಆವೃತ್ತಿಯೊಂದಿಗೆ ರೋಜ್‌ಗಾರ್ ಮೇಳದ ಮೂಲಕ ನೇಮಕಾತಿ ಆದೇಶ ಪತ್ರಗಳನ್ನು ಪಡೆದ ಒಟ್ಟು ಯುವಜನರ ಸಂಖ್ಯೆ ಸುಮಾರು 12.75 ಲಕ್ಷ ಮೀರಿದೆ. ಮಾನ್ಯ ಪ್ರಧಾನಿಗಳ ನಾಯಕತ್ವದಲ್ಲಿ ಇಷ್ಟೆಲ್ಲಾ ಅವಕಾಶಗಳು ನಮ್ಮ ಯುವಜನರಿಗೆ ದೊರೆತಿವೆ ಎಂದು ಸಂತೋಷವಾಗಿ ಹೇಳಬಯಸುತ್ತೇನೆ.

ಶಾಸಕ ಮುನಿರತ್ನ ಅವರು, ಬೆಂಗಳೂರು ಕಸ್ಟಮ್ಸ್ ವಿಭಾಗದ ಮುಖ್ಯ ಆಯುಕ್ತ ಆಶಿಸ್ ಚಂದನ್ ಸೇರಿದಂತೆ ಹಲವಾರು ಅಧಿಕಾರಿಗಳು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕೇಂದ್ರದ ವಿವಿಧ ಸೇವೆಗಳಿಗೆ ಆಯ್ಕೆಯಾದ 25ಕ್ಕೂ ಹೆಚ್ಚು ಅಭ್ಯರ್ಥಿಗಳಿಗೆ ಸಚಿವರು ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಿದರು.



## ನಿತ್ಯ ಪಂಚಾಂಗ 20.09.2026 ಭಾನುವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ ಶ್ರಾವಣ–ಭಾದ್ರಪದ ಮಾಸ**

ಭಾದ್ರಪದ ಶುದ್ಧ, ನವಮಿ, ಪೂರ್ವಾಷಾಢ ನಕ್ಷತ್ರ, ಕೇದಾರ ವ್ರತ, ಭಾಗವತ ಸಪ್ತಾಹ ಪ್ರಾರಂಭ, ಯಡಿಯೂರು ಶಕ್ತಿಗಣಪತಿ ಉತ್ಸವ, ಮಾನ್ವಿ ಜಗನ್ನಾಥ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಆರೋಗ್ಯದಲ್ಲಿ ಏರುಪೇರು: ಹುಬ್ಬಳ್ಳಿ ಕಾರ್ಯಕ್ರಮಕ್ಕೆ ಅಮಿತ್‌ಶಾ ಗೈರು

**ಹುಬ್ಬಳ್ಳಿ, ಸೆ.19:** ಕರ್ನಾಟಕ ಪ್ರವಾಸದಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಆರೋಗ್ಯದಲ್ಲಿ ಶನಿವಾರ ದಿಢೀರ್ ಏರುಪೇರು ಉಂಟಾದ ಹಿನ್ನೆಲೆಯಲ್ಲಿ, ಹುಬ್ಬಳ್ಳಿಯಲ್ಲಿ ನಿಗದಿಯಾಗಿದ್ದ ಕಾರ್ಯಕ್ರಮಕ್ಕೆ ಅವರು ಗೈರುಹಾಜರಾಗಿದ್ದಾರೆ. ವೈದ್ಯರ ಸಲಹೆಯ ಮೇರೆಗೆ ಅಮಿತ್ ಶಾ ತಂಗಿದ್ದ ಖಾಸಗಿ ಹೋಟೆಲ್‌ನಲ್ಲೇ ವಿಶ್ರಾಂತಿ ಪಡೆಯುತ್ತಿದ್ದಾರೆ.

ಶನಿವಾರ ಹುಬ್ಬಳ್ಳಿಯ ಗಬ್ಬೂರಿನಲ್ಲಿ ಕೆಎಲ್‌ಇ ಜಗದ್ಗುರು ಗಂಗಾಧರ ಮಹಾಸ್ವಾಮಿಗಳು ಮೂರುಸಾವಿರಮಠ ವೈದ್ಯಕೀಯ ಕಾಲೇಜಿನ ಹೊಸ ಶೈಕ್ಷಣಿಕ ಕಟ್ಟಡ ಹಾಗೂ 1,200 ಹಾಸಿಗೆಗಳ ಸಾಮರ್ಥ್ಯದ ಕೆಎಲ್‌ಇ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರವನ್ನು ಉದ್ಘಾಟಿಸುವ ಕಾರ್ಯಕ್ರಮದಲ್ಲಿ ಅಮಿತ್ ಶಾ ಭಾಗವಹಿಸಬೇಕಿತ್ತು. ಆದರೆ ಆರೋಗ್ಯದಲ್ಲಿ ವ್ಯತ್ಯಾಸ ಕಂಡುಬಂದ ಹಿನ್ನೆಲೆಯಲ್ಲಿ ಅವರು ಕಾರ್ಯಕ್ರಮಕ್ಕೆ ಹಾಜರಾಗಲು ಸಾಧ್ಯವಾಗಲಿಲ್ಲ.

ಕಾರ್ಯಕ್ರಮದಲ್ಲಿ ಮಾತನಾಡಿದ ಕೆಎಲ್‌ಇ ಸೊಸೈಟಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ಮಾಜಿ ಸದಸ್ಯ ಪ್ರಭಾಕರ್ ಕೋರೆ, ಅಮಿತ್ ಶಾ ಅವರಿಗೆ ಆರೋಗ್ಯ ಸಮಸ್ಯೆ ಉಂಟಾಗಿದ್ದು, ವೈದ್ಯರ ಸಲಹೆಯ ಮೇರೆಗೆ ಅವರು ಹೋಟೆಲ್‌ನಲ್ಲೇ ಉಳಿದುಕೊಂಡಿದ್ದಾರೆ ಎಂದು ತಿಳಿಸಿದ್ದಾರೆ. ಅಮಿತ್‌ಶಾ ಅವರೊಂದಿಗೆ ಆಗಮಿಸಿದ್ದ ವೈದ್ಯಕೀಯ ತಂಡವೇ ಅವರ ಆರೋಗ್ಯದ ಮೇಲೆ ನಿಗಾ ವಹಿಸಿದೆ ಎಂದು ಮೂಲಗಳು ತಿಳಿಸಿವೆ. ವೈದ್ಯಕೀಯ ತಂಡದಲ್ಲಿರುವ ಡಾ. ಅರುಣ್ ಪ್ರತಾಪ್ ಅವರು ಆರೋಗ್ಯ ತಪಾಸಣೆ ನಡೆಸಿ ಅಗತ್ಯ ಆರೈಕೆ ಒದಗಿಸುತ್ತಿದ್ದಾರೆ ಎಂದು ತಿಳಿದು ಬಂದಿದೆ.

**ಅಧಿಕಾರಿಗಳ ಭೇಟಿ, ಭದ್ರತಾ ವ್ಯವಸ್ಥೆ ಪರಿಶೀಲನೆ**

ಕೇಂದ್ರ ಗೃಹ ಸಚಿವರ ಆರೋಗ್ಯದಲ್ಲಿ ವ್ಯತ್ಯಾಸ ಉಂಟಾಗಿದೆ ಎಂಬ ಮಾಹಿತಿ ಲಭ್ಯವಾದ ಬಳಿಕ ಹಿರಿಯ ಅಧಿಕಾರಿಗಳು ಅವರು ತಂಗಿದ್ದ ಹೋಟೆಲ್‌ಗೆ ಭೇಟಿ ನೀಡಿದ್ದಾರೆ.

ಧಾರವಾಡ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಸಿಇಒ ಭುವನೇಶ ಪಾಟೀಲ್ ಹಾಗೂ ಐಜಿಪಿ ಲಾಬುರಾಮ್ ಅವರು ಸ್ಥಳಕ್ಕೆ ತೆರಳಿ ಪರಿಸ್ಥಿತಿಯ ಮೇಲ್ವಿಚಾರಣೆ ನಡೆಸಿದ್ದಾರೆ. ಇದರೊಂದಿಗೆ ಹೋಟೆಲ್ ಸುತ್ತಮುತ್ತಲಿನ ಭದ್ರತಾ ವ್ಯವಸ್ಥೆಯನ್ನೂ ಅಧಿಕಾರಿಗಳು ಪರಿಶೀಲಿಸಿದ್ದಾರೆ.

**ಎರಡು ಗಂಟೆ ವಿಶ್ರಾಂತಿಗೆ ವೈದ್ಯರ ಸಲಹೆ**

ಪ್ರಸ್ತುತ ಎರಡು ಗಂಟೆಗಳ ಕಾಲ ಸಂಪೂರ್ಣ ವಿಶ್ರಾಂತಿ ಪಡೆಯುವಂತೆ ವೈದ್ಯರು ಅಮಿತ್ ಶಾ ಅವರಿಗೆ ಸೂಚಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ಹೋಟೆಲ್‌ನಲ್ಲಿಯೇ ಚಿಕಿತ್ಸೆ ಹಾಗೂ ವಿಶ್ರಾಂತಿ ಪಡೆದ ಬಳಿಕ ಅವರ ಮುಂದಿನ ಕಾರ್ಯಕ್ರಮಗಳ ಕುರಿತು ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ.ಆರೋಗ್ಯದ ಕಾರಣದಿಂದ ಹುಬ್ಬಳ್ಳಿಯ ಕಾರ್ಯಕ್ರಮಕ್ಕೆ ಅಮಿತ್ ಶಾ ಗೈರುಹಾಜರಾದ ಹಿನ್ನೆಲೆಯಲ್ಲಿ, ಅವರ ಬದಲಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಕರ್ನಾಟಕದ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ಹಾಗೂ ಶ್ರೀ ಜಗದ್ಗುರು ಮೂರುಸಾವಿರಮಠದ ಶ್ರೀ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ ಅವರು ಸಂಸ್ಥೆಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಶುಕ್ರವಾರ ತಡರಾತ್ರಿ ಹುಬ್ಬಳ್ಳಿಗೆ ಆಗಮಿಸಿದ್ದ ಶಾ –ಕೆಎಲ್‌ಇ ಸಂಸ್ಥೆಯ ಕಾರ್ಯಕ್ರಮದಲ್ಲಿ ಭಾಗವಹಿಸುವ ಸಲುವಾಗಿ ಅಮಿತ್ ಶಾ ಅವರು ಶುಕ್ರವಾರ ತಡರಾತ್ರಿ ಹುಬ್ಬಳ್ಳಿಗೆ ಆಗಮಿಸಿದ್ದರು. ಅವರ ಶನಿವಾರದ ಪ್ರವಾಸದಲ್ಲಿ ಬೆಳಗಾವಿ ಜಿಲ್ಲೆಯ ಯಕ್ಸಂಬಾದಲ್ಲಿ ಶ್ರೀ ಬೀರೇಶ್ವರ ಸಹಕಾರಿ ಪತ್ತಿನ ಸಂಘದ ನೂತನ ಪ್ರಧಾನ ಕಚೇರಿ ಕಟ್ಟಡ ಉದ್ಘಾಟನೆ ಹಾಗೂ ಸಾರ್ವಜನಿಕ ಸಭೆಯಲ್ಲಿ ಭಾಗವಹಿಸುವ ಕಾರ್ಯಕ್ರಮವೂ ನಿಗದಿಯಾಗಿತ್ತು. ಈ ಕಾರ್ಯಕ್ರಮದ ಕುರಿತು ಮುಂಚಿತವಾಗಿ ವೇಳಾಪಟ್ಟಿ ಪ್ರಕಟಿಸಲಾಗಿತ್ತು.

# ಕರ್ನಾಟಕ ಸರಕಾರಕ್ಕೆ ದೆಹಲಿ ತುಳುಸಿರಿಯ ಅಭಿನಂದನೆ

**ನವದೆಹಲಿ, ಸೆ.19:** ಪಂಚ ದ್ರಾವಿಡ ಭಾಷೆಯಾದ ತುಳುವನ್ನು ಕರ್ನಾಟಕ ರಾಜ್ಯದ ಎರಡನೇ ಅಧಿಕೃತ ಭಾಷೆಯನ್ನಾಗಿ ಮಾಡಬೇಕೆಂಬ ತುಳುವರ ಒಕ್ಕೊರಲ ಬೇಡಿಕೆಯನ್ನು ಕರ್ನಾಟಕ ಸರಕಾರವು ಮಂಗಳೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ವಿಶೇಷ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅಧಿಕೃತವಾಗಿ ತೀರ್ಮಾನಿಸಿರುವುದು ಸಂತಸದ ಸಂಗತಿ.

ಕಳೆದ ಚುನಾವಣೆಯ ಸಂದರ್ಭದಲ್ಲಿ ಕರ್ನಾಟಕದ ಎಲ್ಲ ಪಕ್ಷಗಳು ತಮ್ಮ ಪ್ರಣಾಳಿಕೆಯಲ್ಲಿ ಪಂಚ ದ್ರಾವಿಡ ಭಾಷೆಯಾದ ತುಳುವನ್ನು ರಾಜ್ಯದ ಎರಡನೇ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡಬೇಕೆಂಬ ಮನವಿಯನ್ನು ದೆಹಲಿ ತುಳುಸಿರಿಯ ವತಿಯಿಂದ ಮಾಡಲಾಗಿತ್ತು. ಕರ್ನಾಟಕ ಕಾಂಗ್ರೆಸ್ ಪಕ್ಷ ಚುನಾವಣಾ ಪೂರ್ವ ತನ್ನ ಪ್ರಣಾಳಿಕೆಯಲ್ಲಿ ಈ ಅಂಶವನ್ನು ನೀಡಿತ್ತು. ಇದೀಗ ತನ್ನ ಪ್ರಣಾಳಿಕೆಯಂತೆ ನಡೆದುಕೊಂಡಿರುವುದು ತುಳುನಾಡಿನ ಜನತೆಗೆ ಅವಿಸ್ಮರಣೀಯ ಕ್ಷಣವಾಗಿದೆ.

ಸಂವಿಧಾನದ ಎಂಟನೇ ಪರಿಚ್ಛೇದಕ್ಕೆ ತುಳುಭಾಷೆಯನ್ನು ಸೇರ್ಪಡೆಗೊಳಿಸಬೇಕಾದರೆ ಕರ್ನಾಟಕ ಸರಕಾರವು ತುಳು ಭಾಷೆಯನ್ನು ರಾಜ್ಯದ ಅಧಿಕೃತ ಭಾಷೆಯನ್ನಾಗಿಸಬೇಕೆಂಬ ಪ್ರಸ್ತಾಪವನ್ನು ಮೊದಲು ಸರಕಾರದ ಗಮನಕ್ಕೆ ತಂದದ್ದು ದೆಹಲಿ ತುಳುಸಿರಿ. ದೆಹಲಿ ತುಳುಸಿರಿಯ ಈ ಕೋರಿಕೆಯ ಮೇರೆಗೆ ವಿಶೇಷವಾಗಿ ಮುತುವರ್ಜಿ ವಹಿಸಿ ಕಾರ್ಯಗೈದ ಪ್ರೊಫೆಸರ್ ರಾಧಾಕೃಷ್ಣ ಅವರಿಗೆ ಇದರ ಪೂರ್ಣ ಶ್ರೇಯಸ್ಸು ಸಲ್ಲಬೇಕಾದುದು. ಅವರು ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಣಾಳಿಕೆ ಸಮಿತಿಯ ಉಪಾಧ್ಯಕ್ಷರಾಗಿದ್ದರು. ಅಧ್ಯಕ್ಷರಾಗಿದ್ದ ಅಂದಿನ ಮಾಜಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರಿಗೆ, ಕೆಪಿಸಿಸಿ ಅಧ್ಯಕ್ಷರಾಗಿದ್ದ ಡಿ. ಕೆ. ಶಿವಕುಮಾರ್ ಅವರಿಗೂ ದೆಹಲಿ ತುಳುಸಿರಿಯು ಅನಂತ ಕೃತಜ್ಞತೆಗಳನ್ನು ಸಲ್ಲಿಸುತ್ತದೆ.

ಪ್ರಸ್ತುತ ಸರಕಾರದ ಸಚಿವ ಸಂಪುಟಕ್ಕೆ, ಈ ಹೋರಾಟದ ಹಿಂದೆ ಶ್ರಮಿಸಿದ ಕರಾವಳಿಯ ಶಾಸಕರಿಗೆ, ಸಂಸದರಿಗೆ ಹಾಗೂ ಮಹನೀಯರಿಗೆ ಅಭಿನಂದನೆ ಗಳನ್ನು ಸಲ್ಲಿಸುತ್ತದೆ. ಈ ಐತಿಹಾಸಿಕ ಕ್ಷಣವನ್ನು ಒದಗಿಸಿಕೊಟ್ಟ ಮುಖ್ಯ ಮಂತಿಯನ್ನು ದೆಹಲಿಯಲ್ಲಿ ತುಳುವರು ಆದರಾಭಿಮಾನದಿಂದ ಅಭಿನಂದಿಸಲಿದ್ದಾರೆ.

ತುಳುಭಾಷೆ, ಸಂಸ್ಕೃತಿಗಾಗಿ ರಾಷ್ಟ್ರ ರಾಜಧಾನಿ ದೆಹಲಿಯಲಿ ದೆಹಲಿ ತುಳುಸಿರಿಯು ಸುಮಾರು ಮೂರು ದಶಕಗಳಿಂದ ನಿರಂತರವಾಗಿ ಕಾರ್ಯಗೈಯುತ್ತಿದೆ.

ಸಂವಿಧಾನದ ಎಂಟನೇ ಪರಿಚ್ಛೇದಕ್ಕೆ ತುಳು ಭಾಷೆಯನ್ನು ಸೇರ್ಪಡೆಗೊಳಿಸಲು ಅಪಾರ ಶ್ರಮವಹಿಸಿದೆ. ಮುಂದಿನ ದಿನಗಳಲ್ಲಿಯೂ ಈ ಪ್ರಯತ್ನವು ಮುಂದುವರಿಯಲಿದೆ ಎಂದು ದೆಹಲಿ ತುಳುಸಿರಿ ಅಧ್ಯಕ್ಷ, ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಮಾಜಿ ಸದಸ್ಯ ವಸಂತ ಶೆಟ್ಟಿ ಬೆಳ್ಳಾರೆ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಕ್ಯಾನ್ಸರ್ ಹೆಚ್ಚುತ್ತಿರುವ ಹೊರೆ ತಗ್ಗಿಸಲು ಆರಂಭಿಕ ಪತ್ತೆ, ಕೈಗೆಟುಕುವ ಮತ್ತು ಸುಲಭವಾಗಿ ಲಭ್ಯವಾಗುವ ಚಿಕಿತ್ಸೆ ಅಗತ್ಯ: ಡಾ.ಸಿ.ಎನ್. ಮಂಜುನಾಥ್

**ಬೆಂಗಳೂರು, ಸೆ.19:** ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಮಾನ್ಯ ಸಂಸದರಾದ ಪದ್ಮಶ್ರೀ ಡಾ. ಸಿ. ಎನ್. ಮಂಜುನಾಥ್ ಅವರು ಬೆಂಗಳೂರಿನ ದಿ ಚಾನ್ಸರಿ ಪೆವಿಲಿಯನ್ನಲ್ಲಿ ನಡೆಯುತ್ತಿರುವ ಸೊಸೈಟಿ ಆಫ್ ಆಂಕೊಲಾಜಿಕ್ ಇಮೇಜಿಂಗ್, ಇಂಡಿಯಾ (SOII)ಯ 8ನೇ ವಾರ್ಷಿಕ ಸಮ್ಮೇಳನ SOIICON 2026ರಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದರು.

ಪ್ರಮುಖ ಕ್ಯಾನ್ಸರ್ ತಜ್ಞರು, ರೇಡಿಯಾಲಜಿಸ್ಟ್‌ಗಳು ಹಾಗೂ ವೈದ್ಯಕೀಯ ಕ್ಷೇತ್ರದ ಗಣ್ಯರನ್ನು ಉದ್ದೇಶಿಸಿ ಮಾತನಾಡಿದ ಡಾ. ಮಂಜುನಾಥ್ ಅವರು, ದೇಶದಲ್ಲಿ ಕ್ಯಾನ್ಸರ್ ಸೇರಿದಂತೆ ಸಾಂಕ್ರಾಮಿಕವಲ್ಲದ ಕಾಯಿಲೆಗಳ ಹೊರೆ ಹೆಚ್ಚುತ್ತಿರುವ ಬಗ್ಗೆ ಗಮನ ಸೆಳೆದರು. ವಿಶೇಷವಾಗಿ ಯುವಜನರಲ್ಲಿ ಇಂತಹ ಕಾಯಿಲೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೋಗ ತಡೆಗಟ್ಟುವಿಕೆ, ಆರೋಗ್ಯಕರ ಜೀವನಶೈಲಿ, ಆರಂಭಿಕ ಪತ್ತೆ ಹಾಗೂ ನಿಖರವಾದ ರೋಗನಿರ್ಣಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ಕ್ಯಾನ್ಸರ್‌ನ ಆರಂಭಿಕ ಪತ್ತೆ, ರೋಗನಿರ್ಣಯ, ಹಂತ ನಿರ್ಧಾರ ಹಾಗೂ ಚಿಕಿತ್ಸಾ ಯೋಜನೆ ರೂಪಿಸುವಲ್ಲಿ ವೈದ್ಯಕೀಯ ಇಮೇಜಿಂಗ್‌ನ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಆದರೆ, ವೈದ್ಯಕೀಯ ನಿರ್ಧಾರಗಳಲ್ಲಿ ವೈದ್ಯರ ಕ್ಲಿನಿಕಲ್ ಜ್ಞಾನ, ವಿವೇಚನೆ ಹಾಗೂ ರೋಗಿಯ ಆರೋಗ್ಯ ಮತ್ತು ಹಿತಾಸಕ್ತಿಯೇ ಕೇಂದ್ರಬಿಂದುವಾಗಿರಬೇಕು ಎಂದು ಅವರು ಒತ್ತಿ ಹೇಳಿದರು.

ಕ್ಯಾನ್ಸರ್ ಚಿಕಿತ್ಸೆಯು ಮೂರು `A`ಗಳಾದ – Affordable (ಕೈಗೆಟುಕುವ), Accessible (ಸುಲಭವಾಗಿ ಲಭ್ಯವಾಗುವ) ಮತ್ತು Available (ಎಲ್ಲೆಡೆ ಲಭ್ಯವಾಗುವ) ತತ್ವದ ಆಧಾರದ ಮೇಲೆ ರೂಪುಗೊಳ್ಳಬೇಕು ಎಂದು ಡಾ. ಮಂಜುನಾಥ್ ಕರೆ ನೀಡಿದರು. ಅತ್ಯಾಧುನಿಕ ಚಿಕಿತ್ಸೆಗಳ ವೆಚ್ಚ ಹೆಚ್ಚುತ್ತಿರುವುದು ರೋಗಿಗಳು ಮತ್ತು ಅವರ ಕುಟುಂಬಗಳ ಮೇಲೆ ದೊಡ್ಡ ಆರ್ಥಿಕ ಹೊರೆಯಾಗುತ್ತಿದೆ ಎಂದು ಅವರು ಹೇಳಿದರು.

ವಿದೇಶಿ ವೈದ್ಯಕೀಯ ತಂತ್ರಜ್ಞಾನಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ 'ಮೇಕ್ ಇನ್ ಇಂಡಿಯಾ' ಹಾಗೂ ಆರೋಗ್ಯ ಕ್ಷೇತ್ರದ ಆವಿಷ್ಕಾರಗಳಿಗೆ ಹೆಚ್ಚಿನ ಉತ್ತೇಜನ ನೀಡಬೇಕು. ಇದರಿಂದ ಅತ್ಯಾಧುನಿಕ ವೈದ್ಯಕೀಯ ತಂತ್ರಜ್ಞಾನಗಳು ಹಾಗೂ ಚಿಕಿತ್ಸೆಗಳು ಜನಸಾಮಾನ್ಯರಿಗೆ ಇನ್ನಷ್ಟು ಕೈಗೆಟುಕುವಂತಾಗಲು ಸಾಧ್ಯವಾಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.

ತಡೆಗಟ್ಟುವ ಆರೋಗ್ಯ ಸೇವೆಗೆ ಹೆಚ್ಚಿನ ಒತ್ತು ನೀಡುವ ಅಗತ್ಯವನ್ನು ಪ್ರಸ್ತಾಪಿಸಿದ ಅವರು, ಒತ್ತಡ, ಏಕಾಂಗಿ ಜೀವನ, ಅತಿಯಾದ ಮೊಬೈಲ್ ಹಾಗೂ ಸ್ಕ್ರೀನ್ ಬಳಕೆ, ಅನಾರೋಗ್ಯಕರ ಆಹಾರ ಪದ್ಧತಿ ಮತ್ತು ಜಡ ಜೀವನಶೈಲಿ ಇಂದಿನ ಯುವಜನರಲ್ಲಿ ಆತಂಕಕಾರಿ ಪ್ರವೃತ್ತಿಗಳಾಗಿವೆ ಎಂದು ಹೇಳಿದರು.

'ಸರಿಯಾದ ರೋಗಿಗೆ, ಸರಿಯಾದ ಸಮಯದಲ್ಲಿ, ಸರಿಯಾದ ಚಿಕಿತ್ಸೆಯನ್ನು ಒದಗಿಸುವುದೇ ಆಧುನಿಕ ಆರೋಗ್ಯ ಸೇವೆಯ ಅಂತಿಮ ಗುರಿಯಾಗಬೇಕು. ಚಿಕಿತ್ಸೆಯ ಗುಣಮಟ್ಟದ ಜೊತೆಗೆ ಅದು ಕೈಗೆಟುಕುವಂತೆಯೂ, ಎಲ್ಲರಿಗೂ ಲಭ್ಯವಾಗುವಂತೆಯೂ ಹಾಗೂ ರೋಗಿಯ ಘನತೆಯನ್ನು ಕಾಪಾಡುವಂತೆಯೂ ಇರಬೇಕು ಎಂದು ಡಾ. ಮಂಜುನಾಥ್ ಹೇಳಿದರು.

ಕ್ಯಾನ್ಸರ್‌ನ ಆರಂಭಿಕ ಪತ್ತೆಯನ್ನು ಬಲಪಡಿಸುವುದು, ಆಂಕೊಲಾಜಿಕ್ ಇಮೇಜಿಂಗ್ ಕ್ಷೇತ್ರವನ್ನು ಮತ್ತಷ್ಟು ಅಭಿವೃದ್ಧಿಪಡಿಸುವುದು ಹಾಗೂ ಎಲ್ಲರಿಗೂ ಕೈಗೆಟುಕುವ, ಸುಲಭವಾಗಿ ಲಭ್ಯವಾಗುವ ಮತ್ತು ಮಾನವೀಯ ಕ್ಯಾನ್ಸರ್ ಚಿಕಿತ್ಸೆಯನ್ನು ಒದಗಿಸುವ ನಿಟ್ಟಿನಲ್ಲಿ ವೈದ್ಯಕೀಯ ಕ್ಷೇತ್ರದ ಸಾಮೂಹಿಕ ಬದ್ಧತೆಯನ್ನು SOIICON 2026 ಸಮ್ಮೇಳನ ಮತ್ತೊಮ್ಮೆ ಪ್ರತಿಪಾದಿಸಿತು.

ಕಾರ್ಯಕ್ರಮದಲ್ಲಿ ಖಔಋಋ ಅಧ್ಯಕ್ಷರಾದ ಡಾ. ಪಂಕಜ್ ಶರ್ಮಾ, ಪ್ರಧಾನ ಕಾರ್ಯದರ್ಶಿ ಡಾ. ಸುಧೀರ್ ಕಾಳೆ, ಡಾ. ಮಧು ಎಸ್.ಡಿ. ಸೇರಿದಂತೆ SOIIನ ಪೋಷಕರು, ಪದಾಧಿಕಾರಿಗಳು, ಸಮಿತಿಯ ಗಣ್ಯ ಸದಸ್ಯರು ಹಾಗೂ ಭಾರತ ಮತ್ತು ವಿದೇಶಗಳಿಂದ ಆಗಮಿಸಿದ್ದ ಹಲವಾರು ಖ್ಯಾತ ವೈದ್ಯರು ಉಪಸ್ಥಿತರಿದ್ದರು.

## ಹೈಕೋರ್ಟ್‌ಗೆ ಮೂವರು ಹೆಚ್ಚುವರಿ ನ್ಯಾಯಮೂರ್ತಿಗಳ ನೇಮಕ




**ಬೆಂಗಳೂರು, ಸೆ.19:** ರಾಜ್ಯ ಹೈಕೋರ್ಟ್‌ಗೆ ಮೂವರು ಹೆಚ್ಚುವರಿ ನ್ಯಾಯಮೂರ್ತಿಗಳನ್ನು ನೇಮಿಸಿ ಕೇಂದ್ರ ಸರ್ಕಾರ ಶನಿವಾರ ಅಧಿಸೂಚನೆ ಪ್ರಕಟಿಸಿದೆ. ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಉಷಾರಾಣಿ, ಬೆಂಗಳೂರು ಪ್ರಧಾನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರಾದ ಕೆ.ಎಸ್.ಭರತ್ ಕುಮಾರ್ ಮತ್ತು ಕಾನೂನು ಇಲಾಖೆಯಲ್ಲಿ ಪ್ರಧಾನ ಕಾರ್ಯದರ್ಶಿಯಾಗಿರುವ ಎನ್ ವಿ ಭವಾನಿ ಅವರನ್ನು ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಮೂರ್ತಿಗಳ ಹುದ್ದೆಗಳಿಗೆ ಸೆಪ್ಟೆಂಬರ್ 10ರಂದು ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸ್ಸು ಮಾಡಿತ್ತು. ಈ ಶಿಫಾರಸ್ಸಿಗೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದು, ಕೇಂದ್ರ ಸರ್ಕಾರವು ಅಧಿಸೂಚನೆ ಪ್ರಕಟಿಸಿದೆ. ಹೈಕೋರ್ಟ್‌ನಲ್ಲಿ ಒಟ್ಟು 62 ನ್ಯಾಯಮೂರ್ತಿಗಳ ಹುದ್ದೆಯಿದ್ದು, ಹೊಸ ನೇಮಕಾತಿಗಳ ಮೂಲಕ ಒಟ್ಟು 57 ನ್ಯಾಯಮೂರ್ತಿಗಳು ಕಾರ್ಯ ನಿರ್ವಹಿಸಲಿದ್ದಾರೆ.



ಬೆಂಗಳೂರು ತ್ಯಾಗರಾಜನಗರದ ವಿದ್ಯಾವಾರಿಧಿ ಗೆಳೆಯರ ಬಳಗ ವತಿಯಿಂದ ಶನಿವಾರ ಆಯೋಜಿಸಿದ್ದ 13ನೇ ವರ್ಷದ ಅದ್ದೂರಿ ಗಣೇಶೋತ್ಸವ ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಪಾಲ್ಗೊಂಡರು. ಗಣೇಶನ ದರ್ಶನ ಪಡೆದು, ನಾಡಿನ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ಆರೋಗ್ಯ ಕರುಣಿಸಲೆಂದು ಪ್ರಾರ್ಥಿಸಿದರು.

# ಡಿಕೆಶಿ ಮನಸ್ಸು ಮಾಡಿದರೆ ಸ್ವಂತಹಣದಲ್ಲೇ ರೈತರ ಸಾಲ ಮನ್ನಾ ಮಾಡಬಹುದು: ಎಚ್‌ಡಿಕೆ

**ಬೆಂಗಳೂರು, ಸೆ.19:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನಸ್ಸು ಮಾಡಿದರೆ ರಾಜ್ಯದ ಆರ್ಥಿಕ ಇಲಾಖೆಯ ಹಂಗಿಲ್ಲದೆ ಸ್ವಂತ ಹಣದಲ್ಲೇ ರೈತರ ಸಾಲ ಮನ್ನಾ ಮಾಡಬಹುದು ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.



ಮಾಧ್ಯಮಗಳೊಂದಿಗೆ ಶನಿವಾರ ಮಾತನಾಡಿದ ಅವರು, ಇತ್ತೀಚೆಗೆ ಬಹಳ ಬದಲಾಗಿರುವಂತೆ ತೋರಿಸಿಕೊಳ್ಳುತ್ತಿರುವ ಡಿಕೆಶಿ, ಇಲ್ಲಿಯವರೆಗೆ ಗಳಿಸಿರುವ ಹಣವನ್ನು ಜನರ ಪರವಾಗಿ ಕೊಟ್ಟರೆ 2028ಕ್ಕೂ ಹಾಗೂ ಮುಂದೆಯೂ ತಾನೇ ಸಿಎಂ ಆಗಬಹುದು. ನೈಸ್ ಹೆಸರಿನಲ್ಲಿ ಸಾವಿರಾರು ಕೋಟಿ ಆಸ್ತಿ ನುಂಗಲು ಹೊರಟಿರುವ ಬದಲಿಗೆ, ಆ ಹಣವನ್ನು ಜನರ ಸೇವೆಗೆ ಬಳಸಿ ಸಾಲಮನ್ನಾ ಮಾಡಲಿ ಎಂದು ಸವಾಲು ಹಾಕಿದರು.

ಸೋಮವಾರದಿಂದ ನಡೆಯಲಿರುವ ವಿಶೇಷ ಅಧಿವೇಶನದ ಕುರಿತು ಪ್ರಸ್ತಾಪಿಸಿದ ಅವರು, ಕಸ್ತೂರಿ ರಂಗನ್ ವರದಿ ಜಾರಿಯಾಗಬಾರದು ಎಂಬುದರ ಕುರಿತು ರಾಜ್ಯದ ಎಲ್ಲಾ ರಾಜಕೀಯ ಪಕ್ಷಗಳ ಧ್ವನಿ ಒಂದೇ ಆಗಿದೆ. ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಸೇರಿದಂತೆ ಮಲೆನಾಡಿನ ರೈತರ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿರಬೇಕು ಮತ್ತು ವರದಿಯ ವಿರುದ್ಧ ಸದನದಲ್ಲಿ ಒಮ್ಮತದ ಹೋರಾಟ ನಡೆಸಬೇಕು ಎಂದರು.

ಬರ ಪರಿಹಾರ ನೀಡದಿರುವುದು ಸರ್ಕಾರದ ವೈಫಲ್ಯ ರಾಜ್ಯದಲ್ಲಿನ ಭೀಕರ ಬರಗಾಲದ ಕುರಿತು ಚರ್ಚಿಸಲು ಸ1ರ್ಕಾರದ ಬಳಿ ಏನೂ ಇಲ್ಲ ಎಂದು ಆರೋಪಿಸಿದ ಹೆಚ್‌ಡಿಕೆ, 2–3 ಬಾರಿ ಬಿತ್ತನೆ ಮಾಡಿ ಬೆಳೆ ಕಳೆದುಕೊಂಡ ರೈತರಿಗೆ ಸರ್ಕಾರ ಯಾವುದೇ ಪರಿಹಾರ ನೀಡಿಲ್ಲ. ಹಳ್ಳಿಗಳಲ್ಲಿ ಕುಡಿಯುವ ನೀರಿನ ಅಭಾವ ತೀವ್ರವಾಗಿದ್ದರೂ ಸರ್ಕಾರ ದುಂಡುವೆಚ್ಚ ಮಾಡುತ್ತಿದೆಯೇ ಹೊರತು ಸಂಕಷ್ಟದಲ್ಲಿರುವ ರೈತರ ನೆರವಿಗೆ ಧಾವಿಸುತ್ತಿಲ್ಲ" ಎಂದು ವಾಗ್ದಾಳಿ ನಡೆಸಿದರು.

# ಸಿದ್ಧಾರ್ಥ ವಿಹಾರ ಟ್ರಸ್ಟ್ ಹಗರಣ: ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಎನ್. ರವಿಕುಮಾರ್ ಒತ್ತಾಯ

**ಬೆಂಗಳೂರು, ಸೆ.19**: ಸಿದ್ಧಾರ್ಥ ವಿಹಾರ ಟ್ರಸ್ಟ್ ಹಗರಣದಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಿಂದ ಮಹತ್ವದ ಆದೇಶ ಪ್ರಕಟವಾಗಿದ್ದು, ಲೋಕಾಯುಕ್ತ ಎಸ್‌ಪಿಗೆ ನೋಟಿಸ್ ಜಾರಿಗೊಳಿಸಿರುವುದು ಖರ್ಗೆ ಕುಟುಂಬದ ಅಕ್ರಮಗಳಿಗೆ ಪ್ರಾಥಮಿಕ ಸಾಕ್ಷ್ಯಗಳಿಗೆ ಪುಷ್ಟಿ ಒದಗಿಸಿದೆ ಎಂದು ವಿಧಾನಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿ ಕುಮಾರ್ ಹೇಳಿದ್ದಾರೆ.



ಪ್ರಥಮ ದೃಷ್ಟಿಯಲ್ಲೇ ಅಕ್ರಮ ಸಾಬೀತು, ವಿಚಾರಣೆಗೆ 'ಯಾವ ತಡೆಗೋಡೆಯೂ ಇಲ್ಲ' ಎಂದ ನ್ಯಾಯಾಲಯ ಸ್ಪಷ್ಟಪಡಿಸಿದ್ದು, ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಕೂಡಲೇ ಸಂಪುಟದಿಂದ ವಜಾಗೊಳಿಸಬೇಕು" ಎಂದು ಆಗ್ರಹಿಸಿದ್ದಾರೆ.


ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಜಮೀನು ಮಂಜೂರು ಮಾಡಿದ ಬ್ರಹ್ಮಾಂಡ ಭೂಹಗರಣ ಪ್ರಕರಣದಲ್ಲಿ, ತಮಗೆ 'ಕ್ಲೀನ್ ಚಿಟ್' ಸಿಕ್ಕಿದೆ ಎಂದು ಬೀಗುತ್ತಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕಾಂಗ್ರೆಸ್ ಸರ್ಕಾರಕ್ಕೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಚಾಟಿಯೇಟು ನೀಡಿದೆ. ಹೈಕೋರ್ಟ್ ಸೂಚನೆಯಂತೆ ದೂರುದಾರರು ಸೆಪ್ಟೆಂಬರ್ 10ರಂದು ಪ್ರಮಾಣಪತ್ರ ಸಲ್ಲಿಸಿ ತಾಂತ್ರಿಕ ಲೋಪವನ್ನು ಸಂಪೂರ್ಣವಾಗಿ ಸರಿಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸುದೀರ್ಘ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಲಯವು ಪ್ರಕರಣವನ್ನು ಮುಂದುವರಿಸಲು ಯಾವುದೇ ಅಡೆತಡೆಗಳಿಲ್ಲ ಎಂದು ಸ್ಪಷ್ಟಪಡಿಸಿ, ಅಕ್ಟೋಬರ್ 6ರೊಳಗೆ ವರದಿ ಸಲ್ಲಿಸುವಂತೆ ಲೋಕಾಯುಕ್ತಗೆ ಆದೇಶಿಸಿದೆ ಎಂದು ಹೇಳಿದ್ದಾರೆ.

**ಸಿಕ್ಕಿಬಿದ್ದ ನಂತರ ವಾಪಸ್ ಮಾಡಿದರೆ ಅಪರಾಧ ಮಾಸುವುದಿಲ್ಲ**

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿರುವ ನ್ಯಾಯಾಲಯವು ಕಾನೂನು ಅಡಿಯಲ್ಲಿ ಲೋಕಾಯುಕ್ತ ಎಸ್‌ಪಿಯವರಿಂದ ವಿವರಣೆ/ ವರದಿ ಕೇಳಿ ನೋಟಿಸ್ ನೀಡಿದ್ದು, ಅಕ್ಟೋಬರ್ 6ರೊಳಗೆ ಹಾಜರುಪಡಿಸಲು ದಿನಾಂಕ ನಿಗದಿಪಡಿಸಿದೆ. ಸಿಕ್ಕಿಬಿದ್ದ ಮೇಲೆ 'ವಾಪಸ್' ಕೊಟ್ಟರೆ ಅಪರಾಧ ಮಾಸುವುದಿಲ್ಲ. ಕದ್ದ ಮಾಲನ್ನು ಸಿಕ್ಕಿಬಿದ್ದ ಮೇಲೆ ವಾಪಸ್ ಕೊಟ್ಟ ತಕ್ಷಣ ಕಳ್ಳನ ಅಪರಾಧ ಇಲ್ಲವಾಗುವುದಿಲ್ಲ. ದೇವನಹಳ್ಳಿ ಏರೋಸ್ಪೇಸ್ ಪಾರ್ಕ್‌ನಲ್ಲಿ ಕೋಟ್ಯಂತರ ರೂ. ಬೆಲೆಬಾಳುವ 5 ಎಕರೆ ಸಿಎ ನಿವೇಶನ ಕಬಳಿಸಲು ಯತ್ನಿಸಿದ ಪ್ರತಿಯೊಬ್ಬ ಸೂತ್ರಧಾರಿಯೂ ಕಾನೂನಿನಂತೆ ಶಿಕ್ಷೆ ಅನುಭವಿಸಲೇಬೇಕು. ಲೋಕಾಯುಕ್ತ ತನಿಖೆಗೆ ಮುಕ್ತ ಅವಕಾಶ ಕೊಡಿ: ಲೋಕಾಯುಕ್ತ ಎಸ್‌ಪಿಗೆ ನೋಟಿಸ್ ಹೋಗಿರುವುದರಿಂದ, ಕಾಂಗ್ರೆಸ್ ಸರ್ಕಾರವು ಯಾವುದೇ ಕಾರಣಕ್ಕೂ ಆಡಳಿತ ಯಂತ್ರವನ್ನು ಬಳಸಿ ತನಿಖೆಗೆ ತಡೆ ಒಡ್ಡುವ ಅಥವಾ ಕಡತಗಳನ್ನು ಬಟಾವಣೆ ಮಾಡುವ ಕುತಂತ್ರ ಮಾಡಬಾರದು ಎಂದು ಎನ್.ರವಿಕುಮಾರ್ ಹೇಳಿದ್ದಾರೆ.

# ಪಕ್ಷ - ಸರ್ಕಾರ ನಡುವೆ ಸಮನ್ವಯತೆ ಕಾಪಾಡಲು ಶೀಘ್ರವೇ ರಾಜಕೀಯ ವ್ಯವಹಾರ ಸಮಿತಿ ರಚನೆ: ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್

**ಬೆಂಗಳೂರು, ಸೆ.19:** ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಮತ್ತು ಪಕ್ಷದ ನಡುವೆ ಉತ್ತಮ ಸಮನ್ವಯತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಶೀಘ್ರದಲ್ಲೇ ರಾಜಕೀಯ ವ್ಯವಹಾರಗಳ ಸಮಿತಿ ರಚಿಸಲಾಗುವುದು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದರು.



ಕೆಪಿಸಿಸಿ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇತರ ರಾಜ್ಯಗಳಲ್ಲೂ ರಾಜಕೀಯ ವ್ಯವಹಾರಗಳ ಸಮಿತಿ ಅಸ್ತಿತ್ವದಲ್ಲಿದ್ದು, ಅದೇ ಮಾದರಿಯನ್ನು ಕರ್ನಾಟಕದಲ್ಲೂ ಅಳವಡಿಸಿಕೊಳ್ಳಲಾಗುತ್ತಿದೆ. ಇತ್ತೀಚೆಗೆ ರಾಜ್ಯಕ್ಕೆ ಭೇಟಿ ನೀಡಿದ್ದ ಎಐಸಿಸಿ ನಾಯಕರಾದ ಕೆ.ಸಿ.ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಆದಷ್ಟು ಬೇಗ ಈ ಸಮಿತಿ ರಚಿಸುವಂತೆ ನಿರ್ದೇಶನ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಪಕ್ಷದ ಎಲ್ಲಾ ಪ್ರಮುಖ ನಾಯಕರ ಸಲಹೆ–ಸೂಚನೆಗಳನ್ನು ಪಡೆಯಲಾಗುತ್ತಿದ್ದು, ಈ ಪ್ರಕ್ರಿಯೆ ಮುಗಿದ ತಕ್ಷಣ ಸಮಿತಿ ಅಸ್ತಿತ್ವಕ್ಕೆ ಬರಲಿದೆ ಎಂದು ಸ್ಪಷ್ಟಪಡಿಸಿದರು.

ಇದೇ ವೇಳೆ, ತುಳು ಭಾಷೆಗೆ ರಾಜ್ಯದ ಎರಡನೇ ಅಧಿಕೃತ ಭಾಷಾ ಸ್ಥಾನಮಾನ ನೀಡಿರುವ ಸರ್ಕಾರದ ನಿರ್ಧಾರವನ್ನು ಅವರು ಮುಕ್ತಕಂಠದಿಂದ ಶ್ಲಾಘಿಸಿದರು. "ಇದು ಬಹುದಿನಗಳ ಬೇಡಿಕೆಯಾಗಿದ್ದು, ಇತ್ತೀಚಿನ ಸಚಿವ ಸಂಪುಟ ಸಭೆಯಲ್ಲಿ ಸರ್ಕಾರ ತೆಗೆದುಕೊಂಡಿರುವ ನಿರ್ಧಾರ ಅತ್ಯಂತ ಸ್ವಾಗತಾರ್ಹ. ಈ ವಿಚಾರದಲ್ಲಿ ಕೆಲವರು ರಾಜಕಾರಣ ಬೆರೆಸುತ್ತಿರುವುದು ಸರಿಯಲ್ಲ; ಅವರಿಗೆ ತುಳು ಮತ್ತು ಕೊಡವ ಭಾಷೆಗಳ ಐತಿಹಾಸಿಕ ಹಿನ್ನೆಲೆಯ ಅರಿವಿಲ್ಲ ಎಂದು ಕಿಡಿಕಾರಿದರು.

ತಾನು ಸಂಸದನಾಗಿದ್ದ ಅವಧಿಯಲ್ಲಿಯೇ ತುಳು ಹಾಗೂ ಕೊಡವ ಭಾಷೆಗಳನ್ನು ಸಂವಿಧಾನದ 8ನೇ ಪರಿಚ್ಛೇದಕ್ಕೆ ಸೇರಿಸುವಂತೆ ಸಂಸತ್ತಿನಲ್ಲಿ ಚರ್ಚೆ ನಡೆಸಿದ್ದಾಗಿ ಅವರು ನೆನಪಿಸಿಕೊಂಡರು. ಕರಾವಳಿ ಭಾಗದಲ್ಲಿ ಹಲವಾರು ಶ್ರೇಷ್ಠ ಸಾಹಿತಿಗಳು ಹಾಗೂ ಜ್ಞಾನಪೀಠ ಪುರಸ್ಕೃತರಿದ್ದಾರೆ. ತುಳುಭಾಷೆ ಕೇವಲ ಭಾಷೆಯಲ್ಲ, ಅದೊಂದು ಸಂಸ್ಕೃತಿ. ತುಳುವಿಗೆ ಎರಡನೇ ಭಾಷಾ ಸ್ಥಾನಮಾನ ನೀಡಿರುವುದು ಆ ಎಲ್ಲಾ ಮಹನೀಯರಿಗೆ ನೀಡಿದ ದೊಡ್ಡ ಗೌರವವಾಗಿದೆ ಎಂದು ಬಿ.ಕೆ. ಹರಿಪ್ರಸಾದ್ ಬಣ್ಣಿಸಿದರು.

# ಅಭಿವೃದ್ಧಿ ಪ್ರಯೋಗಶಾಲೆಯಾಗಿ ಕರಾವಳಿ ಪರಿವರ್ತನೆ: ಸಚಿವ ಪ್ರಿಯಾಂಕ್ ಖರ್ಗೆ

**ಕಾಂಗ್ರೆಸ್ ಅಭಿವೃದ್ಧಿ ಕೆಲಸಗಳು ಬಿಜೆಪಿವಯರಿಗೆ ಮೂಗಿಗೆ ತುಪ್ಪ ಸವರಿದಂತೆ ಕಾಣುತ್ತಿದೆ ಎಂದು ತಿರುಗೇಟು**



**ಬೆಂಗಳೂರು, ಸೆ.19:** ಕರಾವಳಿಗರ ಕೈಗೆ ರಕ್ತ ಸವರುತ್ತಿದ್ದ ಬಿಜೆಪಿಗೆ ಕಾಂಗ್ರೆಸ್ ಅಭಿವೃದ್ಧಿ ಕೆಲಸಗಳು ಮೂಗಿಗೆ ತುಪ್ಪ ಸವರಿದಂತೆ ಕಾಣುತ್ತಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ. ಮಂಗಳೂರು ಸಂಪುಟ ಸಭೆ ಬಗ್ಗೆ "ಮೂಗಿಗೆ ತುಪ್ಪ ಸವರುವ ಕ್ಯಾಬಿನೆಟ್" ಎಂಬ ಬಿಜೆಪಿ ಆರೋಪದ ವಿರುದ್ಧ ವಾಗ್ದಾಳಿ ನಡೆಸಿದರು.

ಕರಾವಳಿಗರ ಕೈಗೆ ರಕ್ತ ಸವರುವುದನ್ನೇ ಕೆಲಸವನ್ನಾಗಿ ಮಾಡಿಕೊಂಡಿದ್ದ ಬಿಜೆಪಿಗೆ ನಮ್ಮ ಅಭಿವೃದ್ಧಿಪರ ನಿಲುವುಗಳನ್ನು ನೋಡಿ ತಳಮಳ ಶುರುವಾಗಿದೆ ಎಂದು ಕಿಡಿಕಾರಿದರು.ಬಿಜೆಪಿ ಕರಾವಳಿಯನ್ನು ಕೋಮುವಾದದ ಪ್ರಯೋಗಶಾಲೆಯನ್ನಾಗಿ ಮಾಡಿಕೊಂಡಿತ್ತು, ನಾವು ಅಭಿವೃದ್ಧಿಯ ಪ್ರಯೋಗಶಾಲೆಯಾಗಿ ಪರಿವರ್ತಿಸುತ್ತಿದ್ದೇವೆ. ಬಿಜೆಪಿ ಕರಾವಳಿಯನ್ನು ಕೇವಲ ಮತಬ್ಯಾಂಕಿನ ಪ್ರದೇಶವಾಗಿ ಮಾತ್ರ ಕಾಣುತ್ತದೆ, ನಾವು ಕರಾವಳಿಯಲ್ಲಿ ಪ್ರಗತಿಯ ಸಾಧ್ಯತೆಗಳನ್ನು ಕಾಣುತ್ತಿದ್ದೇವೆ ಎಂದರು.

ಬಿಜೆಪಿಗರು ಕರಾವಳಿಗೆ ಕಾಲಿಡುತ್ತಿದ್ದಿದ್ದು ಹೊಡಿ, ಬಡಿ ಎಂಬ ಪ್ರಚೋದನೆಯ ಭಾಷಣ ಕುಟ್ಟುವುದಕ್ಕೆ ಮಾತ್ರವಾಗಿತ್ತು, ನಾವು ಕರಾವಳಿಗರ ಆತ್ಮಗೌರವವನ್ನು ಗೌರವಿಸಲು ಕಾಲಿಟ್ಟಿದ್ದೇವೆ. ಬಿಜೆಪಿ ಕರಾವಳಿಯಲ್ಲಿ ಕೋಮುಕಲಹದ ಚರ್ಚೆಗಳನ್ನು ಮಾತ್ರ ಹುಟ್ಟುಹಾಕುತ್ತಿತ್ತು, ನಾವು ಡೇಟಾ ಸೆಂಟರ್, ವಾಟರ್ ಮೆಟ್ರೋ, ಪ್ರವಾಸೋದ್ಯಮ, ಮರೈನ್ ಬಯೋಟೆಕ್, ಮಾಹಿತಿ ತಂತ್ರಜ್ಞಾನಗಳಂತಹ ಪ್ರಗತಿಪರ ವಿಷಯಗಳ ಚರ್ಚೆ ಹುಟ್ಟುಹಾಕಿದ್ದೇವೆ.

ದಕ್ಷಿಣ ಕನ್ನಡದ ಜನರ ಬೇಡಿಕೆಗಳನ್ನು ಕೇಳಿಸಿಕೊಳ್ಳುವ ಕೆಲಸ ಬಿಜೆಪಿಗರು ಮಾಡಿರಲಿಲ್ಲ, ತುಳುವನ್ನು ಎರಡನೇ ಅಧಿಕೃತ ಭಾಷೆಯನ್ನಾಗಿ ಘೋಷಿಸಿದ್ದು ನಮ್ಮ ಸರ್ಕಾರ ಎಂದು ಸರ್ಕಾರದ ನಡೆಯನ್ನು ಒತ್ತಿಹೇಳಿದರು. ಕೋಮು ಪ್ರಚೋದನೆ ಮತ್ತು ರಕ್ತ ಕಣ್ಣೀರು ಇವೆರಡನ್ನೂ ಹೊರತುಪಡಿಸಿದರೆ ಕರಾವಳಿಗೆ ಬಿಜೆಪಿ ಕೊಟ್ಟ ಕೊಡುಗೆ ಶೂನ್ಯ. ಕರಾವಳಿಯ 3 ಜಿಲ್ಲೆಗಳಿಗೆ 32,611 ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳ ಘೋಷಣೆ ಐತಿಹಾಸಿಕವಾದುದು, ಕರಾವಳಿಯನ್ನು ಮತಬ್ಯಾಂಕ್ ಮಾಡಿಕೊಂಡಿದ್ದ ಬಿಜೆಪಿಗೆ ಈ ಅಭಿವೃದ್ಧಿಪರ ನಿಲುವು ತಳೆಯುವುದಕ್ಕೆ ಸಾಧ್ಯವಾಗಲಿಲ್ಲ ಏಕೆ ಎಂದು ಪ್ರಶ್ನಿಸಿದರು.

ಜನತೆ ಕೋಮು ವಿಷಯಗಳನ್ನು ಬಿಟ್ಟು ಪ್ರಗತಿಯ ವಿಷಯಗಳತ್ತ ಚಿಂತನೆಗಳನ್ನು ಆರಂಭಿಸಿರುವುದೇ ಬಿಜೆಪಿಗೆ ಅಸ್ತಿತ್ವದ ಭಯ ಕಾಡಲು ಶುರುವಾಗಿದೆ ಎಂದು ಬಿಜೆಪಿ ನಾಯಕರ ವಿರುದ್ಧ ಕಿಡಿಕಾರಿದರು. ಕರಾವಳಿಯಲ್ಲಿ ಮೊದಲ ಬಾರಿಗೆ ಸಚಿವ ಸಂಪುಟ ಸಭೆ ನಡೆದಿದೆ. ಈ ಹಿನ್ನೆಲೆಯಲ್ಲಿ ಬಿಜೆಪಿ, ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಯುತ್ತಿದೆ. ಈ ಹಿನ್ನೆಲೆಯಲ್ಲಿ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# 20ನೇ ಉದ್ಯೋಗ ಮೇಳ: 51 ಸಾವಿರಕ್ಕೂ ಅಧಿಕ ಯುವಕರಿಗೆ ನೇಮಕಾತಿ ಪತ್ರ ವಿತರಿಸಿದ ಮೋದಿ

**ನವದೆಹಲಿ, ಸೆ.19:** ಕೇಂದ್ರ ಸರ್ಕಾರದ 20ನೇ ರೋಜ್ಗಾರ್ ಮೇಳದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ 51 ಸಾವಿರಕ್ಕೂ ಅಧಿಕ ಹೊಸದಾಗಿ ಆಯ್ಕೆಯಾದ ಯುವಕರಿಗೆ ನೇಮಕಾತಿ ಪತ್ರಗಳನ್ನು ವರ್ಚುವಲ್ ಮೂಲಕ ವಿತರಿಸಿದರು. ದೇಶದಾದ್ಯಂತ 45 ಸ್ಥಳಗಳಲ್ಲಿ ಏಕಕಾಲದಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿತ್ತು.

ಹೊಸದಾಗಿ ನೇಮಕಗೊಂಡ ಯುವಕರು ಕೇಂದ್ರ ಸರ್ಕಾರದ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳ ಸೇವೆಗೆ ಸೇರ್ಪಡೆಯಾಗಲಿದ್ದಾರೆ. ಕಂದಾಯ ಇಲಾಖೆ, ರೈಲ್ವೆ ಸಚಿವಾಲಯ, ಗೃಹ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಹಣಕಾಸು ಸೇವೆಗಳ ಇಲಾಖೆ ಹಾಗೂ ರಕ್ಷಣಾ ಸಚಿವಾಲಯ ಸೇರಿದಂತೆ ಹಲವು ಇಲಾಖೆಗಳು ಇದರಲ್ಲಿ ಸೇರಿವೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಭಾರತವು ವಿವಿಧ ದೇಶಗಳೊಂದಿಗೆ ಮಾಡಿಕೊಂಡಿರುವ ಸುಮಾರು 40 ಮುಕ್ತ ವ್ಯಾಪಾರ ಒಪ್ಪಂದಗಳು ಯುವಕರಿಗೆ ಹೊಸ ಉದ್ಯೋಗ ಮತ್ತು ವೃತ್ತಿ ಅವಕಾಶಗಳನ್ನು ತೆರೆದಿವೆ ಎಂದು ಹೇಳಿದರು. ಇಂತಹ ಒಪ್ಪಂದಗಳಿಂದ ಉದ್ಯಮಿಗಳಿಗೆ ಹೊಸ ಮಾರುಕಟ್ಟೆಗಳು ಹಾಗೂ ಪಾಲುದಾರಿಕೆಗಳು ಲಭ್ಯವಾಗಲಿದ್ದು, ಯುವಕರಿಗೆ ವೃತ್ತಿಜೀವನದಲ್ಲಿ ಹೊಸ ಸಾಧ್ಯತೆಗಳು ಸೃಷ್ಟಿಯಾಗಲಿವೆ ಎಂದರು.

ಭಾರತದ ಯುವಶಕ್ತಿಯ ಮತ್ತೊಂದು ಪ್ರಮುಖ ಉದಾಹರಣೆ ದೇಶದ ಸ್ಟಾರ್ಟ್‌ಅಪ್ ವ್ಯವಸ್ಥೆ ಎಂದು ಮೋದಿ ಹೇಳಿದರು. ಭಾರತವು ವಿಶ್ವದ ಮೂರನೇ ಅತಿದೊಡ್ಡ ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಯನ್ನು ಹೊಂದಿದ್ದು, ಗುರುತಿಸಲ್ಪಟ್ಟ ಸ್ಟಾರ್ಟ್‌ಅಪ್‌ಗಳಲ್ಲಿ ಅರ್ಧದಷ್ಟು ಹಂತ–2 ಮತ್ತು ಹಂತ–3 ನಗರಗಳಲ್ಲಿವೆ ಎಂದು ತಿಳಿಸಿದರು.

2047ರ ವೇಳೆಗೆ ಅಭಿವೃದ್ಧಿ ಹೊಂದಿದ ಭಾರತ ನಿರ್ಮಾಣ ಮಾಡುವ ಗುರಿಯಲ್ಲಿ ಹೊಸದಾಗಿ ಸರ್ಕಾರಿ ಸೇವೆಗೆ ಸೇರ್ಪಡೆಯಾಗುತ್ತಿರುವ ಯುವಕರ ಪಾತ್ರ ಮಹತ್ವದ್ದಾಗಿದೆ ಎಂದು ಮೋದಿ ಹೇಳಿದರು. ಸರ್ಕಾರದಲ್ಲಿ ಕೆಲಸ ಮಾಡುವಾಗ ಆತ್ಮನಿರ್ಭರ ಮತ್ತು ಅಭಿವೃದ್ಧಿ ಹೊಂದಿದ ಭಾರತದ ಗುರಿಯನ್ನು ಬಲಪಡಿಸುವ ರೀತಿಯಲ್ಲಿ ಪ್ರತಿಯೊಂದು ನಿರ್ಧಾರ ಕೈಗೊಳ್ಳಬೇಕು ಎಂದು ಕರೆ ನೀಡಿದರು. ಸಾರ್ವಜನಿಕ ಸೇವೆಯಲ್ಲಿ ನಾಗರಿಕರೇ ಪ್ರಮುಖರು ಎಂಬ ಮನೋಭಾವ ಮಾರ್ಗದರ್ಶಿಯಾಗಬೇಕು ಎಂದರು.

ಯುವಕರ ಕೌಶಲ್ಯಾಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳನ್ನೂ ಮೋದಿ ಉಲ್ಲೇಖಿಸಿದರು. ರಾಷ್ಟ್ರೀಯ ಶಿಕ್ಷಣ ನೀತಿ, ಸ್ಕಿಲ್ ಇಂಡಿಯಾ, ಪ್ರಧಾನಮಂತ್ರಿ ಕೌಶಲ ವಿಕಾಸ ಯೋಜನೆ ಹಾಗೂ ಅಪ್ರೆಂಟಿಸ್‌ಶಿಪ್ ಉತ್ತೇಜನದಂತಹ ಕಾರ್ಯಕ್ರಮಗಳ ಮೂಲಕ ಬದಲಾಗುತ್ತಿರುವ ಆರ್ಥಿಕತೆಯ ಅಗತ್ಯಗಳಿಗೆ ಅನುಗುಣವಾಗಿ ಯುವಕರನ್ನು ಸಿದ್ಧಪಡಿಸಲಾಗುತ್ತಿದೆ ಎಂದು ಹೇಳಿದರು. 20ನೇ ರೋಜ್ಗಾರ್ ಮೇಳದೊಂದಿಗೆ ಸುಮಾರು 12.75 ಲಕ್ಷ ಯುವಕರಿಗೆ ವಿವಿಧ ಕೇಂದ್ರ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ನೇಮಕಾತಿ ಪತ್ರಗಳು ದೊರೆತಂತಾಗಿದೆ.





ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ 20ನೇ ರೋಜ್ಗಾರ್ ಮೇಳದ ಸಂದರ್ಭದಲ್ಲಿ ಪ್ರಧಾನ ಮಂತ್ರಿಯವರು ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

# ಸರ್ಕಾರದಿಂದಲೇ ಹೂಳೆತ್ತುವ ಯಂತ್ರ ಖರೀದಿ ಇಲ್ಲ, ಗುತ್ತಿಗೆ ಪಡೆಯುವ ಭರವಸೆ



## ಮಂಗಳೂರಿನಲ್ಲಿ ಮೀನುಗಾರರ ಅಹವಾಲು ಆಲಿಸಿದ ಸಿಎಂ ಡಿ.ಕೆ. ಶಿವಕುಮಾರ್

**ಮಂಗಳೂರು, ಸೆ.19:** ನಗರದ ಬಂದರು ಪ್ರದೇಶಕ್ಕೆ ಶನಿವಾರ ಬೆಳಗ್ಗೆ ಭೇಟಿ ನೀಡಿದ್ದ ಸಿಎಂ ಡಿ.ಕೆ. ಶಿವಕುಮಾರ್ ಅವರು, ಮೀನುಗಾರರ ಅಹವಾಲು ಆಲಿಸಿದರು. ಇದೇ ವೇಳೆ ಕರಾವಳಿಯ ಪ್ರಮುಖ ಸಮಸ್ಯೆಯಾದ ಅಳಿವೆಬಾಗಿಲಿನಲ್ಲಿ ಹೂಳೆತ್ತುವ ಸ್ಥಿತಿಗತಿಯನ್ನು ಅವರು ಖುದ್ದಾಗಿ ಪರಿಶೀಲಿಸಿದರು. ಬೋಟ್‌ಗಳು ಹೂಳಿನಲ್ಲಿ ಸಿಲುಕಿ ಮೀನುಗಾರರು ಎದುರಿಸುತ್ತಿರುವ ಸಂಕಷ್ಟದ ಬಗ್ಗೆ ಯು.ಟಿ. ಖಾದರ್ ಹಾಗೂ ಸ್ಥಳೀಯ ಮೀನುಗಾರಿಕಾ ಸಂಘಟನೆಗಳ ಸದಸ್ಯರು ಡಿಕೆಶಿ ಅವರಿಗೆ ವಿವರಿಸಿದರು.

ಸ್ಥಳದಲ್ಲೇ ಸಮಸ್ಯೆಯ ಗಂಭೀರತೆಯನ್ನು ಅರಿತುಕೊಂಡ ಅವರು, "ಡ್ರೆಡ್ಜಿಂಗ್ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ರಾಜ್ಯ ಸರ್ಕಾರದಿಂದಲೇ ಸ್ವಂತ ಡ್ರೆಡ್ಜಿಂಗ್ ಯಂತ್ರವನ್ನು ಖರೀದಿಸುವ ಅಥವಾ ಗುತ್ತಿಗೆ ಆಧಾರದ ಮೇಲೆ ಪಡೆಯುವ ಕುರಿತು ಸದ್ಯದಲ್ಲೇ ನಿರ್ಧಾರ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಹಿಂದೆ ಸರ್ಕಾರದ ಬಳಿ ಡ್ರೆಡ್ಜರ್ ಇತ್ತಾದರೂ, ಈಗ ಅದು ಲಭ್ಯವಿಲ್ಲ. ಪ್ರಸ್ತುತ ಬಂದರಿನಲ್ಲಿ 200 ಬೋಟ್‌ಗಳಿಗೆ ಮಾತ್ರ ಡಾಕ್ ವ್ಯವಸ್ಥೆಯಿದೆ. ಫಲ್ಗುಣಿ, ನೇತ್ರಾವತಿ ನದಿ ಹಾಗೂ ಅರಬ್ಬಿ ಸಮುದ್ರ ಸೇರುವ ತ್ರಿವೇಣಿ ಸಂಗಮ ಜಾಗದಲ್ಲಿ ಹೊಸ ಡಾಕ್ ನಿರ್ಮಿಸಿದರೆ ಹೆಚ್ಚಿನ ಬೋಟ್‌ಗಳ ನಿಲ್ದಾಣಕ್ಕೆ ಅನುಕೂಲವಾಗುತ್ತದೆ. ಆದರೆ ಕಳೆದ 25 ವರ್ಷಗಳಿಂದ ಇಲ್ಲಿ ಹೂಳೆತ್ತುವ (ಡ್ರೆಡ್ಜಿಂಗ್) ಕಾರ್ಯ ನಡೆದಿಲ್ಲ ಎಂದು ಮೀನುಗಾರರ ಸಂಘದ ಮಾಜಿ ಅಧ್ಯಕ್ಷ ಚೇತನ್ ಬೆಂಗ್ರೆ ಹಾಗೂ ಮೋಹನ್ ಬೆಂಗ್ರೆ ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಇದಕ್ಕೆ ಸ್ಪಂದಿಸಿದ ಅಧಿಕಾರಿಗಳು, ಬಂದರಿನ ತಟ ಪ್ರದೇಶದಲ್ಲಿ ಮರಳು ತುಂಬಿಕೊಂಡಿದ್ದು, ಆಳವಾದ ಜಾಗಗಳನ್ನು ಗುರುತಿಸಿ 'ಚಾನಲ್ ಮಾರ್ಕಿಂಗ್ ಬಾಯ್ಸ್' ಹಾಕಿದರೆ ಬೋಟ್‌ಗಳ ಸುಗಮ ಸಂಚಾರಕ್ಕೆ ನೆರವಾಗುತ್ತದೆ ಎಂದು ವಿವರಿಸಿದರು. ಇಡೀ ಸ್ಥಿತಿಯನ್ನು ಆಲಿಸಿದ ಬಳಿಕ ತಕ್ಷಣವೇ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.

## ಹುಬ್ಬಳ್ಳಿಯಲ್ಲಿ ಜೆಜಿಎಂಎಂಎಂ ಕಾಲೇಜು, ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರ ಲೋಕಾರ್ಪಣೆ

# ಶಿಕ್ಷಣ, ವೈದ್ಯ ಕ್ಷೇತ್ರಕ್ಕೆ ಕೆಎಲ್‌ಇ ಸಂಸ್ಥೆಯ ಕೊಡುಗೆ ಅನನ್ಯ: ಜೋಶಿ ಪ್ರಶಂಸೆ



ಉದ್ಘಾಟನಾ ಸಮಾರಂಭದಲ್ಲಿ ಮಾಜಿ ಸಿಎಂ ಹಾಗೂ ಸಂಸದರಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ, ಶಾಸಕ ಅರವಿಂದ ಬೆಲ್ಲದ, ಮಹೇಶ ಟೆಂಗಿನಕಾಯಿ, ಎಂ.ಆರ್. ಪಾಟೀಲ ಹಾಗೂ ಸಂಸದ, ಶಾಸಕರು ಮತ್ತು ಕೆ. ಎಲ್.ಇ. ಸಂಸ್ಥೆ ಕಾರ್ಯಾಧ್ಯಕ್ಷ ಡಾ.ಪ್ರಭಾಕರ್ ಕೋರೆ, ಅಧ್ಯಕ್ಷ ಮಹಾಂತೇಶ ಕೌಜಲಗಿ, ಅಮಿತ್ ಕೋರೆ ಸೇರಿದಂತೆ ಗಣ್ಯರು ಹಾಗೂ ಕೆ.ಎಲ್.ಇ. ಸಂಸ್ಥೆ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

**ಬೆಂಗಳೂರು ಸೆ.19:** ಪ್ರತಿಷ್ಠಿತ ಕೆಎಲ್‌ಇ ಸಂಸ್ಥೆ ಹುಬ್ಬಳ್ಳಿಯಲ್ಲಿ ನಿರ್ಮಾಣ ಮಾಡಿರುವ ಜೆಜಿಎಂಎಂಎಂ ಕಾಲೇಜ್ ಹಾಗೂ ಕೆಎಲ್‌ಇ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರವನ್ನು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಶನಿವಾರ ಉದ್ಘಾಟಿಸಿದರು.

ಕೆಎಲ್‌ಇ ಸಂಸ್ಥೆ ಹುಬ್ಬಳ್ಳಿಯ 50 ಎಕರೆ ವಿಶಾಲ ಪ್ರದೇಶದಲ್ಲಿ ನಿರ್ಮಿಸಿದ ಜಗದ್ಗುರು ಗಂಗಾಧರ ಮಹಾಸ್ವಾಮಿಗಳು ಮೂರು ಸಾವಿರಮಠ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರದ ಉದ್ಘಾಟನೆಗೆ ಆಗಮಿಸಿದ್ದ ಕೇಂದ್ರ ಗೃಹ ಸಚಿವರಿಗೆ ದಿಢೀರ್ ಅನಾರೋಗ್ಯ ಉಂಟಾಗಿದ್ದರಿಂದ ಉದ್ಘಾಟನೆ ಭಾಗ್ಯ ತವರಿನವರೇ ಆದ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಅವರದ್ದಾಯಿತು.

ಮೂರುಸಾವಿರ ಮಠದ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ ದಿವ್ಯ ಸಾನಿಧ್ಯದಲ್ಲಿ ನೂತನ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯನ್ನು ಜೋಶಿ ಅವರು ಲೋಕಾರ್ಪಣೆ ಗೊಳಿಸಿದರು.

ನಾಡಿನ ಪ್ರತಿಷ್ಠಿತ ಕೆಎಲ್‌ಇ ಸಂಸ್ಥೆ ಪ್ರಭಾಕರ ಕೋರೆ ಅವರ ಸಾರಥ್ಯದಲ್ಲಿ ಉತ್ತರ ಕರ್ನಾಟಕದ ಅಭಿವೃದ್ಧಿಯಲ್ಲಿ ಮಹತ್ತರ ಪಾತ್ರ ವಹಿಸಿದ್ದು, ಈ ಭಾಗದ ನಿರುದ್ಯೋಗ, ಶಿಕ್ಷಣ, ಆರ್ಥಿಕ, ಆರೋಗ್ಯ, ವೈದ್ಯಕೀಯ ವಲಯಕ್ಕೆ ವಿಶಿಷ್ಟ ಕೊಡುಗೆ ನೀಡುತ್ತಲೇ ಬಂದಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಪ್ರಶಂಸೆ ವ್ಯಕ್ತಪಡಿಸಿದರು.

ಹುಬ್ಬಳ್ಳಿಯಲ್ಲಿ 50 ಎಕರೆ ವಿಶಾಲ ಪ್ರದೇಶ, 30 ಲಕ್ಷ ಚದರ ಅಡಿ ವಿಸ್ತೀರ್ಣದಲ್ಲಿ ತಲೆ ಎತ್ತಿರುವ ಈ ನೂತನ ಮೆಡಿಕಲ್ ಕಾಲೇಜ್, ಆಸ್ಪತ್ರೆ 700 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಗೊಂಡಿದೆ. ಈ ವೈದ್ಯಕೀಯ ಸಂಕೀರ್ಣವು 1,200 ಹಾಸಿಗೆಗಳ ಬೃಹತ್ ಆರೋಗ್ಯ ಕೇಂದ್ರವಾಗಿ ಸುಸಜ್ಜಿತ ಬೋಧನಾ ವ್ಯವಸ್ಥೆ, ಸಂಶೋಧನೆ ಮತ್ತು ಆಸ್ಪತ್ರೆಯನ್ನು ಒಳಗೊಂಡಿದೆ ಎಂದರು.

ಸಮಗ್ರ ವೈದ್ಯಕೀಯ ಶೈಕ್ಷಣಿಕ ಕೇಂದ್ರ: ವಾಣಿಜ್ಯ ನಗರಿಯಲ್ಲಿ ಆರಂಭಗೊಂಡ ಈ JGMMM ಕಾಲೇಜು ವೈದ್ಯಕೀಯ ಶಿಕ್ಷಣ, ಅತ್ಯಾಧುನಿಕ ಚಿಕಿತ್ಸೆ, ಸಂಶೋಧನೆ, ತಂತ್ರಜ್ಞಾನ ಮತ್ತು ಸಮುದಾಯ ಸೇವೆಗಳನ್ನು ಒದಗಿಸುವ ಸಮಗ್ರ ಶೈಕ್ಷಣಿಕ–ವೈದ್ಯಕೀಯ ಕೇಂದ್ರವಾಗಿದೆ. ಬಡ ಮತ್ತು ಮಧ್ಯಮ ವರ್ಗದವರಿಗೆ ಅತ್ಯುತ್ತಮ ಆರೋಗ್ಯ ಸೇವೆ–ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಪ್ರಲ್ಹಾದ್ ಜೋಶಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಪ್ರತಿಯೊಬ್ಬರಿಗೂ ಸುಲಭವಾಗಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸೇವೆ ದೊರೆಯಬೇಕೆಂಬ ಸಂಕಲ್ಪದೊಂದಿಗೆ ಈ ಕೇಂದ್ರ ಕಾರ್ಯ ನಿರ್ವಹಿಸಲಿದೆ ಎಂದರು.



ಆರೋಗ್ಯ ಚೇತರಿಕೆ ನಂತರ ಕೇಂದ್ರ ಸಚಿವ ಅಮಿತ್ ಶಾ ಕೆಎಲ್‌ಇ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರವನ್ನು ಉದ್ಘಾಟಿಸಿದರು. ಸಂಸದರಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಮಾಜಿ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಅರವಿಂದ ಬೆಲ್ಲದ, ಮಹೇಶ ಟೆಂಗಿನಕಾಯಿ, ಎಂ.ಆರ್. ಪಾಟೀಲ ಹಾಗೂ ಸಂಸದ, ಶಾಸಕರು ಮತ್ತು ಕೆ. ಎಲ್.ಇ. ಸಂಸ್ಥೆ ಕಾರ್ಯಾಧ್ಯಕ್ಷ ಡಾ.ಪ್ರಭಾಕರ್ ಕೋರೆ, ಅಧ್ಯಕ್ಷ ಮಹಾಂತೇಶ ಕೌಜಲಗಿ, ಅಮಿತ್ ಕೋರೆ ಸೇರಿದಂತೆ ಗಣ್ಯರು ಹಾಗೂ ಕೆ.ಎಲ್.ಇ. ಸಂಸ್ಥೆ ಪದಾಧಿಕಾರಿಗಳು ಹಾಜರಿದ್ದರು.

# ಅಭಿವೃದ್ಧಿ, ಜನರ ಸಮಸ್ಯೆಗೆ ಪರಿಹಾರ, ರೈತರ ಹಿತ ಕಾಯವುದೇ ಸರ್ಕಾರದ ಆದ್ಯತೆ: ಡಿಸಿಎಂ ಡಾ.ಜಿ.ಪರಮೇಶ್ವರ್



**ಬೆಂಗಳೂರು, ಸೆ.19:** ರಾಜ್ಯದ ಅಭಿವೃದ್ಧಿ, ಜನರ ಸಮಸ್ಯೆಗಳಿಗೆ ಪರಿಹಾರ ಹಾಗೂ ಬರದಿಂದ ಸಂಕಷ್ಟಕ್ಕೊಳಗಾಗಿರುವ ರೈತರ ಹಿತವೇ ಸರ್ಕಾರದ ಮೊದಲ ಆದ್ಯತೆಯಾಗಿದೆ. ವಿಪಕ್ಷದವರು ಪ್ರತಿಯೊಂದು ವಿಷಯವನ್ನೂ ರಾಜಕೀಯ ದೃಷ್ಟಿಯಿಂದ ನೋಡುವುದು ಸರಿಯಲ್ಲ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಎದುರಾಗಿರುವ ಬರ ಪರಿಸ್ಥಿತಿಯ ಕುರಿತು ಸಮಗ್ರವಾಗಿ ಚರ್ಚಿಸಿ, ವಿರೋಧ ಪಕ್ಷಗಳನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ರೈತರನ್ನು ಸಂಕಷ್ಟದಿಂದ ಹೊರತರುವ ನಿಟ್ಟಿನಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ಇದರ ಬಗ್ಗೆ ಸದನದಲ್ಲಿ ಸಮಗ್ರ ಚರ್ಚೆಯಾಗಬೇಕು. ಬರ ಪರಿಹಾರಕ್ಕೆ ಯಾವ ಕ್ರಮಗಳನ್ನು ಕೈಗೊಳ್ಳಬೇಕು, ಕೇಂದ್ರ ಸರ್ಕಾರದ ಯಾವ ರೀತಿ ನೆರವು ಕೇಳಬೇಕು ಎಂಬುದರ ಕುರಿತು ಒಗ್ಗಟ್ಟಿನಿಂದ ಚರ್ಚಿಸಬೇಕಿದೆ. ಇದೇ ಉದ್ದೇಶದಿಂದ ವಿಶೇಷ ಅಧಿವೇಶನ ಕರೆಯಲಾಗಿದೆ. ಬರ ಪರಿಸ್ಥಿತಿಯ ಜೊತೆಗೆ ಕಸ್ತೂರಿರಂಗನ್ ವರದಿಯ ಕುರಿತೂ ಚರ್ಚೆಯಾಗಲಿದೆ ಎಂದು ಹೇಳಿದರು.

ವಿರೋಧ ಪಕ್ಷಗಳು ಜನರ ಸಮಸ್ಯೆಗಳಿಗೆ ಸಂಬಂಧಿಸಿದ ವಿಷಯಗಳ ಚರ್ಚೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಭಟನೆ ನಡೆಸುವ ಹಕ್ಕು ಎಲ್ಲರಿಗೂ ಇದೆ. ಅದನ್ನು ಸರ್ಕಾರ ವಿರೋಧಿಸುವುದಿಲ್ಲ. ಆದರೆ ಪ್ರತಿಯೊಂದಕ್ಕೂ ಸಮಯ ಮತ್ತು ಸಂದರ್ಭವಿದ್ದು, ಎಲ್ಲ ವಿಷಯಗಳನ್ನೂ ರಾಜಕೀಯಕ್ಕೆ ಬಳಸಿಕೊಳ್ಳುವುದು ಸೂಕ್ತವಲ್ಲ. ಜನರು ಎಲ್ಲವನ್ನೂ ಗಮನಿಸುತ್ತಿದ್ದಾರೆ ಎಂದರು.

ಪ್ರಣಾಳಿಕೆಯ ಭರವಸೆಗಳನ್ನು ಈಡೇರಿಸುವುದು ಸರ್ಕಾರದ ಬದ್ಧತೆ: ಚುನಾವಣಾ ಪ್ರಣಾಳಿಕೆ ಸರ್ಕಾರಕ್ಕೆ ಮೂಲಗ್ರಂಥವಿದ್ದಂತೆ. ಜನರಿಗೆ ನೀಡಿರುವ ಭರವಸೆಗಳನ್ನು ಈಡೇರಿಸುವುದು ನಮ್ಮ ಜವಾಬ್ದಾರಿ. ಕಳೆದ ಮೂರು ವರ್ಷಗಳಲ್ಲಿ ಸಿದ್ದರಾಮಯ್ಯ ನೇತೃತ್ವದಲ್ಲಿ ನೀಡಿದ ಭರವಸೆಗಳನ್ನು ಈಡೇರಿಸಲಾಗಿದೆ. ಅದೇ ಬದ್ಧತೆಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಮುಂದುವರಿಸಲಾಗುತ್ತಿದೆ. ಸಿದ್ದರಾಮಯ್ಯ ಅವರ ಅನುಭವ ಮತ್ತು ಅಭಿಪ್ರಾಯಗಳನ್ನು ಪಡೆದುಕೊಂಡೇ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಸ್ಥಳೀಯ ಸಂಸ್ಥೆಗಳ ಚುನಾವಣೆಗಳನ್ನು ನಡೆಸಲಾಗುವುದು. ನಂತರ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳನ್ನೂ ಹಂತಹಂತವಾಗಿ ನಡೆಸಲಾಗುವುದು ಎಂದು ಅವರು ಇದೇ ವೇಳೆ ತಿಳಿಸಿದರು.

# ಕರಾವಳಿ–ಮಲೆನಾಡನ್ನು ಸಮಗ್ರ ಪ್ರವಾಸೋದ್ಯಮ ಹೂಡಿಕೆ ವಲಯವಾಗಿ ಹೊಸ ನೀತಿ ಅಭಿವೃದ್ಧಿ: ಸಚಿವ ಕೆ.ಜೆ.ಜಾರ್ಜ್



**ಬೆಂಗಳೂರು, ಸೆ.19:** ಕರಾವಳಿ ಮತ್ತು ಮಲೆನಾಡು ಪ್ರದೇಶಗಳನ್ನು ದೇಶದ ಪ್ರಮುಖ ಪ್ರವಾಸೋದ್ಯಮ ಹೂಡಿಕೆ ವಲಯಗಳಲ್ಲಿ ಒಂದಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಕರಾವಳಿ – ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ 2026ರಲ್ಲಿ ಹೂಡಿಕೆದಾರರಿಗೆ ವಿಶೇಷ ಪ್ರೋತ್ಸಾಹ, ಸರಳ ಅನುಮೋದನೆಯ ವ್ಯವಸ್ಥೆ ಹಾಗೂ ಖಾಸಗಿ ಬಂಡವಾಳ ಆಕರ್ಷಣೆಗೆ ಹಲವು ನೂತಹ ಹಣಕಾಸು ಮತ್ತು ಆಡಳಿತಾತ್ಮಕ ಕ್ರಮಗಳನ್ನು ಅಳವಡಿಸಲಾಗಿದೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಪಡೆದಿರುವ, ಈ ಪ್ರತ್ಯೇಕ ನೀತಿಯಲ್ಲಿ ಪ್ರವಾಸೋದ್ಯಮಕ್ಕೆ ಕೈಗಾರಿಕೆ ಮತ್ತು ಮೂಲ ಸೌಕರ್ಯ ಸ್ಥಾನಮಾನ ನೀಡುವುದು, ಹೂಡಿಕೆ ಪ್ರಕ್ರಿಯೆಯ ಆಡಳಿತಾತ್ಮಕ ಅಡೆತಡೆಗಳನ್ನು ಕಡಿಮೆ ಮಾಡುವುದು ಹಾಗೂ ಖಾಸಗಿ ಬಂಡವಾಳವನ್ನು ಹೆಚ್ಚಿನ ಪ್ರಮಾಣದಲ್ಲಿ ಆಕರ್ಷಿಸುವುದಕ್ಕೆ ಆದ್ಯತೆ ನೀಡಲಾಗಿದೆ. ಹೂಡಿಕೆದಾರರಿಗೆ ಯೋಜನೆಯ ಕಲ್ಪನೆಯಿಂದ ಅನುಮೋದನೆ ಮತ್ತು ಅನುಷ್ಠಾನದವರೆಗೆ ಮಾರ್ಗದರ್ಶನ ನೀಡಲು ಪ್ರವಾಸೋದ್ಯಮ ಹೂಡಿಕೆ ಸೌಲಭ್ಯ ಘಟಕ ಮತ್ತು ಏಕಗವಾಕ್ಷಿ ವ್ಯವಸ್ಥೆಯನ್ನು ಕಾರ್ಯಗತಗೊಳಿಸಲಾಗುತ್ತಿದೆ. ವ್ಯವಸ್ಥೆ ಹೂಡಿಕೆದಾರರಿಗೆ ವಿವಿಧ ಇಲಾಖೆಗಳಿಂದ ಅಗತ್ಯ ಅನುಮತಿಗಳನ್ನು ಪಡೆಯಲು ಸಮನ್ವಯ, ಅರ್ಜಿಗಳ ವಿಲೇವಾರಿ ಮತ್ತು ಸಮಸ್ಯೆಗಳ ಪರಿಹಾರಕ್ಕೆ ಸಹಾಯ ಮಾಡಲಿದೆ ಎಂದು ಹೇಳಿದ್ದಾರೆ.

ನೀತಿಯಲ್ಲಿ ಪ್ರವಾಸೋದ್ಯಮ ಯೋಜನೆಗಳಿಗೆ ಭೂಮಿ ಒದಗಿಸುವುದು, ಭೂಮಿ ಗುತ್ತಿಗೆ ನೀಡುವ ಮತ್ತು ಭೂ ಪರಿವರ್ತನೆ ನಿಯಮಗಳ ಸರಳೀಕರಣ, ಭೂ ಪರಿವರ್ತನೆ ಶುಲ್ಕ ಮರುಪಾವತಿ, ಆದ್ಯತಾ ಪ್ರವಾಸೋದ್ಯಮ ಯೋಜನೆಗಳಿಗೆ ಪ್ರವಾಸೋದ್ಯಮ ಹೂಡಿಕೆ ಉತ್ತೇಜನ ಪ್ರದೇಶಗಳಲ್ಲಿ ಆಸ್ತಿ ತೆರಿಗೆಯಲ್ಲಿ ವಿನಾಯಿತಿ ಸೇರಿದಂತೆ ಹಲವು ಕ್ರಮಗಳನ್ನು ಪ್ರಸ್ತಾಪಿಸಲಾಗಿದೆ. ನಿರ್ದಿಷ್ಟ ಪ್ರವಾಸೋದ್ಯಮ ಯೋಜನೆಗಳಿಗೆ ಬಡ್ಡಿ ಸಹಾಯಧನ ಹಾಗೂ ಹೆಚ್ಚುವರಿ ಬಂಡವಾಳ ಹೂಡಿಕೆ ಸಹಾಯಧನ, ಜೊತೆಗೆ ವೈದ್ಯಕೀಯ, ಶಿಕ್ಷಣ ಪ್ರವಾಸೋದ್ಯಮನಕ್ಕೆ ಬೆಂಬಲ ನೀಡುವ ಪ್ರಸ್ತಾವನೆಯೂ ಈ ನೀತಿಯಲ್ಲಿ ಅಳವಡಿಸಲಾಗಿದೆ ಎಂದಿದ್ದಾರೆ. ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಹೂಡಿಕೆದಾರರು ಹಲವು ಇಲಾಖೆಗಳಿಂದ ಪ್ರತ್ಯೇಕವಾಗಿ ಅನುಮತಿ ಪಡೆಯಬೇಕಾದ ಪದ್ಧತಿಯನ್ನು ತಪ್ಪಿಸುವುದು ನಮ್ಮ ಪ್ರಮುಖ ಗುರಿಯಾಗಿದೆ. ನೀತಿಯಲ್ಲಿ ಒದಗಿಸಿರುವ ಪ್ರೋತ್ಸಾಹಗಳನ್ನು ಸ್ಪಷ್ಟ ಮತ್ತು ಸಮಯಬದ್ಧವಾಗಿ ಅನುಷ್ಠಾನಗೊಳಿಸುವುದಕ್ಕೆ ಅಗತ್ಯ ವ್ಯವಸ್ಥೆ ರೂಪಿಸಲಾಗುವುದು ಎಂದು ಹೇಳಿದರು.

**500 ಕೋಟಿ ರೂ. ಅನುದಾನಕ್ಕೆ ಅನುಮೋದನೆ**

ಕರಾವಳಿ ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ 2026ಕ್ಕೆ 500 ಕೋಟಿ ರೂ. ಅನುದಾನ ಅನುಮೋದಿಸಲಾಗಿದೆ. ಇದಕ್ಕೆ ಸಂಬಂಧಿತ ಇಲಾಖೆಗಳು ಮತ್ತು ಸಂಸ್ಥೆಗಳ ಅನುದಾನ, ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ನೆರವು, ಸಿ.ಎಸ್.ಆರ್ ಕೊಡುಗೆಗಳು ಹಾಗೂ ಸಾರ್ವಜನಿಕ, ಖಾಸಗಿ ಸಹಭಾಗಿತ್ವದ ಮೂಲಕ ಖಾಸಗಿ ಹೂಡಿಕೆಯನ್ನು ಪೂರಕವಾಗಿ ಬಳಸಿಕೊಳ್ಳಲಾಗುವುದು. ಖಾಸಗಿ ವಲಯದ ಬಂಡವಾಳ, ಪರಿಣತಿ ಮತ್ತು ಹೊಸ ಆಲೋಚನೆಗಳನ್ನು ದೊಡ್ಡ ಪ್ರಮಾಣದಲ್ಲಿ ಆಕರ್ಷಿಸಬೇಕಾಗಿದೆ. ಹೂಡಿಕೆದಾರರಿಗೆ ಸ್ಪಷ್ಟ ನೀತಿ, ಸುಗಮ ಅನುಮೋದನೆ ಮತ್ತು ಅನುಕೂಲಕರ ವಾತಾವರಣ ಒದಗಿಸಿ, ಪ್ರವಾಸೋದ್ಯಮವನ್ನು ಈ ಪ್ರದೇಶದ ಪ್ರಮುಖ ಆರ್ಥಿಕ ಚಾಲಕವಾಗಿಸುವುದು ನಮ್ಮ ಉದ್ದೇಶವಾಗಿದೆ ಕೆ.ಜೆ. ಜಾರ್ಜ್ ಹೇಳಿದ್ದಾರೆ.

# ವಿಬಿ ಜಿ ರಾಮ್ ಜಿ ಅಡಿ ವಸತಿ ಯೋಜನೆಗೂ ಅವಕಾಶ: ಖಂಡ್ರೆ



**ಬೆಂಗಳೂರು, ಸೆ.19:** ಗ್ರಾಮೀಣ ಉದ್ಯೋಗ ಖಾತ್ರಿ ಮನ್ರೇಗಾದ ಬದಲಾದ ರೂಪ ವಿಬಿಜಿ ರಾಮ್ ಜಿಯಲ್ಲಿ ರಾಜ್ಯದ ವಸತಿ ಯೋಜನೆಗಳನ್ನು ಕೈಗೆತ್ತಿಗೊಳ್ಳಲು ಕೇಂದ್ರ ಸರ್ಕಾರ ಅವಕಾಶ ಕಲ್ಪಿಸಿದ್ದು, ರಾಜ್ಯದ ಶಿಫಾರಸಿಗೆ ಮನ್ನಣೆ ನೀಡಿದೆ ಎಂದು ಗ್ರಾಮೀಣಾಬಿ , ವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ವಿಕಾಸಸೌಧದ ತಮ್ಮ ಕಚೇರಿಯಲ್ಲಿಂದು ಉನ್ನತಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಆರ್ಥಿಕವಾಗಿ ಹಿಂದುಳಿದ ಇತಹ ಹಿಂದುಳಿದ ವರ್ಗದ ಬಡವರಿಗೆ ಸಮರ್ಪಿತವಾದ ಬಸವ ವಸತಿ ಯೋಜನೆ, ಅಲೆಮಾರಿ ಮತ್ತು ಅರೆ ಅಲೆಮಾರಿ ಕುಟುಂಬಗಳಿಗೆ ಮನೆ ನಿರ್ಮಿಸಲು ನೆರವಾಗುವ ದೇವರಾಜ ಅರಸು ವಸತಿ ಯೋಜನೆ ಮತ್ತು ಪರಿಶಿಷ್ಟ ಜಾತಿ ಮತ್ತು ವರ್ಗದ ಗ್ರಾಮೀಣ ಜನರಿಗೆ ವಸತಿ ಕಲ್ಪಿಸುವ ಡಾ. ಅಂಬೇಡ್ಕರ್ ನಿವಾಸ ಯೋಜನೆಯಡಿ ಮನೆ ನಿರ್ಮಿಸಲೂ ಈಗ ವಿಬಿಜಿ ರಾಮ್ ಜಿಯಲ್ಲಿ ಅವಕಾಶವಿದೆ ಎಂದರು.

ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಯಡಿ ಅನುಮೋದಿಸಿದ್ದ 318 ಕಾಮಗಾರಿಗಳ ಸಂಖ್ಯೆಯನ್ನು ಈಗ 375ಕ್ಕೆ ಹೆಚ್ಚಳ ಮಾಡಿದೆ. ರಾಜ್ಯ ಸರ್ಕಾರ ಶಿಫಾರಸು ಮಾಡಿದ್ದ ರಾಜ್ಯ ವಸತಿ ಯೋಜನೆ, ಸಮುದಾಯ ಕುಶಲಕರ್ಮಿಗಳ ಕೇಂದ್ರ ನಿರ್ಮಾಣ, ವೈಯಕ್ತಿಕ ಕಾಮಗಾರಿಯಡಿ ರೇಷ್ಮೆಹುಳು ಸಾಕಾಣಿಕೆ ಮನೆ (ಘಟಕ) ಹಾಗೂ ಒಂದೇ ಭೂಮಿಯಲ್ಲಿ ಮರಗಳು, ಹುಲ್ಲುಗಾವಲು (ಮೇವು) ಮತ್ತು ಜಾನುವಾರು ಸಾಕಣೆಯನ್ನು ಸಂಯೋಜಿಸಿ ಬೆಳೆಸುವ ಸಿಲ್ವಿ ಪ್ಯಾಷ್ಚರ್ ಸಹ ಸೇರಿದೆ ಎಂದರು.

ಈ ಬಗ್ಗೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಗ್ರಾಮೀಣ ಜನರಿಗೆ ಸ್ಪಷ್ಟ ಮಾಹಿತಿ ನೀಡಿ ಗ್ರಾಮೀಣ ಉದ್ಯೋಗ ಖಾತ್ರಿಯಡಿ ಹೆಚ್ಚಿನ ಮಾನವ ದಿನ ಸೃಜಿಸುವಂತೆ ಮತ್ತು ಯಾವುದೇ ಗ್ರಾಮೀಣ ಬಡ ಜನರು ಉದ್ಯೋಗ ಸಿಗದೆ ಗುಳೆ ಅಥವಾ ವಲಸೆ ಹೋಗದಂತೆ ತಡೆಯಲು ಕ್ರಮ ವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಕಾರ್ಯದರ್ಶಿ ಡಿ.ರಂದೀಪ್, ಆಯುಕ್ತೆ ಡಾ. ಅರುಂಧತಿ ಚಂದ್ರಶೇಖರ್, ಇ–ಸ್ವತ್ತು ನಿರ್ದೇಶಕ ಗಿರೀಶ್ ಬದೋಲೆ ಮತ್ತಿತರ ಅಧಿಕಾರಿಗಳು ಭಾಗಿಯಾಗಿದ್ದರು.

**ಗ್ರಾಮಠಾಣಾ ಆಸ್ತಿಗೆ ಇ–ಸ್ವತ್ತು, ನಿಯಮ ತಿದ್ದುಪಡಿ:**

ಅಕ್ಟೋಬರ್ 2ರಿಂದ ಅರ್ಜಿ ಸ್ವೀಕಾರ ಪ್ರಕ್ರಿಯೆ ಆರಂಭಿಸಿ, ನವೆಂಬರ್ ತಿಂಗಳಲ್ಲಿ 10 ಲಕ್ಷ ಗ್ರಾಮಠಾಣಾ ಆಸ್ತಿಗಳಿಗೆ ನಿಯಮಾನುಸಾರ ಇ–ಸ್ವತ್ತು ನೀಡಲು ಮತ್ತು ಅಭಿಯಾನ ನಡೆಸಲು ಅನುವಾಗುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತೆರಿಗೆ ಮತ್ತು ಶುಲ್ಕಗಳು) ನಿಯಮ 2025ಕ್ಕೆ ಅಗತ್ಯ ಮತ್ತು ಸೂಕ್ತ ತಿದ್ದುಪಡಿ ಮಾಡುವಂತೆಯೂ ಈಶ್ವರ ಖಂಡ್ರೆ ಸೂಚನೆ ನೀಡಿದರು.

# ಸಿಬ್ಬಂದಿ ಕೊರತೆ ನೀಗಿಸಲು ನೇಮಕಾತಿ ಪ್ರಕ್ರಿಯೆ ಚುರುಕು: ಸಚಿವ ಶಿವಲಿಂಗೇಗೌಡ

## ಒಳಮೀಸಲಾತಿ ಸಮಸ್ಯೆ ಇತ್ಯರ್ಥಗೊಂಡಿದ್ದು ಪೂರಕ ನಿರ್ಧಾರ ಕೈಗೊಳ್ಳುವಂತೆ ಅಬಕಾರಿ ಆಯುಕ್ತರಿಗೆ ಸೂಚನೆ



**ಮಂಗಳೂರು, ಸೆ.19:** ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸುವ ನಿಟ್ಟಿನಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಇದೀಗ ವೇಗ ನೀಡಲಾಗಿದೆ. ಒಳಮೀಸಲಾತಿ ವಿಚಾರದಿಂದಾಗಿ ನೇಮಕಾತಿ ಪ್ರಕ್ರಿಯೆ ವಿಳಂಬವಾಗಿತ್ತು. ಇದೀಗ ಒಳಮೀಸಲಾತಿ ಸಮಸ್ಯೆ ಇತ್ಯರ್ಥಗೊಂಡಿರುವ ಹಿನ್ನೆಲೆಯಲ್ಲಿ ಬಾಕಿ ಉಳಿದಿರುವ ನೇಮಕಾತಿ ಪ್ರಕ್ರಿಯೆಯನ್ನು ಚುರುಕುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಈ ಸಂಬಂಧ ಅಗತ್ಯ ಪೂರಕ ನಿರ್ಧಾರಗಳನ್ನು ಕೈಗೊಂಡು ನೇಮಕಾತಿ ಪ್ರಕ್ರಿಯೆಯನ್ನು ತ್ವರಿತಗೊಳಿಸುವಂತೆ ಅಬಕಾರಿ ಆಯುಕ್ತರಿಗೆ ಸೂಚನೆ ನೀಡಲಾಗಿದೆ ಎಂದು ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ಮಂಗಳೂರು ವಿಭಾಗ ವ್ಯಾಪ್ತಿಯ ಎಲ್ಲ ಅಬಕಾರಿ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸಿಬ್ಬಂದಿ ಕೊರತೆ ಪರಿಹರಿಸಲು ಖಾಲಿ ಇರುವ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಒಳಮೀಸಲಾತಿ ಹಿನ್ನೆಲೆ ವಿಳಂಬವಾಗಿತ್ತು. ಇದೀಗ ಒಳಮೀಸಲಾತಿ ಸಮಸ್ಯೆ ಇತ್ಯರ್ಥಗೊಂಡಿರುವುದರಿಂದ ನೇಮಕಾತಿ ಪ್ರಕ್ರಿಯಿಗೆ ವೇಗ ಒದಗಿಸಲಾಗಿದೆ. ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ ಪೂರಕ ನಿರ್ಧಾರಗಳನ್ನು ಕೈಗೊಳ್ಳುವಂತೆ ಅಬಕಾರಿ ಆಯುಕ್ತರಿಗ ಸೂಚಿಸಿದರು.

ಕೆಲವು ಕಡೆಗಳಲ್ಲಿ ನಿಗದಿತ ಸಮಯಕ್ಕಿಂತ ಮೊದಲೇ ಮದ್ಯದಂಗಡಿಗಳನ್ನು ತೆರೆಯಲಾಗುತ್ತಿದೆ. ಇದರಿಂದ ನಾಗರಿಕರಿಗೆ ತೊಂದರೆಯಾಗುತ್ತಿದೆ. ಹಾಗಾಗಿ ಸಮಯ ಪರಿಪಾಲನೆ ಮಾಡದ ಮದ್ಯದಂಗಡಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಅಬಕಾರಿ ಇಲಾಖೆಗೆ ಪ್ರತ್ಯೇಕ ಅಬಕಾರಿ ಭವನ ನಿರ್ಮಾಣ ಅಗತ್ಯವಿದ್ದು, ಅದರದ್ದೇ ಆದ ನಿರ್ದಿಷ್ಟ ವಿನ್ಯಾಸದಲ್ಲಿ ನಿರ್ಮಾಣವಾಗಬೇಕು. ಇಲಾಖೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಸುಸಜ್ಜಿತ ಸ್ವಂತ ಕಟ್ಟಡ ನಿರ್ಮಿಸುವ ನಿಟ್ಟಿನಲ್ಲಿ ಯೋಜನಾ ವರದಿಯನ್ನು ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸಿ ಎಂದು ಸಲಹೆ ನೀಡಿದರು. ಈ ಸರ್ಕಾರದ ಅವಧಿ ಮುಗಿಯುವುದರೊಳಗೆ ಎಲ್ಲ ಜಿಲ್ಲೆಗಳಲ್ಲಿ ಅಬಕಾರಿ ಭವನಗಳ ಶಂಕುಸ್ಥಾಪನೆ ನೆರವೇರಿಸುವ ಭರವಸೆ ನೀಡಿದರು.

**ಮಿಲಿಟರಿ ಕೋಟಾ ಮದ್ಯದ ದುರ್ಬಳಕೆಗೆ ಕಡಿವಾಣ ಹಾಕಿ**

ಮಿಲಿಟರಿ ಕೋಟಾದಡಿ ಸಿಗುವ ಮದ್ಯವು ದುರ್ಬಳಕೆಯಾಗುತ್ತಿರುವುದಕ್ಕೆ ಕಡಿವಾಣ ಹಾಕಬೇಕು. ಗೋವಾದಿಂದ ಕರ್ನಾಟಕಕ್ಕೆ ಬರುತ್ತಿರುವ ಅಕ್ರಮ ಮದ್ಯ ತಡೆಗೆ ಚೆಕ್ ಪೋಸ್ಟ್ ನಿರ್ಮಿಸಬೇಕು. ಕಳ್ಳಬಟ್ಟಿ ತಯಾರಿಕೆ ಹಾಗೂ ಮಾರಾಟವನ್ನು ನಿಯಂತ್ರಿಸಬೇಕು. ಈ ಸಂಬಂಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಇಲಾಖೆಗೆ ಒಳ್ಳೆಯ ಹೆಸರನ್ನು ತರಬೇಕು. ಈ ನಿಟ್ಟಿನಲ್ಲಿ ಇಲಾಖೆ ಸಿಬ್ಬಂದಿ ಪರ ನಾನಿದ್ದೇನೆ ಎಂದು ಕೆ.ಎಂ.ಶಿವಲಿಂಗೇಗೌಡ ಅಭಯ ನೀಡಿದರು. ಸಭೆಯಲ್ಲಿ ಅಬಕಾರಿ ಆಯುಕ್ತ ಆರ್. ವೆಂಕಟೇಶ್ ಕುಮಾರ್ ಸೇರಿದಂತೆ ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ ಹಾಗೂ ಕೊಡಗು ಜಿಲ್ಲೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಭಾರತದ ಇಂಗಾಲ ಹೊರಸೂಸುವಿಕೆ ಜಾಗತಿಕ ಸರಾಸರಿಯ ಅರ್ಧಕ್ಕಿಂತಲೂ ಕಡಿಮೆ: ಮೋದಿ

**ನವದೆಹಲಿ,ಸೆ.19:** ಅಭಿವೃದ್ಧಿಶೀಲ ರಾಷ್ಟ್ರಗಳ ಮೇಲೆ ಇಂಗಾಲ ಹೊರಸೂಸುವಿಕೆಯ ಹೊಣೆಗಾರಿಕೆಯನ್ನು ಅನ್ಯಾಯವಾಗಿ ಹೊರಿಸಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಭಾರತದ ತಲಾ ಇಂಗಾಲ ಹೊರಸೂಸುವಿಕೆ ಜಾಗತಿಕ ಸರಾಸರಿಯ ಅರ್ಧಕ್ಕಿಂತಲೂ ಕಡಿಮೆ ಇದೆ ಎಂದು ಅವರು ತಿಳಿಸಿದ್ದಾರೆ.

ನವದೆಹಲಿಯ ವಿಜ್ಞಾನ ಭವನದಲ್ಲಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಆಯೋಜಿಸಿದ್ದ ದಿ ಫ್ಯೂಚರ್ ಆಫ್ ಎನ್ವಿರಾನ್ಮೆಂಟ್ ಅಂಡ್ ಕ್ಲೈಮೇಟ್ ಡೈನಾಮಿಕ್ಸ್ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಬನ್ ಹೊರಸೂಸುವಿಕೆಯ ಹೊಣೆಗಾರಿಕೆಯನ್ನು ಅಭಿವೃದ್ಧಿಶೀಲ ರಾಷ್ಟ್ರಗಳ ಮೇಲೆ ಹೆಚ್ಚಾಗಿ ಹೊರಿಸಲಾಗುತ್ತಿದೆ. ಆದರೆ ಐತಿಹಾಸಿಕ ವಾಸ್ತವವನ್ನು ಗಮನಿಸಿದರೆ, ಇಂದಿಗೂ ಭಾರತದ ತಲಾ ಕಾರ್ಬನ್ ಹೊರಸೂಸುವಿಕೆ ಜಾಗತಿಕ ಸರಾಸರಿಯ ಅರ್ಧಕ್ಕಿಂತ ಕಡಿಮೆ ಇದೆ ಎಂದು ಮೋದಿ ಹೇಳಿದರು. ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ತಲಾ ಹೊರಸೂಸುವಿಕೆ ಭಾರತದ ಮಟ್ಟಕ್ಕಿಂತ ಹಲವು ಪಟ್ಟು ಹೆಚ್ಚಾಗಿದೆ ಎಂಬ ಅಂಶವನ್ನೂ ಅವರು ಪ್ರಸ್ತಾಪಿಸಿದರು.

ಅಂತರರಾಷ್ಟ್ರೀಯ ಇಂಧನ ಸಂಸ್ಥೆಯ 2023ರ ಅಂಕಿಅಂಶಗಳ ಪ್ರಕಾರ, ಭಾರತದ ತಲಾ CO ಹೊರಸೂಸುವಿಕೆ ಸುಮಾರು 2 ಟನ್‌ಗಳಷ್ಟಿದ್ದು, ಜಾಗತಿಕ ಸರಾಸರಿಯ ಅರ್ಧಕ್ಕಿಂತ ಕಡಿಮೆ ಇದೆ. ಇದೇ ವೇಳೆ ಅಭಿವೃದ್ಧಿ ಹೊಂದಿದ ಆರ್ಥಿಕತೆಗಳ ತಲಾ ಹೊರಸೂಸುವಿಕೆ ಜಾಗತಿಕ ಸರಾಸರಿಗಿಂತ ಸುಮಾರು ಶೇ.70ರಷ್ಟು ಹೆಚ್ಚಿತ್ತು.

ಕಳೆದ 12 ವರ್ಷಗಳಲ್ಲಿ ಪರಿಸರಕ್ಕೆ ಸಂಬಂಧಿಸಿದ ವಿವಿಧ ಕ್ಷೇತ್ರಗಳಲ್ಲಿ ಭಾರತ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಪ್ರಧಾನಿ ಹೇಳಿದರು. ವಿಶೇಷವಾಗಿ ನವೀಕರಿಸಬಹುದಾದ ಇಂಧನ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಪರಿಸರ ಸಂರಕ್ಷಣೆಯಲ್ಲಿ ಇದು ಪ್ರಮುಖ ಪಾತ್ರವಹಿಸಿದೆ ಎಂದು ಅವರು ತಿಳಿಸಿದರು.

ಸೌರಶಕ್ತಿ ಸೇರಿದಂತೆ ಪಳೆಯುಳಿಕೆ ಇಂಧನವಲ್ಲದ ಇಂಧನ ಮೂಲಗಳ ಸಾಮರ್ಥ್ಯ ವಿಸ್ತರಣೆಯಲ್ಲಿ ಭಾರತದ ಕ್ರಮಗಳು ಜಾಗತಿಕವಾಗಿ ಗಮನ ಸೆಳೆದಿವೆ ಎಂದು ಮೋದಿ ಹೇಳಿದರು. ಪರಿಸರ ಸಂರಕ್ಷಣೆ ಮತ್ತು ಅಭಿವೃದ್ಧಿಯ ನಡುವೆ ಸಮತೋಲನ ಸಾಧಿಸುವುದು ಭಾರತದ ನೀತಿಯ ಪ್ರಮುಖ ಅಂಶವಾಗಿದೆ ಎಂದು ಅವರು ಪ್ರತಿಪಾದಿಸಿದರು.

ಪ್ಯಾರಿಸ್ ಹವಾಮಾನ ಒಪ್ಪಂದದ ಅಡಿಯಲ್ಲಿ COP–21ರಲ್ಲಿ ಕೈಗೊಂಡ ಬದ್ಧತೆಗಳನ್ನು ನಿಗದಿತ ಅವಧಿಗಿಂತ ಮುಂಚಿತವಾಗಿಯೇ ಈಡೇರಿಸಿದ ಜಿ20 ರಾಷ್ಟ್ರಗಳಲ್ಲಿ ಭಾರತವೇ ಏಕೈಕ ದೇಶ ಎಂದು ಮೋದಿ ಹೇಳಿದರು. ಭಾರತದ ಪರಿಷ್ಕೃತ ರಾಷ್ಟ್ರೀಯವಾಗಿ ನಿರ್ಧರಿಸಲಾದ ಕೊಡುಗೆ ಪ್ರಕಾರ, 2030ರ ವೇಳೆಗೆ 2005ರ ಮಟ್ಟಕ್ಕೆ ಹೋಲಿಸಿದರೆ ಉಆಕಯ ಹೊರಸೂಸುವಿಕೆ ತೀವ್ರತೆಯನ್ನು ಶೇ.45ರಷ್ಟು ಕಡಿಮೆ ಮಾಡುವ ಗುರಿ ಹೊಂದಲಾಗಿದೆ. ಇದೇ ಅವಧಿಯಲ್ಲಿ ವಿದ್ಯುತ್ ಸ್ಥಾಪಿತ ಸಾಮರ್ಥ್ಯದ



ಸುಮಾರು ಶೇ.50ರಷ್ಟನ್ನು ಪಳೆಯುಳಿಕೆ ಇಂಧನವಲ್ಲದ ಮೂಲಗಳಿಂದ ಪಡೆಯುವ ಗುರಿಯನ್ನೂ ಭಾರತ ಹೊಂದಿದೆ.

**ಪರಮಾಣು ಇಂಧನ ವಿಸ್ತರಣೆಯ ಬಗ್ಗೆಯೂ ಪ್ರಸ್ತಾಪ:** ಪರಮಾಣು ವಿದ್ಯುತ್ ಉತ್ಪಾದನೆಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಭಾರತ ಮುಂದುವರಿಯುವಾಗ ಪರಿಸರ ಸಂಘಟನೆಗಳಿಂದ ಕಾನೂನು ಸವಾಲುಗಳು ಎದುರಾಗಬಹುದು ಎಂದು ಮೋದಿ ಪ್ರಸ್ತಾಪಿಸಿದರು. ಪರಿಸರದ ಹೆಸರಿನಲ್ಲಿ ಪರಮಾಣು ಇಂಧನ ಉತ್ಪಾದನೆಗೆ ವಿರೋಧ ವ್ಯಕ್ತವಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿದರು.

ಶತಮಾನಗಳಿಂದಲೇ ಪ್ರಕೃತಿ ಮತ್ತು ಪರಿಸರಕ್ಕೆ ಸಂಬಂಧಿಸಿದ ವಿಚಾರಗಳಲ್ಲಿ ಭಾರತ ಜಗತ್ತಿಗೆ ಮಾರ್ಗದರ್ಶನ ನೀಡಿದೆ ಎಂದು ಮೋದಿ ಹೇಳಿದರು. ಭಾರತದ ಸಾಂಸ್ಕೃತಿಕ ಪರಂಪರೆ ಮತ್ತು ಪ್ರಕೃತಿಯೊಂದಿಗಿನ ಸಂಬಂಧದ ಅನುಭವವನ್ನು ಆಧರಿಸಿ ಆಧುನಿಕ ಹವಾಮಾನ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ತಿಳಿಸಿದರು. ಜಾಗತಿಕ ಮಟ್ಟದಲ್ಲಿ ಹವಾಮಾನ ಬದಲಾವಣೆ ಎದುರಿಸಲು ಸಾಮೂಹಿಕ ಪ್ರಯತ್ನ ಅಗತ್ಯ ಎಂದು ಅವರು ಕರೆ ನೀಡಿದರು.

**NGT ಮೊಬೈಲ್ ಆ್ಯಪ್ ಬಿಡುಗಡೆ:** ಸಮ್ಮೇಳನದ ಸಂದರ್ಭದಲ್ಲಿ ಪ್ರಧಾನಿ ಮೋದಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯ ಮೊಬೈಲ್ ಆ್ಯಪ್ ಅನ್ನು ಬಿಡುಗಡೆ ಮಾಡಿದರು. ಪರಿಸರ ಸಂಬಂಧಿತ ನ್ಯಾಯಾಂಗ ಪ್ರಕ್ರಿಯೆಗಳು, ಮಾಹಿತಿ ಮತ್ತು ಸೇವೆಗಳಿಗೆ ಸಾರ್ವಜನಿಕರ ಪ್ರವೇಶವನ್ನು ಮತ್ತಷ್ಟು ಸುಲಭಗೊಳಿಸುವ ಉದ್ದೇಶದಿಂದ ಈ ಆ್ಯಪ್ ಪರಿಚಯಿಸಲಾಗಿದೆ.

ಎರಡು ದಿನಗಳ ಸಮ್ಮೇಳನ ಸೆಪ್ಟೆಂಬರ್ 19 ಮತ್ತು 20ರಂದು ನಡೆಯುತ್ತಿದ್ದು, ಪರಿಸರ, ಹವಾಮಾನ ಬದಲಾವಣೆ ಹಾಗೂ ಅದಕ್ಕೆ ಸಂಬಂಧಿಸಿದ ನ್ಯಾಯಾಂಗ ಮತ್ತು ಆಡಳಿತಾತ್ಮಕ ಸವಾಲುಗಳ ಕುರಿತು ನ್ಯಾಯಾಂಗ, ಸರ್ಕಾರ ಮತ್ತು ಕಾನೂನು ಕ್ಷೇತ್ರದ ಪ್ರಮುಖರು ಚರ್ಚೆ ನಡೆಸುತ್ತಿದ್ದಾರೆ. ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್, ಅಟಾರ್ನಿ ಜನರಲ್ ಆರ್. ವೆಂಕಟರಮಣಿ ಹಾಗೂ ಓಉಖ ಅಧ್ಯಕ್ಷ ನ್ಯಾಯಮೂರ್ತಿ ಪ್ರಕಾಶ್ ಶ್ರೀವಾಸ್ತವ ಸೇರಿದಂತೆ ಪ್ರಮುಖರು ಭಾಗವಹಿಸಿದ್ದರು.

## ದೆಹಲಿ ಪೊಲೀಸರು ಜನರನ್ನು ಹೆದರಿಸಲಷ್ಟೇ ಇದ್ದಾರಾ: ರಾಹುಲ್

**ನವದೆಹಲಿ, ಸೆ. 19:** ದೆಹಲಿಯಲ್ಲಿ 17 ವರ್ಷದ ಬಾಲಕಿ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಮತ್ತು ಭೀಕರ ಕೊಲೆಯನ್ನು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ತೀವ್ರವಾಗಿ ಖಂಡಿಸಿದ್ದಾರೆ. ದೇಶದ ರಾಜಧಾನಿಯಲ್ಲಿ ಮಹಿಳೆಯರ ಸುರಕ್ಷತೆಯ ಹೊಣೆ ಯಾರದ್ದು? ದೆಹಲಿ ಪೊಲೀಸರ ಕೆಲಸ ಕೇವಲ ಸಾಮಾನ್ಯ ನಾಗರಿಕರನ್ನು ಬೆದರಿಸುವುದಕ್ಕೆ ಸೀಮಿತವಾಗಿದೆಯೇ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ರಾಹುಲ್ ಗಾಂಧಿ ನೇರವಾಗಿ ಪ್ರಶ್ನಿಸಿದ್ದಾರೆ.

ಬಾಲಕಿಯ ಅಮಾನುಷ ಹತ್ಯೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ರಾಹುಲ್ ಗಾಂಧಿ, ದೆಹಲಿ ಇಂದು ಮಹಿಳೆಯರ ಪಾಲಿಗೆ ಅತ್ಯಂತ ಭಯಾನಕ ವಾತಾವರಣವನ್ನು ಸೃಷ್ಟಿಸುತ್ತಿದೆ. ಪ್ರತಿದಿನ ಇಂತಹ ಘಟನೆಗಳು ವರದಿಯಾಗುತ್ತಿರುವುದು ದುರದೃಷ್ಟಕರ. ದೇಶದ ರಾಜಧಾನಿಯಲ್ಲೇ ಇಂತಹ ಭೀಕರ ಮತ್ತು ಅಮಾನುಷ ಕೃತ್ಯ ನಡೆದಿದ್ದರೂ, ಹಲವು ದಿನಗಳ ಕಾಲ ಪೊಲೀಸರಿಗೆ ಈ ಬಗ್ಗೆ ಯಾವುದೇ ಸುಳಿವು ಸಿಗದೇ ಇರುವುದು ಗಂಭೀರ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಕಿಡಿಕಾರಿದ್ದಾರೆ.

ದೇಶದಲ್ಲಿ ಅಪರಾಧಿಗಳು ಯಾವುದೇ



ಭಯವಿಲ್ಲದೆ ಮುಕ್ತವಾಗಿ ಓಡಾಡುತ್ತಿದ್ದಾರೆ. ದೆಹಲಿ ಪೊಲೀಸರು ನೇರವಾಗಿ ಕೇಂದ್ರ ಗೃಹ ಸಚಿವಾಲಯದ ನಿಯಂತ್ರಣದಲ್ಲಿದ್ದಾರೆ. ಹೀಗಿರುವಾಗ ಮಹಿಳೆಯರ ಭದ್ರತೆಯ ಅಂತಿಮ ಹೊಣೆಯನ್ನು ಯಾರು ಹೊರಬೇಕು ಎಂದು ಅಮಿತ್ ಶಾ ಅವರನ್ನು ಪ್ರಶ್ನಿಸಿದ್ದಾರೆ. ಅಷ್ಟೇ ಅಲ್ಲದೆ, ಮಹಿಳೆಯರ ಸುರಕ್ಷತೆ ಇಲ್ಲದೆ ಭಾರತವು ಅಭಿವೃದ್ಧಿಯ ಹಾದಿಯಲ್ಲಿ ಮುಂದೆ ಸಾಗಲು ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದ್ದಾರೆ.

ಬಾಲಕಿ ಮೇಲಿನ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ಭಾಗಿಯಾಗಿರುವ ಕ್ರೂರಿಗಳನ್ನು ತಕ್ಷಣವೇ ಬಂಧಿಸಿ, ಅತ್ಯಂತ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಈ ಕ್ರಿಮಿನಲ್ ನಿರ್ಲಕ್ಷ್ಯಕ್ಕೆ ಕಾರಣ ಯಾರು ಎಂಬುದಕ್ಕೆ ಹೊಣೆಗಾರಿಕೆಯನ್ನು ತಕ್ಷಣವೇ ನಿಗದಿಪಡಿಸಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ.


ದೆಹಲಿಯ ಕುಶಕ್ ರಸ್ತೆಯ ಜೈಪಾಲ್ ರಾಣಾ ಅವರ ಜಮೀನಿನ ಬಳಿ ಸೆಪ್ಟೆಂಬರ್ 13 ರಂದು 17 ವರ್ಷದ ಬಾಲಕಿಯ ಶವ ಅತ್ಯಂತ ವಿಕೃತ ಸ್ಥಿತಿಯಲ್ಲಿ ಪತ್ತೆಯಾಗಿತ್ತು. ಬಾಲಕಿಯನ್ನು ಟೆಂಪೋ ಒಂದರಲ್ಲಿ ಕರೆದೊಯ್ದು, ಮದ್ಯಪಾನ ಮಾಡಿಸಿ, ಅತ್ಯಾಚಾರ ಎಸಗಿದ ನಂತರ ಚಾಕುವಿನಿಂದ ಇರಿದು ಕೊಲೆ ಮಾಡಿ ಶವವನ್ನು ಬಯಲು ಜಾಗದಲ್ಲಿ ಎಸೆಯಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಶವವು ಸಂಪೂರ್ಣವಾಗಿ ಕೊಳೆತುಹೋಗಿದ್ದು, ಬೀದಿ ನಾಯಿಗಳು ಕಡಿದು ಕರುಣಾಜನಕ ಸ್ಥಿತಿಯಲ್ಲಿದ್ದ ಕಾರಣ ತಕ್ಷಣಕ್ಕೆ ಮೃತದೇಹದ ಗುರುತು ತಿಳಿಯಲು ಸಾಧ್ಯವಾಗಿರಲಿಲ್ಲ.

ಪೊಲೀಸರ ಪ್ರಕಾರ, ಮೃತ ಬಾಲಕಿ ಮತ್ತು ಆರೋಪಿಗಳು ಪರಸ್ಪರ ಪರಿಚಿತರಾಗಿದ್ದರು. ಈ ಸಂಬಂಧ ಭಾರತೀಯ ನ್ಯಾಯ ಸಂಹಿತೆ ಮತ್ತು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, 50ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪರಿಶೀಲಿಸಿ, ಮೂವರು ಅಪ್ರಾಪ್ತರು ಸೇರಿದಂತೆ ನಾಲ್ವರು ಆರೋಪಿಗಳನ್ನು ಗುರುತಿಸಿದ್ದಾರೆ.

## ಎಂಡಿಆರ್: ಗಾಜಿಯಾಬಾದ್‌ನಲ್ಲಿ ವ್ಯಾಪಾರಿಗಳ ಹೊಸತಂತ್ರ

**ನವದೆಹಲಿ, ಸೆ.19:** ಕೇಂದ್ರ ಸರ್ಕಾರ ವ್ಯಾಪಾರಿಗಳಿಗೆ ಸೀಮಿತವಾಗಿ 2 ಸಾವಿರ ರೂ.ಗಿಂತ ಹೆಚ್ಚಿನ ಪಾವತಿಗಳ ಮೇಲೆ ಶೇ.0.4 ವಹಿವಾಟು ಶುಲ್ಕ ವಿಧಿಸಲು ನಿರ್ಧರಿಸಿದ್ದು, ಅ.15ರಿಂದ ಜಾರಿಗೆ ಬರಲಿದೆ. ಇದನ್ನು ವಿರೋಧಿಸಿ ಗಾಜಿಯಾಬಾದ್‌ನಲ್ಲಿನ ವ್ಯಾಪಾರಿಗಳು ತಮ್ಮ ಮಳಿಗೆಗಳ ಮುಂದೆ ನೋ ಯುಪಿಐ, ಓನ್ಲಿ ಕ್ಯಾಶ್ ಎನ್ನುವ ಬೋರ್ಡ್ ಸೇರಿದಂತೆ ಇನ್ನಿತರ ಪಾವತಿಗೆ ಸಂಬಂಧಿಸಿದ ಬೋರ್ಡ್ ಹಾಕಿಕೊಂಡು ಗಮನ ಸೆಳೆದಿದ್ದಾರೆ. ಈ ಮೂಲಕ ಸರ್ಕಾರ ಈ ನಿಯಮದ ವಿರುದ್ಧ ಕೆಂಡಕಾರಿದ್ದಾರೆ.

2 ಸಾವಿರಕ್ಕಿಂತ ಹೆಚ್ಚು ಯುಪಿಐ ವ್ಯವಹಾರಗಳಿಗೆ ಶೇ.0.4ರಷ್ಟು ವಿಧಿಸುವ ಬಗ್ಗೆ ಸರ್ಕಾರ ಘೋಷಿಸಿದೆ. ಇದು ಗ್ರಾಹಕರ ಮೇಲೆ ಯಾವುದೇ ಪರಿಣಾಮ ಬೀರೋದಿಲ್ಲ ಎಂತಲೂ ಹೇಳಲಾಗಿದೆ. ಆದರೆ, ವ್ಯಾಪಾರಿಗಳು ಮಾತ್ರ ನಿಜಕ್ಕೂ ಇದು ಗ್ರಾಹಕರ ಮೇಲೆ ಹೊರೆಯಾಗುತ್ತದೆ ಎಂದು ಹೇಳಿದ್ದಾರೆ. ಇದನ್ನು ಸಾಬೀತುಪಡಿಸಲು ಬೋರ್ಡ್‌ಗಳನ್ನು ಸಹ ಹಾಕಿಕೊಂಡಿರುವುದು ವೈರಲ್ ಆಗಿದೆ. ಸೋಶಿಯಲ್ ಮೀಡಿಯಾದಲ್ಲಿ ವೈರಲ್




ಆಗುತ್ತಿರುವ ಪೋಸ್ಟರ್‌ಗಳಲ್ಲಿ ವಸ್ತುವೊಂದರ ಖರೀದಿಗೆ 50 ರೂ. ಆದರೆ, ಯುಪಿಐ ಪಾವತಿಗೆ 51ರೂ. ವಿಧಿಸಲಾಗುತ್ತದೆ ಎನ್ನುವ ಬೋರ್ಡ್‌ಗಳು ಇದೆ. ಅದರ ಮೂಲಕ ಎಂಡಿಆರ್‌ಗೆ ಕಟ್ ಆಗುವ ಹಣವನ್ನು ಗ್ರಾಹರಿಂದಲೇ ಖರೀದಿಸಲಾಗುತ್ತದೆ ಎಂದು ಪರೋಕ್ಷವಾಗಿ ವ್ಯಾಪಾರಿಗಳು ಹೇಳಿಕೊಳ್ಳುತ್ತಿದ್ದಾರೆ. ಜೊತೆಗೆ ಇನ್ಮುಂದೆ ನಗದನ್ನು ಮಾತ್ರ ಕ್ಯಾರಿ ಮಾಡಿ ಎನ್ನುವ ಸೂಚನೆಯನ್ನು ನೀಡುತ್ತಿದ್ದಾರೆ.

ಸದ್ಯ ವ್ಯಕ್ತಿಯಿಂದ ವ್ಯಕ್ತಿಗೆ ನಡೆಯುವ ಹಣ ವರ್ಗಾವಣೆ ಯಪಿಐನ ಒಟ್ಟು ವ್ಯವಹಾರದ ಪ್ರಮಾಣದ ಶೇ.37 ರಷ್ಟಿದೆ. ಈ ಸೇವೆ ಮೊತ್ತ ಎಷ್ಟೇ ಇದ್ದರೂ ಉಚಿತವಾಗಿ ಮುಂದುವರಿಯುತ್ತದೆ. ಆದರೆ ವ್ಯಕ್ತಿಯಿಂದ ವ್ಯಾಪಾರಿಗೆ ನಡೆಯುವ 2 ಸಾವಿರ ರೂ. ಮೀರಿದ ವಹಿವಾಟಿಗೆ ಮಾತ್ರ ಶುಲ್ಕ ಅನ್ವಯಿಸುತ್ತದೆ. 2 ಸಾವಿರ ರೂ.ಗಿಂತ ಹೆಚ್ಚಿನ ವ್ಯವಹಾರಗಳ ಮೇಲೆ ಶೇ.0.4 ಎಂಡಿಆರ್ (ವ್ಯಾಪಾರಿ ರಿಯಾಯಿತಿ ದರ)ಇರಲಿದೆ. ಈ ಕಮಿಷನ್ ಬ್ಯಾಂಕ್, ಆ?ಯಪ್ ಒದಗಿಸುವವರು, ಪಾವತಿ ವ್ಯವಸ್ಥೆ ಪಾಲುದಾರರಿಗೆ ಹಂಚಿಕೆ ಆಗಲಿದೆ.

52,000ಕ್ಕಿಂತ ಹೆಚ್ಚಿನ ಮೊತ್ತದ ಯುಪಿಐ ವಹಿವಾಟುಗಳಿಗೆ ವ್ಯಾಪಾರಿಗಳಿಂದ ಶುಲ್ಕ (ಮರ್ಚಂಟ್ ಡಿಸ್ಕೊಂಟ್ ರೇಟ್–ಎಂಡಿಆರ್) ಆಕರಿಸುವ ಕುರಿತು ನಿರ್ಧರಿಸಲು ಬ್ಯಾಂಕ್‌ಗಳು, ಪೇಮೆಂಟ್ ಸೇವಾ ಸಂಸ್ಥೆಗಳು, ವಿವಿಧ ಸಂಘಟನೆಗಳ ಪ್ರತಿನಿಧಿಗಳನ್ನು ಒಳಗೊಂಡ ಸಮಿತಿಯನ್ನು ಕೇಂದ್ರ ಸರ್ಕಾರ ಮಂಗಳವಾರ ರಚಿಸಿದೆ. ಈ ಸಮಿತಿಯಲ್ಲಿ ಭಾರತೀಯ ಬ್ಯಾಂಕ್ಗಳ ಸಂಘ ಹಾಗೂ ಪೇಮೆಂಟ್ ಮಂಡಳಿಯ ಪ್ರತಿನಿಧಿಗಳೂ ಸೇರಿದಂತೆ 22 ಸದಸ್ಯರು ಇದ್ದಾರೆ. ಯಾವ ರೀತಿಯಲ್ಲಿ ಮತ್ತು ಎಷ್ಟು ಪ್ರಮಾಣದಲ್ಲಿ ಶುಲ್ಕ ವಿಧಿಸಬೇಕು ಎಂಬುದರ ಕುರಿತು ಸಮಿತಿ ತೀರ್ಮಾನ ಕೈಗೊಳ್ಳಲಿದೆ ಎನ್ನಲಾಗಿದೆ.

## ಉತ್ತರಾಖಂಡ ಸರ್ಕಾರದಿಂದ ವಲಸೆ ತಡೆಗೆ ರುದ್ರಾಕ್ಷಿ ಕೃಷಿ

**ನವದೆಹಲಿ, ಸೆ. 19:** ಉತ್ತರಾಖಂಡದ ಗುಡ್ಡಗಾಡು ಪ್ರದೇಶಗಳಿಂದ ಜನರು ನೌಕರಿ ಮತ್ತು ಜೀವನೋಪಾಯ ಅರಸಿ ನಗರಗಳಿಗೆ ವಲಸೆ ಹೋಗುತ್ತಿರುವುದು ಬಹುದೊಡ್ಡ ಸಾಮಾಜಿಕ ಹಾಗೂ ಆರ್ಥಿಕ ಸಮಸ್ಯೆಯಾಗಿದೆ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಉತ್ತರಾಖಂಡ ಸರ್ಕಾರವೊಂದು ವಿನೂತನ ಯೋಜನೆಯನ್ನು ರೂಪಿಸುತ್ತಿದೆ. ಅದೇ ವಾಣಿಜ್ಯ ರುದ್ರಾಕ್ಷಿ ಕೃಷಿ ಆಗಿದೆ.

2047ರ ವಿಕಸಿತ ಭಾರತ ಹಾಗೂ ಉತ್ತರಾಖಂಡದ ವಿಷನ್ ಹೊತ್ತಿಗೆ ರಾಜ್ಯದಲ್ಲಿ ಬರೋಬ್ಬರಿ 1 ಕೋಟಿ (10 ದಶಲಕ್ಷ) ರುದ್ರಾಕ್ಷಿ ಮರಗಳನ್ನು ಬೆಳೆಸಿ, ಸುಮಾರು ಒಂದೂವರೆ ಲಕ್ಷ (1,50,000) ಜನರಿಗೆ ನೇರ ಹಾಗೂ ಪರೋಕ್ಷ ಉದ್ಯೋಗ ನೀಡುವುದು ಸರ್ಕಾರದ ಪ್ರಮುಖ ಗುರಿಯಾಗಿದೆ. ಆದರೆ ಇದರಿಂದಾಗಿ 1.5 ಲಕ್ಷ ಉದ್ಯೋಗ ಸೃಷ್ಟಿ ಸಾಧ್ಯವೇ ಎಂಬ ಪ್ರಶ್ನೆ ಈಗ ಹುಟ್ಟಿದೆ. ದೇಶಕ್ಕೆ ಅಗತ್ಯವಿರುವ ಶೇಕಡ 95ಕ್ಕೂ ಹೆಚ್ಚು ರುದ್ರಾಕ್ಷಿಗಳನ್ನು ನೇಪಾಳ ಮತ್ತು ಇಂಡೋನೇಷ್ಯಾದಿಂದ ಆಮದು ಮಾಡಿಕೊಳ್ಳಲಾಗುತ್ತಿದೆ. ಇದರಿಂದ ಕೋಟ್ಯಂತರ ರೂಪಾಯಿ ವಿದೇಶಕ್ಕೆ ಹರಿಯುತ್ತಿದೆ. ಈ ಆಮದು ಅವಲಂಬನೆ ತಪ್ಪಿಸಲು ಮತ್ತು ಉತ್ತರಾಖಂಡವನ್ನು ಗ್ಲೋಬಲ್ ಹಿಮಾಲಯನ್ ರುದ್ರಾಕ್ಷಿ ಹಬ್ ಮಾಡಲು ಸರ್ಕಾರ ನಿರ್ಧರಿಸಿದೆ. ಟೆಹ್ರಿ ಶಾಸಕ ಕಿಶೋರ್ ಉಪಾಧ್ಯಾಯ, ಕೃಷಿ ವಿಜ್ಞಾನಿ ಡಾ. ರಮೇಶ್ ಸಿಂಗ್ ಪಾಲ್ ಹಾಗೂ ರುದ್ರಾಕ್ಷಿ ತಜ್ಞ ಪ್ರಿನ್ಸ್ ಅಗರ್ವಾಲ್ ಅವರನ್ನೊಳಗೊಂಡ ನಿಯೋಗವು ನೇಪಾಳದ ಭೋಜ್ಪುರ ಪ್ರದೇಶಕ್ಕೆ ತೆರಳಿ ಅಧ್ಯಯನ ನಡೆಸಿದೆ. ನೇಪಾಳದಿಂದ



ತಂದ ಮಣ್ಣು ಹಾಗೂ ಉತ್ತರಾಖಂಡದ ಗಡ್ವಾಲ್ (ಟೆಹ್ರಿ, ಪೌರಿ, ರುದ್ರಪ್ರಯಾಗ, ಡೆಹ್ರಾಡೂನ್, ಹರಿದ್ವಾರ) ಭಾಗದ ಮಣ್ಣನ್ನು ಪರೀಕ್ಷಿಸಿದಾಗ ಎರಡೂ ಕಡೆಯ ವಾತಾವರಣ, ಎತ್ತರ ಮತ್ತು ಮಣ್ಣಿನ ಗುಣಲಕ್ಷಣಗಳು ಒಂದೇ ರೀತಿಯಾಗಿರುವುದು ಕಂಡುಬಂದಿದೆ. ಜುಲೈ 2026ರಲ್ಲಿ ಈ ನಿಯೋಗವು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರಿಗೆ ಸುಮಾರು 200 ಪುಟಗಳ ವರದಿಯನ್ನು ಸಲ್ಲಿಸಿದ್ದು, ಸರ್ಕಾರ ಶೀಘ್ರದಲ್ಲೇ ಕಾರ್ಯತಂತ್ರ ನೀತಿಯನ್ನು ಪ್ರಕಟಿಸಲಿದೆ.

ರುದ್ರಾಕ್ಷಿ ಕೇವಲ ಧಾರ್ಮಿಕ ಮಹತ್ವದ ಮರವಷ್ಟೇ ಅಲ್ಲ, ಕೃಷಿ–ಅರಣ್ಯಕವಾಗಿ ಭಾರಿ ಮೌಲ್ಯವುಳ್ಳ ಬೆಳೆಯಾಗಿದೆ. ಪೌರಿ, ಟೆಹ್ರಿ, ರುದ್ರಪ್ರಯಾಗ, ಚಮೋಲಿ, ಅಲ್ಮೋರಾ ಮತ್ತು ಬಾಗೇಶ್ವರ ಜಿಲ್ಲೆಗಳಲ್ಲಿ ಈ ಬೆಳೆಯನ್ನು ಬೆಳೆಯಲಾಗುತ್ತದೆ. ರುದ್ರಾಕ್ಷಿ ಸಸಿ ನೆಟ್ಟ ನಂತರ 6 ರಿಂದ 8 ವರ್ಷಗಳಲ್ಲಿ ಕಾಯಿ ಬಿಡಲು ಪ್ರಾರಂಭಿಸುತ್ತದೆ ಹಾಗೂ 10ನೇ ವರ್ಷಕ್ಕೆ ಪೂರ್ಣ ಪ್ರಮಾಣದ ಇಳುವರಿ ನೀಡುತ್ತದೆ. ಭಾರತದಲ್ಲಿ ಮಾತ್ರವಲ್ಲದೆ, ಚೀನಾ ಸೇರಿದಂತೆ ಹಲವು ದೇಶಗಳಲ್ಲಿ ಔಷಧೀಯ ಹಾಗೂ ಧಾರ್ಮಿಕ ಕಾರಣಕ್ಕೆ ರುದ್ರಾಕ್ಷಿಗೆ ಭಾರಿ ಬೇಡಿಕೆಯಿದೆ. ವಿಶೇಷವಾಗಿ ಗಡ್ವಾಲ್ ಹಿಮಾಲಯದ ರುದ್ರಾಕ್ಷಿಗಳಿಗೆ ಜಾಗತಿಕವಾಗಿ ಹೆಚ್ಚಿನ ಮೌಲ್ಯವಿದೆ. ವರದಿಯ ಪ್ರಕಾರ, 10,000 ಹೆಕ್ಟೇರ್ ಪ್ರದೇಶದಲ್ಲಿ 1 ಕೋಟಿ ಮರಗಳನ್ನು ಹಂತ ಹಂತವಾಗಿ ಬೆಳೆಸುವ ಯೋಜನೆ ಇದಾಗಿದೆ. ಸುಮಾರು 50,000ದಿಂದ 70,000 ರೈತ ಕುಟುಂಬಗಳು ನೇರವಾಗಿ ಈ ಕೃಷಿಯಲ್ಲಿ ತೊಡಗಿಸಿಕೊಳ್ಳಬಹುದು. ಸಸಿ ನೆಡುವುದು, ಮರಗಳ ನಿರ್ವಹಣೆ, ಕಟಾವು, ರುದ್ರಾಕ್ಷಿ ಕಾಳುಗಳ ಸಂಸ್ಕರಣೆ, ಶ್ರೇಣೀಕರಣ, ಮಾಲೆಗಳ ತಯಾರಿಕೆ, ಮೌಲ್ಯವರ್ಧನೆ, ರಫ್ತು ಮತ್ತು ಧಾರ್ಮಿಕ ಪ್ರವಾಸೋದ್ಯಮದ ಮೂಲಕ 1,50,000 ಜನರಿಗೆ ಉದ್ಯೋಗ ದೊರೆಯಲಿದೆ ಎಂದು ವರದಿ ಅಂದಾಜಿಸಿದೆ.

ಬೆಟ್ಟದ ಜಮೀನುಗಳಲ್ಲಿ ಕಾಡುಪ್ರಾಣಿಗಳ ಕಾಟದಿಂದಾಗಿ ಸಾಂಪ್ರದಾಯಿಕ ಕೃಷಿ ಬಿಟ್ಟು ಜನ ನಗರ ಸೇರುತ್ತಿದ್ದಾರೆ. ಆದರೆ ರುದ್ರಾಕ್ಷಿ ಮರಗಳಿಗೆ ಪ್ರಾಣಿಗಳಿಂದ ಹೆಚ್ಚಿನ ಹಾನಿಯಾಗುವುದಿಲ್ಲ. ಹೀಗಾಗಿ ಖಾಲಿ ಬಿದ್ದಿರುವ ಗುಡ್ಡಗಾಡು ಜಮೀನುಗಳಲ್ಲಿ ಇದು ಸುಸ್ಥಿರ ಆದಾಯ ನೀಡಲಿದ್ದು, ವಲಸೆಗೆ ಬ್ರೇಕ್ ಹಾಕಬಹುದು.

ಈ ಯೋಜನೆ ಕೇಳಲು ಆಕರ್ಷಕವಾಗಿದ್ದರೂ, ವಿಪಕ್ಷಗಳು ಹಾಗೂ ಕೆಲವು ಕೃಷಿ ವಿಜ್ಞಾನಿಗಳು ಪ್ರಮುಖ ಸವಾಲುಗಳನ್ನು ಎತ್ತಿಹಿಡಿದಿದ್ದಾರೆ. ರುದ್ರಾಕ್ಷಿ ಮರ ಫಲ ನೀಡಲು 6ರಿಂದ 8 ವರ್ಷ ಬೇಕು. ಅಲ್ಲಿಯವರೆಗೆ ರೈತರಿಗೆ ಆದಾಯ ಹೇಗೆ? ಈ ಮಧ್ಯಂತರ ಅವಧಿಯಲ್ಲಿ ಸರ್ಕಾರ ನೀಡುವ ಸಬ್ಸಿಡಿ ಅಥವಾ ಜೀವನಾಧಾರ ಯೋಜನೆಗಳೇನು ಎಂದು ವಿಪಕ್ಷಗಳು ಪ್ರಶ್ನಿಸಿವೆ.

ರುದ್ರಾಕ್ಷಿಯಂತೆಯೇ ಕಾಣುವ ಭದ್ರಾಕ್ಷಿ ತಳಿಗಳಿರುತ್ತವೆ. ಕಾಯಿ ಬಿಡುವವರೆಗೂ ತಳಿ ಗುರುತಿಸುವುದು ಕಷ್ಟ. ಕಳಪೆ ಸಸಿಗಳನ್ನು ವಿತರಿಸಿದರೆ ರೈತರು ಸತತ 7 ವರ್ಷಗಳ ಶ್ರಮ ವ್ಯರ್ಥವಾಗುತ್ತದೆ. ಜಿ.ಬಿ. ಪಂತ್ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳ ಪ್ರಕಾರ, ಹವಾಮಾನ ಸರಿಯಿದ್ದರೂ ಎತ್ತರ ಮತ್ತು ಸ್ಥಳೀಯ ಉಷ್ಣಾಂಶ ಬದಲಾದರೆ ರುದ್ರಾಕ್ಷಿಯ ಗುಣಮಟ್ಟ ಕಡಿಮೆಯಾಗುವ ಅಪಾಯವಿದೆ. ವಿಪಕ್ಷಗಳು ಸರ್ಕಾರವು ಮೂಲಭೂತ ಸೌಕರ್ಯ, ಆಸ್ಪತ್ರೆ ಹಾಗೂ ಶಾಲೆಗಳನ್ನು ಅಭಿವೃದ್ಧಿ ಪಡಿಸದೆ ಇಂತಹ ಧಾರ್ಮಿಕ ಭರವಸೆಗಳ ಮೂಲಕ ವಲಸೆ ಸಮಸ್ಯೆಯನ್ನು ಮರೆಮಾಚಲು ಯತ್ನಿಸುತ್ತಿದೆ ಎಂದು ಟೀಕಿಸಿವೆ.

## ಟಿಎಂಸಿ ಹೆಸರು, ಚಿಹ್ನೆ ಬಳಕೆಗೆ ತಡೆ: ಚು.ಆಯೋಗದ ಆದೇಶ ಪ್ರಶ್ನಿಸಿ ಸುಪ್ರೀಂ ಮೆಟ್ಟಿಲೇರಿದ ಮಮತಾ

**ನವದೆಹಲಿ,ಸೆ.19:** ತೃಣಮೂಲ ಕಾಂಗ್ರೆಸ್ ಪಕ್ಷದ ಅಧಿಕೃತ ಹೆಸರು ಮತ್ತು ಚುನಾವಣಾ ಚಿಹ್ನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿರುವ ಚುನಾವಣಾ ಆಯೋಗದ ಆದೇಶವನ್ನು ಪ್ರಶ್ನಿಸಿ ಪಶ್ಚಿಮ ಬಂಗಾಳ ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸುಪ್ರೀಂಕೋರ್ಟ್ ಮೊರೆ ಹೋಗಿದ್ದಾರೆ.

ಟಿಎಂಸಿ ಪಕ್ಷದ ಹೆಸರು ಆಲ್ ಇಂಡಿಯಾ ತೃಣಮೂಲ ಕಾಂಗ್ರೆಸ್ ಮತ್ತು ಪಕ್ಷದ ಸಾಂಪ್ರದಾಯಿಕ ಹೂವು ಮತ್ತು ಹುಲ್ಲು ಚಿಹ್ನೆಯನ್ನು ಬಳಸುವುದನ್ನು ಎರಡೂ ಬಣಗಳಿಗೆ ನಿರ್ಬಂಧಿಸಿ ಚುನಾವಣಾ ಆಯೋಗ ಸೆಪ್ಟೆಂಬರ್ 17ರಂದು ಮಧ್ಯಂತರ ಆದೇಶ ಹೊರಡಿಸಿತ್ತು.

ಪಕ್ಷದ ಹೆಸರು, ಚಿಹ್ನೆ ಹಾಗೂ ಸಂಘಟನಾ ನಿಯಂತ್ರಣದ ಮೇಲೆ ಮಮತಾ ಬ್ಯಾನರ್ಜಿ ನೇತೃತ್ವದ ಬಣ ಮತ್ತು ಪಶ್ಚಿಮ ಬಂಗಾಳ ವಿಧಾನಸಭೆಯ ವಿರೋಧ ಪಕ್ಷದ ನಾಯಕ ರಿತಬ್ರತ ಬ್ಯಾನರ್ಜಿ ನೇತೃತ್ವದ ಬಣ ಹಕ್ಕು ಮಂಡಿಸಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.



ಚುನಾವಣಾ ಆಯೋಗದ ಮಧ್ಯಂತರ ವ್ಯವಸ್ಥೆಯಂತೆ, ಮಮತಾ ಬ್ಯಾನರ್ಜಿ ನೇತೃತ್ವದ ಬಣಕ್ಕೆ ಮಮತಾ ಆಲ್ ಇಂಡಿಯಾ ತೃಣಮೂಲ ಕಾಂಗ್ರೆಸ್ ಎಂಬ ಹೆಸರು ಹಾಗೂ ಫುಟ್ಬಾಲ್ ಆಟಗಾರ ಚಿಹ್ನೆ ನೀಡಲಾಗಿದೆ. ಮತ್ತೊಂದು ಬಣಕ್ಕೆ ಡೆಮಾಕ್ರಟಿಕ್ ತೃಣಮೂಲ ಕಾಂಗ್ರೆಸ್ ಎಂಬ ಹೆಸರು ಮತ್ತು ಲಕೋಟೆ ಚಿಹ್ನೆ ಹಂಚಿಕೆ ಮಾಡಲಾಗಿದೆ.

ಅಕ್ಟೋಬರ್ 6ರಂದು ನಂದಿಗ್ರಾಮ ಮತ್ತು ರೆಜಿನಗರ ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಆಯೋಗದ ಈ ಮಧ್ಯಂತರ ವ್ಯವಸ್ಥೆ ಮಹತ್ವ ಪಡೆದಿದೆ. ಈ ಉಪಚುನಾವಣೆಗಳಿಗಾಗಿ ಎರಡೂ ಬಣಗಳು ಹೊಸ ಹೆಸರು ಹಾಗೂ ಚಿಹ್ನೆಗಳನ್ನು ಬಳಸಬೇಕಾಗಿದೆ.

ಚುನಾವಣಾ ಆಯೋಗದ ಆದೇಶದ ವಿರುದ್ಧ ಮಮತಾ ಬ್ಯಾನರ್ಜಿ ಅವರು ತಮ್ಮ ವಕೀಲ ಅಭಿನವ್ ಸಿಂಗ್ ಅವರ ಮೂಲಕ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ. ಅರ್ಜಿಯಲ್ಲಿ ಚುನಾವಣಾ ಆಯೋಗದ ಮಧ್ಯಂತರ ಆದೇಶವನ್ನು ಪ್ರಶ್ನಿಸಲಾಗಿದೆ.

### ಕನ್ನಡಿಗ ಕಲಾವಿದರ ಪರಿಷತ್ತು ಮಹಾರಾಷ್ಟ್ರ ಪೂರೈಸಿದ ಹದಿನೆಂಟನೇ ವಾರ್ಷಿಕ ಮಹಾಸಭೆ

## ಕಲಾವಿದರ ಸರ್ವೋನ್ನತಿಯೇ ಪರಿಷತ್‌ನ ಆಶಯ: ಡಾ.ಸುರೇಂದ್ರಕುಮಾರ್ ಹೆಗ್ಡೆ

**ಮುಂಬಯಿ, ಸೆ.19:** ಕನ್ನಡಿಗ ಕಲಾವಿದರ ಪರಿಷತ್ತು ಕಲಾವಿದ ಸದಸ್ಯರ ಏಳಿಗೆಗಾಗಿ ಶ್ರಮಿಸುತ್ತಿದ್ದು, ಕಲಾವಿದರಿಗಾಗಿ ಕ್ಷೇಮನಿಧಿ ಸ್ಥಾಪಿಸಿರುತ್ತೇವೆ. ಅದನ್ನು ವೃದ್ಧಿಸುವ ನಿಟ್ಟಿನಲ್ಲಿ ಇನ್ನಷ್ಟು ಮೊತ್ತವನ್ನು ಕೂಡಿಸುವ ಅವಶ್ಯಕತೆ ಇದೆ. ಆದ್ದರಿಂದ ಸದಸ್ಯರು ಸಂಘಟಿತರಾಗಿ ಒಂದು ಶ್ರೇಷ್ಠ ಉದ್ದೇಶದೊಂದಿಗೆ ಇದನ್ನು ಕಾರ್ಯಗತಗೊಳಿಸುವಲ್ಲಿ ಸಹಕರಿಸಬೇಕು. ನಮ್ಮ ಗಮನಕ್ಕೆ ಬಂದ ಅಶಕ್ತ ಕಲಾವಿದರು ಹಾಗೂ ಅವರ ಪರಿವಾರಕ್ಕೆ ವೈದ್ಯಕೀಯ, ಶೈಕ್ಷಣಿಕ ಹಾಗೂ ಇತರ ಅವಶ್ಯಕತೆಗಳಿಗೆ ಸ್ಪಂದಿಸಿದೆ. ಕಲಾವಿದರ ಸರ್ವೋನ್ನತಿಯೇ ಪರಿಷತ್ತುವಿನ ಆಶಯವಾಗಿದೆ. ಮುಂದೆಯೂ ತನ್ನ ಧ್ಯೇಯೋದ್ದೇಶ, ಯೋಜನೆಗಳನ್ನು ಅನುಷ್ಠಾನಗೊಳಿಸಿ, ಸಾರ್ಥಕ ಗೊಳಿಸುವರೆ ಕಾರ್ಯನಿರ್ವಹಿಸಿ ಸದಸ್ಯರ ಆಶಯಗಳನ್ನು ಪೂರೈಸುವಲ್ಲಿ ಶ್ರಮಿಸಲಿದೆ. ಇವೆಲ್ಲವೂಗಳನ್ನು ಕಾರ್ಯಗತ ಗೊಳಿಸಬೇಕಾದರೆ ಸದಸ್ಯರುಗಳ ಸಂಪೂರ್ಣ ಸಹಕಾರ ಅತ್ಯವಶ್ಯವಿದೆ ಎಂದು ಕನ್ನಡಿಗ ಕಲಾವಿದರ ಪರಿಷತ್ತು ಮಹಾರಾಷ್ಟ್ರ ಅಧ್ಯಕ್ಷ ಡಾ। ಸುರೇಂದ್ರಕುಮಾರ್ ಹೆಗ್ಡೆ ತಿಳಿಸಿದರು.

ಶನಿವಾರ ಸಂಜೆ ಸಾಂತಾಕ್ರೂಜ್ ಪೂರ್ವದ ಪೇಜಾವರ ಮಠದ ಶ್ರೀ ವಿಶ್ವೇಶ ತೀರ್ಥ ಸಭಾಗೃಹದಲ್ಲಿ ನಡೆಸಲಾದ 18ನೇ ವಾರ್ಷಿಕ ಮಹಾಸಭೆಯಲ್ಲಿ ಪರಿಷತ್ತು ಉಪಾಧ್ಯಕ್ಷರುಗಳಾದ ಕಮಲಾಕ್ಷ ಜಿ.ಸರಾಫ್



ಮತ್ತು ಸಿಎ। ಶ್ರೀನಿವಾಸ ಪಿ.ಸಾಫಲ್ಯ, ಜೊತೆ ಕಾರ್ಯದರ್ಶಿ ಚಂದ್ರಾವತಿ ದೇವಾಡಿಗ, ಜೊತೆ ಖಜಾಂಚಿ ಎನ್.ಪೃಥ್ವಿರಾಜ್ ಮುಂಡ್ಕೂರು, ಮಹಿಳಾ ವಿಭಾಗಧ್ಯಕ್ಷೆ ಅಮೀತಾ ಜತಿನ್ ಸೇರಿದಂತೆ ಹಿರಿಯ ಕಲಾವಿದ, ಶಂಕರ್ ನಾಯ್ಕ್ ಎಲ್ಲಾರೆ, ಪದ್ಮನಾಭ ಸಸಿಹಿತ್ಲು (ಕಲಾ ಸೌರಭ), ಬಾಲಕೃಷ್ಣ ಶೆಟ್ಟಿ (ಅಭಿನಯ ಮಂಟಪ), ಡಾ। ಭರತ್‌ಕುಮಾರ್ ಪೊಲಿಪು, ವೇದಿಕೆಯಲ್ಲಿದ್ದು ಪರಿಷತ್ತು ಸಲಹಾಗಾರ ಕೆ.ಕೆ ಶೆಟ್ಟಿ ದೀಪ ಪ್ರಜ್ವಲಿಸಿ ಚಾಲನೆಯನ್ನೀಡಿದ್ದು, ಸಭಾಧ್ಯಕ್ಷತೆ ವಹಿಸಿ ಸುರೇಂದ್ರಕುಮಾರ್ ಹೆಗ್ಡೆ ಮಾತನಾಡಿದರು.

ಬಹುದಿನದ ನಿರೀಕ್ಷೆಯ ಕನ್ನಡಿಗ ಕಲಾವಿದರ ಮಾಹಿತಿ ಗ್ರಂಥ 'ಕಲಾವಿದರ ಕೈಪಿಡಿ' ಮುದ್ರಿತಗೊಂಡು ಬಿಡುಗಡೆಯಾಗಿದ್ದು, ನೋಂದಾಯಿತ ನೂರಾರು ಕಲಾವಿದರು ತಮ್ಮ ಕೈಪಿಡಿಯನ್ನು ಪಡೆಯದಿಲ್ಲ. ಸದಸ್ಯರು ನಮ್ಮನ್ನು ಸಂಪರ್ಕಿಸಿ ತಮ್ಮ ಪ್ರತಿಯನ್ನು ಶೀಘ್ರವಾಗಿ ಪಡೆಯಬೇಕು. ಇದರ ಮುದ್ರಣಕ್ಕೆ ನಾವು ಕಷ್ಟಪಟ್ಟು ಸಂಗ್ರಹಿಸಿದ ಲಕ್ಷಾಂತರ ರೂಪಾಯಿ ವೆಚ್ಚ ಭರಿಸಿದ್ದೇವೆ. ಅದರ ಸಾರ್ಥಕತೆಯಾದರೂ ಆಗಲಿ ಎಂಬುದು ನಮ್ಮ ಆಶಯ ಎಂದೂ ಸುರೇಂದ್ರಕುಮಾರ್ ಹೆಗ್ಡೆ ತಿಳಿಸಿದರು.

ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ಪದ್ಮನಾಭ ಸಸಿಹಿತ್ಲು, ಕುಸುಮಾ ಪೂಜಾರಿ, ಅಶೋಕ್ ಸಸಿಹಿತ್ಲು, ಜೂಲಿಯೆಟ್ ಪಿರೇರಾ, ಬಾಲಕೃಷ್ಣ ಶೆಟ್ಟಿ ಆಡ್ಯಾಪಾಡಿ ವಿಶೇಷ ಆಹ್ವಾನಿತರುಗಳಾದ ಬಾಲಕೃಷ್ಣ ಶೆಟ್ಟಿ, ಕೃಷ್ಣರಾಜ್ ಶೆಟ್ಟಿ, ಆಂತರಿಕ ಲೆಕ್ಕ ಪರಿಶೋಧಕ ಜಗದೀಶ್ ಡಿ.ರೈ, ಸಲಹೆಗಾರರಾದ ಜಯಶೀಲ ಕೆ.ಸುವರ್ಣ, ಡಾ। ಭರತಕುಮಾರ್ ಪೊಲಿಪು, ಸದಸ್ಯೆಯರಾದ ವಿಜಯಲಕ್ಷ್ಮಿ, ಶೋಭಾ ಕೋಟ್ಯಾನ್ ಸೇರಿದಂತೆ ಸದಸ್ಯರನೇಕರು ಉಪಸ್ಥಿತರಿದ್ದರು.

ಚಂದ್ರಾವತಿ ದೇವಾಡಿಗ ವಾರ್ಷಿಕ ವರದಿ ಮಂಡಿಸಿದರು. ಎನ್.ಪೃಥ್ವಿರಾಜ್ ಮುಂಡ್ಕೂರು ಗತವಾರ್ಷಿಕ ಲೆಕ್ಕಪತ್ರಗಳನ್ನು ಮಂಡಿಸಿದರು. ಜಗದೀಶ್ ಡಿ.ರೈ ಅವರನ್ನು ಲೆಕ್ಕಪರಿಶೋಧಕರಾಗಿ ಹಾಗೂ ರಾವ್ ಎಂಡ್ ಅಶೋಕ್ ಚಾರ್ಟರ್ಡ್ ಅಕೌಂಟೆಂಟ್ಸ್ ಸಂಸ್ಥೆಯನ್ನು ಬಾಹ್ಯ ಲೆಕ್ಕಪರಿಶೋಧಕರನ್ನಾಗಿ ಸರ್ವಾನುಮತದಿಂದ ಸಭೆಯು ಆಯ್ಕೆಗೊಳಿಸಿತು. ಸದಸ್ಯರನೇಕರಲ್ಲಿನ ಕೆ.ಕೆ ಶೆಟ್ಟಿ, ಸತೀಶ್ ಎನ್.ಬಂಗೇರಾ, ಸುಶೀಲಾ ದೇವಾಡಿಗ, ತಾರಾ ಬಂಗೇರಾ, ಬಾಲಕೃಷ್ಣ ಶೆಟ್ಟಿ ಅದ್ಯಪಾಡಿ, ಜಯಶೀಲ ಕೆ.ಸುವರ್ಣ, ಕಮಲಾಕ್ಷ ಜಿ.ಸರಾಫ್, ಶ್ರೀನಿವಾಸ ಪಿ. ಸಾಫಲ್ಯ ಮಾತಾನಾಡಿ ಸಲಹೆಗಳನ್ನಿತ್ತು ಸಂಘದ ಸರ್ವೋನ್ನತಿಗೆ ಹಾರೈಸಿದರು.

ಕು। ಸನ್ನಿಧಿ ಮುರಳೀಧರ್ ಪ್ರಾರ್ಥನೆ ಹಾಡಿದರು. ಇತ್ತೀಚೆಗೆ ಅಗಲಿದ ಪರಿಷತ್ತು ಸದಸ್ಯೆ, ಹಿರಿಯ ರಂಗ ಕಲಾವಿದೆ ಚಂದ್ರಪ್ರಭಾ ಸುಧಾಕರ ಉದ್ಯಾವರ ಅವರಿಗೆ ಸಭೆಯಲ್ಲಿ ನಮನ ಸಲ್ಲಿಸಿ ಶ್ರದ್ಧಾಂಜಲಿ ಕೋರಲಾಯಿತು. ಕಾರ್ಯಕಾರಿ ಸಮಿತಿ ಸದಸ್ಯ ಲ। ಮುರಳೀಧರ್ ಹೆಗ್ಡೆ ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು.

## ಪರೀಕ್ಷೆಯಲ್ಲಿ ಎಐ ಬಳಕೆ ಆರೋಪ ಐಐಟಿ ಬಾಂಬೇ ವಿದ್ಯಾರ್ಥಿ ಆತ್ಮಹತ್ಯೆ

**ಮುಂಬೈ,ಸೆ.19:** ಪರೀಕ್ಷಾ ಕೊಠಡಿಯಲ್ಲಿ ಮೊಬೈಲ್ ಬಳಸಿ ಪ್ರಶ್ನೆಪತ್ರಿಕೆಯನ್ನು ಚಾಟ್ಜಿಪಿಟಿಗೆ ಅಪ್ಲೋಡ್ ಮಾಡಿ ಉತ್ತರ ಪಡೆಯಲು ಯತ್ನಿಸಿದ ಆರೋಪ ಕೇಳಿಬಂದ ಕೆಲವೇ ಗಂಟೆಗಳ ಬಳಿಕ ಐಐಟಿ ಬಾಂಬೇಯ ದ್ವಿತೀಯ ವರ್ಷದ ವಿದ್ಯಾರ್ಥಿಯೊಬ್ಬ ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಡೆದಿದೆ. ಆದರೆ ವಿದ್ಯಾರ್ಥಿಯ ವಿರುದ್ಧ ಯಾವುದೇ ಶಿಸ್ತು ಕ್ರಮ ಆರಂಭಿಸಿರಲಿಲ್ಲ ಎಂದು ಐಐಟಿ ಬಾಂಬೇ ಸ್ಪಷ್ಟಪಡಿಸಿದೆ.

ಐಐಟಿಯ ಎನರ್ಜಿ ಸೈನ್ಸ್ ಆ್ಯಂಡ್ ಎಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿ ಪರೀಕ್ಷೆಯ ವೇಳೆ ಮೊಬೈಲ್ ಬಳಸುತ್ತಿರುವುದು ಪತ್ತೆಯಾಗಿತ್ತು. ಸಂಸ್ಥೆಯ ಪ್ರಕಾರ, ಆತ ಪರೀಕ್ಷೆಯ ಪ್ರಶ್ನೆಪತ್ರಿಕೆಯನ್ನು ಚಾಟ್‌ಜಿಪಿಟಿಗೆ ಅಪ್ಲೋಡ್ ಮಾಡಿ ಉತ್ತರಗಳನ್ನು ಪಡೆಯಲು ಪ್ರಯತ್ನಿಸಿದ್ದ. ಈ ವಿಚಾರವನ್ನು ಪರೀಕ್ಷೆಯ ಬಳಿಕ ಸಂಬಂಧಪಟ್ಟ ಬೋಧಕರು ಹಾಗೂ ವಿಭಾಗದ ಮುಖ್ಯಸ್ಥರು ವಿದ್ಯಾರ್ಥಿಯೊಂದಿಗೆ ಚರ್ಚಿಸಿದ್ದರು. ಆತನಿಗೆ ಸಲಹೆ ನೀಡಿದ್ದಲ್ಲದೆ, ಈ ಘಟನೆ ಆತನ ಶೈಕ್ಷಣಿಕ ಭವಿಷ್ಯದ ಮೇಲೆ ಪ್ರತಿಕೂಲ ಪರಿಣಾಮ ಬೀರುವುದಿಲ್ಲ ಎಂದು ಭರವಸೆ ನೀಡಲಾಗಿತ್ತು.

ಬಳಿಕ ವಿದ್ಯಾರ್ಥಿ ತನ್ನ ಹಾಸ್ಟೆಲ್ ಕೊಠಡಿಗೆ ತೆರಳಿದ್ದ. ಅದೇ ದಿನ ಸಂಜೆ ಆತನ ಕೊಠಡಿಯಲ್ಲಿ ಮೃತದೇಹ ಪತ್ತೆಯಾಗಿದೆ. ಘಟನೆಗೆ ಸಂಬಂಧಿಸಿದ ನಿಖರ ಕಾರಣಗಳು ಹಾಗೂ ಪರಿಸ್ಥಿತಿಗಳ ಕುರಿತು



**ಶಿಸ್ತುಕ್ರಮ ಕೈಗೊಂಡಿರಲಿಲ್ಲ, ಶೈಕ್ಷಣಿಕ ಭವಿಷ್ಯಕ್ಕೆ ತೊಂದರೆಯಾಗದು ಎಂದ ಸಂಸ್ಥೆ ; ವಿದ್ಯಾರ್ಥಿಗಳಿಂದ ಪ್ರತಿಭಟನೆ**

ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ ಎಂದು ಐಐಟಿ ಬಾಂಬೆ ತಿಳಿಸಿದೆ.

ವಿದ್ಯಾರ್ಥಿಯ ಸಾವಿನ ಸುದ್ದಿ ಹರಡುತ್ತಿದ್ದಂತೆ ಐಐಟಿ ಬಾಂಬೇ ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು. 400ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾಗಿ ವರದಿಯಾಗಿದೆ. ವಿದ್ಯಾರ್ಥಿಗಳ ಪ್ರತಿಭಟನೆ ಹಿನ್ನೆಲೆಯಲ್ಲಿ ನಡೆಯಬೇಕಿದ್ದ ಮಿಡ್–ಸೆಮಿಸ್ಟರ್ ಪರೀಕ್ಷೆಯನ್ನೂ ಮುಂದೂಡಲಾಗಿದೆ. ಈ ನಡುವೆ, ವಿದ್ಯಾರ್ಥಿಯ ಕುಟುಂಬವು ಸಂಸ್ಥೆಯ ವಿರುದ್ಧ ಆರೋಪಗಳನ್ನು ಮಾಡಿದ್ದು, ಘಟನೆಯ ಕುರಿತು ನ್ಯಾಯಯುತ ತನಿಖೆಗೆ ಒತ್ತಾಯಿಸಿದೆ.

# ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದ ಸಿಎಂ ಡಿ.ಕೆ.ಶಿವಕುಮಾರ್

ಶ್ರೀ ರಂಭಾಪುರಿ ಪೀಠ (ಬಾಳೆಹೊನ್ನೂರು) **ಸೆ.19–** ಶ್ರೀ ಜಗದ್ಗುರು ರೇಣುಕಾಚಾರ್ಯರಿಂದ ಸಂಸ್ಥಾಪಿತಗೊಂಡ ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾ ಸಂಸ್ಥಾನ ಪೀಠಕ್ಕೆ ರಾಜ್ಯದ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಶನಿವಾರ ಭೇಟಿ ನೀಡಿದರು. ಶ್ರೀ ಪೀಠದ ಕ್ಷೇತ್ರನಾಥ ವೀರಭದ್ರಸ್ವಾಮಿ ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದಲ್ಲಿ ಪೂಜೆ ಸಲ್ಲಿಸಿದ ನಂತರ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ದರ್ಶನಾಶೀರ್ವಾದ ಪಡೆದರು.



ಇದೇ ಸಂದರ್ಭದಲ್ಲಿ ಮೂಲ ರಂಭಾಪುರಿ ಪೀಠದ ಗುರುಮಠಕ್ಕೆ ಡಿ.ಕೆ.ಶಿವಕುಮಾರ್ ಭೂಮಿಪೂಜೆ ನೆರವೇರಿಸಿದರು. ಮಲೆನಾಡು ಜನ ಸಮೂಹದಲ್ಲಿ ಕಸ್ತೂರಿ ರಂಗನ್ ಶಿಫಾರಸ್ಸು ಜಾರಿಯಾದರೆ ಬಹಳಷ್ಟು ತೊಂದರೆಯಾಗುತ್ತದೆ. ಜನ ವಸತಿ ಪ್ರದೇಶಗಳಿಗೆ ಯಾವುದೇ ತೊಂದರೆ ಆಗದಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿಯನ್ನು ಸಲ್ಲಿಸುತ್ತದೆ ಎಂದ ಮುಖ್ಯ ಮಂತ್ರಿಗಳು ಭಗವಂತನ ಆಶೀರ್ವಾದದಿಂದ ಎಲ್ಲೆಡೆ ಸಮೃದ್ಧಿಯಾಗಿ ಮಳೆಯಾಗಬೇಕೆಂದು ದೇವರಲ್ಲಿ ಪ್ರಾರ್ಥಿಸಿದರು.

### ವೇ. ರಾಜಗೋಪಾಲ ಅಡಿ ಅವರ ಹೊಸ ಪ್ರಯತ್ನಕ್ಕೆ ಮುನ್ನುಡಿ

## ಗೋಕರ್ಣದಲ್ಲಿ ಪುಣ್ಯಾಶ್ರಮದಿಂದ ಗೋಶಾಲೆ ಆರಂಭ: ದೇಶಿ ತಳಿಗಳಿಗೆ ಪ್ರಥಮ ಆದ್ಯತೆ

**ಗೋಕರ್ಣ, ಸೆ.19–** ಶ್ರೀ ಕ್ಷೇತ್ರ ಗೋಕರ್ಣಕ್ಕೆ ಪ್ರತಿದಿನ ಸಾವಿರಾರು ಭಕ್ತರು ಆಗಮಿಸುತ್ತಲೇ ಇರುತ್ತಾರೆ. ಹಾಗೇ ಇಲ್ಲಿನ ಧಾರ್ಮಿಕ ತಾಣದಲ್ಲಿ ಒಂದುರೀತಿಯಲ್ಲಿ ಹಲವು ವಿಸ್ಮಯಗಳಿಗೆ ಕಾರಣವಾಗಿದೆ. ಅವುಗಳಲ್ಲಿ ಗೋಕರ್ಣದ ಪುಣ್ಯಾಶ್ರಮವು ಒಂದು. ಇಲ್ಲಿ ಧಾರ್ಮಿಕ ಕಾರ್ಯಗಳಿಗೆ ಬಂದವರಿಗೆ ಉಳಿದುಕೊಳ್ಳಲು ವಸತಿ ವ್ಯವಸ್ಥೆ ಹಾಗೂ ತಿಂಡಿ–ಊಟದ ವ್ಯವಸ್ಥೆಯು ಪ್ರತಿನಿತ್ಯ ನಡೆಯುತ್ತಿದೆ. ಮಹಾಬಲೇಶ್ವರ ದೇವಸ್ಥಾನದ ಉಪಾಧಿವಂತ ಮಂಡಳದ ಅಧ್ಯಕ್ಷ ರಾಜಗೋಪಾಲ ಅಡಿ ಗುರೂಜಿ ಅವರು ಈಗ ಗೋ ಶಾಲೆಯನ್ನು ಆರಂಭಿಸುವ ಮೂಲಕ ಸಮಾಜಕ್ಕೆ ಹಸುಗಳ ಮಹತ್ವವನ್ನು ತಿಳಿಯುವಂತೆ ಮಾಡಿದ್ದಾರೆ. ಹಲವು ವಿಭಿನ್ನ ತಳಿಯ ಗೋವುಗಳಿದ್ದು ಅದರಲ್ಲಿ ಪುಂಗನೂರು ಹಸುವು ಕೂಡ ಇಲ್ಲಿಯ ಕೇಂದ್ರಬಿಂದುವಾಗಿದೆ.

ಗೋಶಾಲೆಯನ್ನು ಆರಂಭಿಸುವ ಮೂಲಕ ದೇಶಿ ತಳಿಗಳ ಗೋವುಗಳಿಗೆ ಇಲ್ಲಿ ಹೆಚ್ಚಿನ ಮಹತ್ವ ನೀಡಲಾಗಿದೆ.



ಗೋಶಾಲೆಯನ್ನು ನಡೆಸಿಕೊಂಡು ಹೋಗಲು ಸಿಬ್ಬಂದಿಯ ವ್ಯವಸ್ಥೆ ಮಾಡಿದ್ದಾರೆ. ಹಾಗೇ ಅದಕ್ಕೆ ಬೇಕಾಗುವ ಶೆಡ್, ಆಹಾರಕ್ಕೆ ಬೇಕಾಗುವ ಸೊಪ್ಪು ಹಾಗೂ ಹುಲ್ಲುಗಳನ್ನು ಕೂಡ ಇವರು ವ್ಯವಸ್ಥಿತವಾಗಿ ನಿರ್ಮಿಸಿದ್ದಾರೆ. ಹಾಗೇ ಗೋವುಗಳಿಂದ ಇರುವ ಲಾಭಗಳ ಕುರಿತು ಜನರಿಗೆ ಮನಮುಟ್ಟುವಂತೆ ಹೇಳುತ್ತಾರೆ.

### ಕೃಷಿ ಚಟುವಟಿಕೆಗಳಿಗೆ ಖಾಸಗಿ ಜಮೀನಿನ ಮೂಲಕ

## ತೆರಳಲು ಇರುವ ಕಾಲುದಾರಿ, ಬಂಡಿದಾರಿ, ರಸ್ತೆಗಳಿಗೆ ಅಡ್ಡಿಪಡಿಸಿದರೆ ಕ್ರಮ: ಕಂದಾಯ ಇಲಾಖೆ ಎಚ್ಚರಿಕೆ

**ಬೆಂಗಳೂರು, ಸೆ.19:** ರೈತರು ಕೃಷಿ ಚಟುವಟಿಕೆಗಳಿಗೆ ತೆರಳಲು ಹಾಗೂ ಕೃಷಿ ಉತ್ಪನ್ನಗಳನ್ನು ಸಾಗಿಸಲು ಖಾಸಗಿ ಜಮೀನುಗಳ ಮೂಲಕ ಇರುವ ಕಾಲುದಾರಿ, ಬಂಡಿದಾರಿ ಅಥವಾ ರಸ್ತೆಗಳಿಗೆ ಅಡ್ಡಿಪಡಿಸಿದರೆ ಕ್ರಮ ಕೈಗೊಳ್ಳುವಂತೆ ಕಂದಾಯ ಇಲಾಖೆ ಸೂಚನೆ ನೀಡಿದೆ.

ಕೃಷಿ ಜಮೀನುಗಳಿಗೆ ತೆರಳಲು ದಾರಿ ಸಮಸ್ಯೆಯಿಂದ ರೈತರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ಅಕ್ಕಪಕ್ಕದ ಜಮೀನುಗಳ ಮೂಲಕ ಬಹುಕಾಲದಿಂದ ಬಳಕೆಯಾಗುತ್ತಿರುವ ದಾರಿಗಳನ್ನು ಕೆಲವರು ಬಂದ್ ಮಾಡುತ್ತಿರುವುದರಿಂದ ರೈತರು ತಮ್ಮ ಕೃಷಿ ಚಟುವಟಿಕೆಗಳನ್ನು ನಡೆಸಲು ಹಾಗೂ ಬೆಳೆದ ಫಸಲನ್ನು ಸಾಗಿಸಲು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಸರ್ಕಾರ ತಿಳಿಸಿದೆ.




ಗ್ರಾಮ ನಕಾಶೆಯಲ್ಲಿ ನಮೂದಾಗಿರುವ ದಾರಿಗಳಲ್ಲಿ ರೈತರು ಸಂಚರಿಸಲು ಅವಕಾಶವಿದ್ದರೂ, ಕೆಲ ಭೂ ಮಾಲೀಕರು ಅಡ್ಡಿಪಡಿಸುವುದು ಅಥವಾ ದಾರಿಗಳನ್ನು ಮುಚ್ಚಿರುವುದು ಕಂಡುಬಂದಿದೆ. ವೈಯಕ್ತಿಕ ದ್ವೇಷ, ಅಸೂಯೆ ಹಾಗೂ ಹೊಂದಾಣಿಕೆಯ ಕೊರತೆಯಿಂದ ಇಂತಹ ಸಮಸ್ಯೆಗಳು ಉಂಟಾಗುತ್ತಿರುವುದಾಗಿ ಸರ್ಕಾರದ ಸುತ್ತೋಲೆಯಲ್ಲಿ ಉಲ್ಲೇಖಿಸಲಾಗಿದೆ.

**ದಾರಿ ಮುಚ್ಚಿದರೆ ತಹಶೀಲ್ದಾರ್‌ರಿಂದ ಕ್ರಮ:** ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 59ರಲ್ಲಿ ದಾರಿಯ ಹಕ್ಕುಗಳು ಹಾಗೂ ಇತರೆ ಅನುಭೋಗದ ಹಕ್ಕುಗಳ ಬಗ್ಗೆ ಅವಕಾಶ ಕಲ್ಪಿಸಲಾಗಿದೆ. ಸಂಬಂಧಪಟ್ಟ ಜಮೀನುಗಳ ಭಾಗಿದಾರರ ಒಪ್ಪಿಗೆಯಿರುವ ಸಂದರ್ಭದಲ್ಲಿ ಹಕ್ಕುಗಳ ದಾಖಲೆ ರಿಜಿಸ್ಟರ್‌ನಲ್ಲಿ ನಮೂದು ಮಾಡಲು ಅವಕಾಶವಿದೆ. ಇದೇ ವೇಳೆ, Indian Easement Act, 1882ರ ಅಡಿಯಲ್ಲಿ ಜಮೀನಿನ ಬಳಕೆದಾರರಿಗೆ ಭೂಮಿಯನ್ನು ಪ್ರವೇಶಿಸುವ ಹಾಗೂ ಅಗತ್ಯವಿರುವ ಅನುಭೋಗದ ಹಕ್ಕುಗಳಿಗೆ ಸಂಬಂಧಿಸಿದ ಕಾನೂನು ಅವಕಾಶಗಳಿವೆ ಎಂದು ಸುತ್ತೋಲೆಯಲ್ಲಿ ತಿಳಿಸಲಾಗಿದೆ. ಅಲ್ಲದೆ, Code of Criminal Procedure, 1973ರ ಕಲಂ 147ರ ಅನ್ವಯ ಭೂಮಿ ಮತ್ತು ನೀರಿನ ಹಕ್ಕಿನ ಉಪಯೋಗಕ್ಕೆ ಸಂಬಂಧಿಸಿದಂತೆ ಸ್ಥಳೀಯ ಶಾಂತಿಗೆ ಭಂಗ ಉಂಟಾಗುವ ಸಂದರ್ಭಗಳಲ್ಲಿ ತಹಶೀಲ್ದಾರ್‌ರು ತಾಲ್ಲೂಕು ಕಾರ್ಯ ನಿರ್ವಾಹಕ ಮ್ಯಾಜಿಸ್ಟ್ರೇಟ್‌ರಾಗಿ ಕ್ರಮಕೈಗೊಳ್ಳಲು ಅಧಿಕಾರ ಹೊಂದಿದ್ದಾರೆ ಎಂದು ತಿಳಿಸಲಾಗಿದೆ.

## ಸಮಾಜದ ಒಳಿತಿಗೆ ಎಐ ತಂತ್ರಜ್ಞಾನ ಬಳಸಿಕೊಳ್ಳುವುದು ಮುಖ್ಯ: ಡಾ.ನಿರ್ಮಲಾನಂದನಾಥ ಸ್ವಾಮೀಜಿ ಅಭಿಮತ

**ಬೆಂಗಳೂರು, ಸೆ.19:** ಮಾನವನ ಜೀವನದ ಪ್ರತಿ ಕ್ಷೇತ್ರದಲ್ಲೂ ಕೃತಕ ಬುದ್ಧಿಮತ್ತೆ (ಎಐ) ಕ್ರಾಂತಿಕಾರಕ ಬದಲಾವಣೆ ತರುತ್ತಿದೆ ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.


ಅಸೋಸಿಯೇಷನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ ಬೆಂಗಳೂರು ಕೇಂದ್ರ, ನಿಮ್ಹಾನ್ಸ್ ಕನ್ವೆನ್ಷನ್ ಸೆಂಟರ್‌ನಲ್ಲಿ ಆಯೋಜಿಸಿದ್ದ 'ಇಂಜಿನಿಯರ್ಸ್ ಡೇ' ಕಾರ್ಯಕ್ರಮದಲ್ಲಿ ಶ್ರೀಗಳು ಆಶೀರ್ವಚನ ನೀಡಿದ ಅವರು, ದಿನೇದಿನೆ ತಂತ್ರಜ್ಞಾನದಲ್ಲಿ ಬದಲಾವಣೆಯಾಗುತ್ತಿದೆ. ಎಐ ತಂತ್ರಜ್ಞಾನವು ಮನುಷ್ಯರು ಗಂಟೆಗಟ್ಟಲೆ ಮಾಡುವ ಕೆಲಸಗಳನ್ನು ಕೆಲವೆ ಸೆಕೆಂಡುಗಳಲ್ಲಿ ಮಾಡುತ್ತದೆ. ಇದರಿಂದ ಸಮಯ ಮತ್ತು ಶ್ರಮ ಎರಡೂ ಉಳಿತಾಯವಾಗುತ್ತದೆ. ಆದರೆ, ಇದನ್ನು ಅರ್ಥಪೂರ್ಣವಾಗಿ ಸಮಾಜದ ಒಳತಿಗಾಗಿ ಹೇಗೆ ಬಳಸಿಕೊಳ್ಳಬೇಕು ಎಂಬುದು ಮುಖ್ಯವಾಗುತ್ತದೆ. ದೇಶದ ಪ್ರಗತಿ ಮತ್ತು ಅಭಿವೃದ್ಧಿಯಲ್ಲಿ ಇಂಜಿನಿಯರ್‌ಗಳ ಕೊಡುಗೆ ಅತ್ಯಮೂಲ್ಯವಾಗಿದೆ. ಭಾರತದಂತಹ ವೇಗವಾಗಿ ಬೆಳೆಯುತ್ತಿರುವ ರಾಷ್ಟ್ರದಲ್ಲಿ ಮೂಲ ಸೌಕರ್ಯದಿಂದ ಹಿಡಿದು ಆಧುನಿಕ



ತಂತ್ರಜ್ಞಾನದವರೆಗೆ ಪ್ರತಿಯೊಂದು ಕ್ಷೇತ್ರದಲ್ಲೂ ಇಂಜಿನಿಯರ್‌ಗಳು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದು ಶ್ರೀಗಳು ತಿಳಿಸಿದರು.

ಸರ್ ಎಂ.ವಿಶ್ವೇಶ್ವರಯ್ಯ ಅವರು ಭಾರತ ಕಂಡ ಶ್ರೇಷ್ಠ ಇಂಜಿನಿಯರ್, ಆಡಳಿತಗಾರ ಮತ್ತು ದಾರ್ಶನಿಕ. ಕರ್ನಾಟಕದ ಪ್ರಗತಿ ಹಾಗೂ ಭಾರತದ ಕೈಗಾರಿಕಾ ರಂಗಕ್ಕೆ ಅವರು ನೀಡಿದ ಕೊಡುಗೆ ಅನನ್ಯವಾದದ್ದು. ಭಾರತವನ್ನು ಜಾಗತಿಕ ಐಟಿ ಹಬ್ (ಐಟಿ ಹಬ್) ಆಗಿ ಪರಿವರ್ತಿಸುವಲ್ಲಿ ಇಂಜಿನಿಯರ್ ಗಳ ಶ್ರಮ ದೊಡ್ಡದಿದೆ. ಬೆಂಗಳೂರು ಇಂದು ವಿಶ್ವದ ಸಿಲಿಕಾನ್‌ವ್ಯಾಲಿ ಎಂದು ಗುರುತಿಸಿಕೊಳ್ಳಲು ಇವರೇ ಕಾರಣ. ಸುಸ್ಥಿರ ನಗರಗಳ ಬೆಳವಣಿಗೆ ಒತ್ತು ಕೊಡುವ ಮೂಲಕ ಪರಿಸರ ಸಂರಕ್ಷಿಸುವ ಕೆಲಸಕ್ಕೆ ಇಂಜಿನಿಯರ್‌ಗಳು ಒತ್ತು ನೀಡುವ ಅಗತ್ಯವಿದೆ ಎಂದು ಶ್ರೀಗಳು ಹೇಳಿದರು.

## ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯಲ್ಲಿ ಗಣೇಶ ಚತುರ್ಥಿ



**ನವದೆಹಲಿ:** ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ವತಿಯಿಂದ 'ಗಣೇಶ ಚತುರ್ಥಿ' ಹಬ್ಬವನ್ನು ಭಕ್ತಿಪೂರ್ವಕವಾಗಿ ಆಚರಿಸಲಾಯಿತು.

ವಿದ್ಯಾ ಹಾಗೂ ಜ್ಞಾನದ ಅಧಿಪತಿಯಾದ ಗಣಪನಿಗೆ ಶಾಲಾ ಸಂಸ್ಕೃತ ಶಿಕ್ಷಕರು ಹಾಗೂ ಪಂಡಿತ ಡಾ. ಗಣೇಶ ಹೆಗಡೆ ಅವರ ಪೌರೋಹಿತ್ಯದಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿ ಹಾಗೂ ಗೌರವ ಖಜಾಂಜಿ ಕಾಶಿನಾಥ್ ಬಿರಾದರ್, ಶಾಲೆಯ ಗೌರವ ವ್ಯವಸ್ಥಾಪಕ ಉಮೇಶ್ ಬಿ. ಆರ್. ಹಾಗೂ ಪ್ರಾಂಶುಪಾಲ ಪ್ರಶಾಂತ್ ಕುಮಾರ್ ಅವರು ಪೂಜಾ ವಿಧಿ–ವಿಧಾನಗಳನ್ನು ನೆರವೇರಿಸಿದರು.

ಶಿಕ್ಷಕ ವೃಂದದವರಿಂದ ಭಜನಾ ಕಾರ್ಯಕ್ರಮವು ನೆರವೇರಿತು. ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಪ್ರಭಾರ ಅಧ್ಯಕ್ಷ ಡಾ. ಅವನೀಂದ್ರನಾಥ್ ರಾವ್, ಉಪಾಧ್ಯಕ್ಷೆ ವೀಣಾ ಜಗದೀಶ್, ಆಡಳಿತ ಮಂಡಳಿ ಸದಸ್ಯರಾದ ಗಿರೀಶ್ ಎಸ್., ವಸಂತ ಶೆಟ್ಟಿ ಬೆಳ್ಳಾರೆ, ರಾಧಾಕೃಷ್ಣ, ಬಿ. ಎನ್. ಮೋಹನ್ ಕುಮಾರ್, ಶಾಲಾ ಉಪಪ್ರಾಂಶುಪಾಲೆ ಪ್ರೇಮಲತಾ ಬಿ. ಉಪಸ್ಥಿತರಿದ್ದರು. ಶಿಕ್ಷಕ, ಶಿಕ್ಷಕೇತರ ವೃಂದದವರು, ಪೋಷಕರು ಪಾಲ್ಗೊಂಡು ವಿನಾಯಕನ ದರ್ಶನ ಪಡೆದರು. ಬಳಿಕ ಸಂಜೆ ವಿವಿಧ ಪೂಜಾ ವಿಧಿ–ವಿಧಾನಗಳನ್ನು ಪಡೆದ ಗಣಪನನ್ನು ಶಾಲಾ ವಠಾರದಲ್ಲಿ ವಿಸರ್ಜನೆ ಮಾಡಲಾಯಿತು.

## ಕೆಪಿಎಸ್‌ಸಿ ನೇಮಕಾತಿ ಹಗರಣದ ತನಿಖೆ ಚುರುಕು: ಜ್ಞಾನೇಂದ್ರ, ಕನ್ನಾಳೆ ವಶಕ್ಕೆ ಪಡೆದ ಇ.ಡಿ.

**ಬೆಂಗಳೂರು, ಸೆ.19:** ಕೆಪಿಎಸ್‌ಸಿ ನಡೆಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ನಡೆದಿದೆ ಎನ್ನಲಾದ ಪ್ರಶ್ನೆಪತ್ರಿಕೆ ಲೀಕ್ ಹಾಗೂ ಕೋಟ್ಯಂತರ ರೂಪಾಯಿ ಲಂಚ ಪ್ರಕರಣಕ್ಕೆ ಸಂಬಂಧಿಸಿದಂತೆ ಇ.ಡಿ. ತನಿಖೆ ಚುರುಕುಗೊಂಡಿದ್ದು, ವಿಚಾರಣೆಗೆ ಸಹಕರಿಸದ ಹಿನ್ನೆಲೆಯಲ್ಲಿ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಮತ್ತು ಮಧ್ಯವರ್ತಿ ಬಸವರಾಜು ಕನ್ನಾಳೆಯನ್ನು ಇ.ಡಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.

ಕಳೆದ ನಾಲ್ಕು ದಿನಗಳಿಂದ ಇ.ಡಿ. ಅಧಿಕಾರಿಗಳು ಇಬ್ಬರೂ ಆರೋಪಿಗಳನ್ನು ಜೈಲಿನಲ್ಲೇ ಸುದೀರ್ಘ ವಿಚಾರಣೆಗೆ ಒಳಪಡಿಸಿದ್ದರು. ಆದರೆ, ಅಧಿಕಾರಿಗಳ ಪ್ರಶ್ನೆಗಳಿಗೆ ಸರಿಯಾಗಿ ಸ್ಪಂದಿಸದೆ ವಿಚಾರಣೆಗೆ ಅಸಹಕಾರ ತೋರಿದ ಹಿನ್ನೆಲೆಯಲ್ಲಿ, ಇಡಿ ಅಧಿಕಾರಿಗಳು ಇಬ್ಬರನ್ನೂ ಬಂಧಿಸಿ, ತಡರಾತ್ರಿ



ಇ.ಡಿ ಸ್ಪೆಷಲ್ ಕೋರ್ಟ್ ನ್ಯಾಯಾಧೀಶರ ಮುಂದೆ ಹಾಜರುಪಡಿಸಿ ಹೆಚ್ಚಿನ ವಿಚಾರಣೆಗಾಗಿ ತಮ ವಶಕ್ಕೆ ಪಡೆದು ಇಡಿ ಕಚೇರಿಯಲ್ಲಿ ಇಬ್ಬರ ವಿಚಾರಣೆ ನಡೆಸುತ್ತಿದ್ದಾರೆ.

ನೇಮಕಾತಿ ಹಗರಣದಲ್ಲಿ ಅಭ್ಯರ್ಥಿಗಳಿಂದ ಕೋಟ್ಯಾಂತರ ರೂಪಾಯಿ ಲಂಚ ವಸೂಲಿ ಮಾಡಿರುವ ಗಂಭೀರ ಆರೋಪ ಜ್ಞಾನೇಂದ್ರ ಕುಮಾರ್ ಮೇಲಿದೆ. ಈ ಅಕ್ರಮ ಹಣದಿಂದ ಜ್ಞಾನೇಂದ್ರ ಅವರು ತಮ ಗೆಳತಿಗೆ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ಖರೀದಿಸಿ ನೀಡಿದ್ದರು. ಅಷ್ಟೇ ಅಲ್ಲದೆ, ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ತಮ ಅಣ್ಣನ ಹೆಸರಿನಲ್ಲಿ ಐಷಾರಾಮಿ ವಿಲ್ಲಾ ಖರೀದಿಸಿರುವುದು ಸಿಐಡಿ ತನಿಖೆ ವೇಳೆ ಬೆಳಕಿಗೆ ಬಂದಿದೆ.

## ಜ್ಞಾನದೊಂದಿಗೆ ವಿವೇಕ ರಾಧಾಕೃಷ್ಣರ ಆಶಯ: ಡಾ.ಅವನೀಂದ್ರನಾಥ್ ರಾವ್

**ನವದೆಹಲಿ:** ವಿದ್ಯಾರ್ಥಿಗಳಲ್ಲಿ ಜ್ಞಾನದೊಂದಿಗೆ ವಿವೇಕವನ್ನು ಬೆಳೆಸಬೇಕು ಎಂಬು ವುದು ಆದರ್ಶ ಶಿಕ್ಷಕ, ದಾರ್ಶನಿಕ ಮತ್ತು ಮಾಜಿ ರಾಷ್ಟ್ರಪತಿ ಡಾ. ಸರ್ವೆಪಲ್ಲಿ ರಾಧಾಕೃಷ್ಣರ ಆಶಯವಾಗಿತ್ತು ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ಪ್ರಭಾರ ಅಧ್ಯಕ್ಷ ಡಾ. ಅವನೀಂದ್ರನಾಥ ರಾವ್ ಅವರು ಹೇಳಿದರು.

ಅವರು ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯು ಜಿ. ಪಿ. ರಾಜರತ್ನಂ ಸಭಾಂಗಣದಲ್ಲಿ ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲೆಯ ಶಿಕ್ಷಕ, ಶಿಕ್ಷಕೇತರ ವೃಂದದವರಿಗೆ ಆಯೋಜಿಸಿದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಶಿಕ್ಷಕರು ಕೇವಲ ಪಾಠ ಹೇಳಿಕೊಡುವವರಲ್ಲ; ಅವರು ನಮ್ಮ ಭವಿಷ್ಯವನ್ನು ರೂಪಿಸುವ ಶಿಲ್ಪಿಗಳು. ಸಮಾಜಕ್ಕೆ ಯೋಗ್ಯ ನಾಗರಿಕರನ್ನು ಕೊಡುಗೆಯಾಗಿ ನೀಡಲು ಅವರು ತಮ್ಮ ಇಡೀ ಜೀವನವನ್ನೇ ಧಾರೆ ಎರೆಯುತ್ತಾರೆ. ಅಂತಹ ಗುರುಗಳ ಶ್ರಮವನ್ನು ಗುರುತಿಸಿ, ಅವರಿಗೆ ಸದಾ ಕೃತಜ್ಞರಾಗಿರುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಹಾಗೂ ಸಮಾಜದ ಜವಾಬ್ದಾರಿಯಾಗಿದೆ ಎಂದರು.

ದೆಹಲಿ ಕನ್ನಡ ಹಿರಿಯ ಮಾಧ್ಯಮಿಕ ಶಾಲಾ ಗೌರವ ವ್ಯವಸ್ಥಾಪಕ ಉಮೇಶ್ ಬಿ. ಆರ್. ಅವರು ಶಿಕ್ಷಕರಿಗೆ ಶುಭ ಹಾರೈಸಿ ಮಾತನಾಡಿ ಭಾರತೀಯ ಪರಂಪರೆಯಲ್ಲಿ ಶಿಕ್ಷಕ ವೃತ್ತಿಗೆ ಮಹತ್ವದ ಸ್ಥಾನವಿದೆ. ವಿದ್ಯಾರ್ಥಿಗಳಿಗೆ ಶಿಕ್ಷಕರೇ ಮೊದಲ ಆದರ್ಶ. ಗುಣಮಟ್ಟದ ಶಿಕ್ಷಣಕ್ಕಾಗಿ ಶಿಕ್ಷಕರೆಲ್ಲರೂ ಶ್ರಮಿಸುತ್ತಿರುವುದು ಅನುಸರಣೀಯ ಎಂದು ಹೇಳಿದರು.

ಸಂಸ್ಥೆಯ ವತಿಯಿಂದ ಶಾಲಾ ಶಿಕ್ಷಕ, ಶಿಕ್ಷಕೇತರ ವೃಂದದವರಿಗೆ ಉಡುಗೊರೆಯನ್ನು ನೀಡಿ ಗೌರವಿಸಲಾಯಿತು., ಸಂಸ್ಥೆಯ ಉಪಾಧ್ಯಕ್ಷೆ ಎಂ. ವೀಣಾ ಜಗದೀಶ್, ಪ್ರಭಾರ ಗೌರವ ಕಾರ್ಯದರ್ಶಿ ಹಾಗೂ ಗೌರವ ಖಜಾಂಚಿ ಕಾಶೀನಾಥ ಬಿರಾದರ್, ಆಡಳಿತ ಸಮಿತಿ ಸದಸ್ಯರಾದ ಗಿರೀಶ್ ಎಸ್., ಹರಿಪ್ರಿಯಾ ಎಸ್., ವಸಂತ ಶೆಟ್ಟಿ ಬೆಳ್ಳಾರೆ, ಡಾ. ಅಶೋಕ್ ಗೋನಾಳ್, ಮೋಹನ್ ಕುಮಾರ್ ಬಿ.ಎನ್., ಉಪಸ್ಥಿತರಿದ್ದರು.

## ಅರಣ್ಯ ಹಕ್ಕು ಹೋರಾಟಗಾರರ ವರದಿ ಬಿಡುಗಡೆ

### ಕಸ್ತೂರಿ ರಂಗನ್ ವರದಿಯಲ್ಲಿ ಗುರುತಿಸಲಾಗಿರುವ 1502 ಗ್ರಾಮಗಳನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸಲು ಶಿಫಾರಸು

**ಬೆಂಗಳೂರು, ಸೆ.19:** ಗ್ರಾಮದ ಕನಿಷ್ಠ 20 ಪ್ರತಿಶತದಷ್ಟು ಪ್ರದೇಶವು ಪರಿಸರ ಸೂಕ್ಷ್ಮ ಪ್ರದೇಶ ಎಂದು ಕಂಡುಬಂದರೆ, ಉಳಿದ 80% ಪ್ರದೇಶ ನಗರೀಕರಣಗೊಂಡಿದ್ದರೂ ಇಡೀ ಗ್ರಾಮವನ್ನು ಇಎಸ್‌ಎ ಎಂದು ಪರಿಗಣಿಸುವ ನೀತಿಯನ್ನು ಕಸ್ತೂರಿ ರಂಗನ್ ವರದಿ ಅಳವಡಿಸಿಕೊಂಡಿದೆ. ಇದರ ಆಧಾರದ ಮೇಲೆ ಕರ್ನಾಟಕದ 1502 ಗ್ರಾಮಗಳನ್ನು ಇಎಸ್‌ಎ ಎಂದು ಘೋಷಿಸಲು ಶಿಫಾರಸ್ಸು ಮಾಡಿದೆ.

ಇಂತಹ ಹಲವಾರು ತಕರಾರು ಅಂಶಗಳನ್ನು ಹೊಂದಿರುವ ಕಿರು ವರದಿಯನ್ನು ಇತ್ತೀಚೆಗೆ ರಾಜ್ಯ ಅರಣ್ಯ ಭೂಮಿ ಹಕ್ಕು ಹೋರಾಟಗಾರರ ವೇದಿಕೆ ಬಿಡುಗಡೆ ಮಾಡಿದೆ.

ಈ ವೇದಿಕೆಯೊಂದಿಗೆ ಹಲವು ವರ್ಷಗಳಿಂದ ಒಡನಾಡ ಹೊಂದಿದ್ದು, ಸಲಹೆ ಸೂಚನೆಗಳನ್ನು ನೀಡುತ್ತಾ ಬಂದಿರುವ ಕರ್ನಾಟಕ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಎಚ್. ಎನ್. ನಾಗಮೋಹನ ದಾಸ್ ಅವರು ವರದಿಯನ್ನು ಬಿಡುಗಡೆ ಮಾಡಿದ್ದಾರೆ. ಜನರಿಗೆ ತೊಂದರೆಯಾಗುವ, ಅವೈಜ್ಞಾನಿಕ ಅಂಶಗಳನ್ನು ಸಂಗ್ರಹಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸಲು ಶಿಫಾರಸು ಪಟ್ಟಿ ತಯಾರಿಸಲಾಗಿತ್ತು. ಪಟ್ಟಿ ಬಿಡುಗಡೆ ಮಾಡಿದ ಬಳಿಕ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಸಲ್ಲಿಸಲಾಯಿತು.

ಭೌತಿಕ ಸಮೀಕ್ಷೆ ಮತ್ತು ಗ್ರಾಮ ಸಭೆ ನಿರ್ಣಯ ಮಾಡಲು ಆಗ್ರಹಿಸಲಾಯಿತು ಎಂದು ವೇದಿಕೆ ಅಧ್ಯಕ್ಷ ರವೀಂದ್ರನಾಯ್ಕ ಹೇಳಿದ್ದಾರೆ.

ಕಸ್ತೂರಿರಂಗನ್ ಸಮಿತಿ ಸದಸ್ಯರು ಪಶ್ಚಿಮ ಘಟ್ಟದ ಹಳ್ಳಿಗಳಿಗೆ ಭೇಟಿ ನೀಡದೇ ಉಪಗ್ರಹ ಚಿತ್ರಗಳನ್ನು ಆಧಾರವಾಗಿಟ್ಟುಕೊಂಡು ಪರಿಸರ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿದ್ದಾರೆ.

ಹೀಗಾಗಿ ಕೃಷಿ ಚಟುವಟಿಕೆಯ ಪ್ರದೇಶವನ್ನೂ ನೈಸರ್ಗಿಕ ಅರಣ್ಯ ಎಂದು ತಪ್ಪಾಗಿ ವರ್ಗೀಕರಿಸಲಾಗಿದೆ ಎಂಬುದು ಅರಣ್ಯ ಭೂಮಿ ಹಕ್ಕು ವೇದಿಕೆಯ ಆತಂಕ.

ಕಸ್ತೂರಿ ರಂಗನ್ ವರದಿಯಲ್ಲಿನ ಅವೈಜ್ಞಾನಿಕ ಅಂಶಗಳನ್ನು ವೇದಿಕೆ ಪಟ್ಟಿ ಮಾಡಿದ್ದು, ಪರಿಸರ ಸಂರಕ್ಷಣಾ ವಲಯಗಳ ಸುತ್ತಲಿನ 10 ಕಿ.ಮೀ. ಪ್ರದೇಶಗಳನ್ನು ಬಫರ್ ವಲಯವೆಂದು ಗುರುತಿಸಿರುವುದು, ವರದಿ ತಯಾರಿಸುವಾಗ ಜನಪ್ರತಿನಿಧಿಗಳನ್ನು, ಗ್ರಾಮ ಸಭೆಗಳನ್ನು, ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳನ್ನು ಗಣನೆಗೆ ತೆಗೆದುಕೊಳ್ಳದೇ ಇರುವುದು ಅವೈಜ್ಞಾನಿಕ ವರದಿಗೆ ಕಾರಣ ಎಂಬುದು ವೇದಿಕೆಯ ಆರೋಪವಾಗಿದೆ. ಕಸ್ತೂರಿ ರಂಗನ್ ವರದಿಯಲ್ಲಿ ಸಾಂಸ್ಕೃತಿಕ ಮತ್ತು ನೈಸರ್ಗಿಕ ಭೂಪ್ರದೇಶಗಳನ್ನು ತಪ್ಪಾಗಿ ವಿಂಗಡಿಸಲಾಗಿದೆ. ಜನವಸತಿ ಪ್ರದೇಶಗಳು, ಕೃಷಿಭೂಮಿ ಮತ್ತು ಗ್ರಾಮೀಣ ಮೂಲಸೌಕರ್ಯಗಳನ್ನು ಇಎಸ್‌ಎ ವಲಯದೊಳಗೆ ಸೇರಿಸಲಾಗಿದೆ.

ಏಲಕ್ಕಿ, ಕರಿಮೆಣಸು, ರಬ್ಬರ್, ಕಾಫಿ ಮತ್ತು ಗಾರ್ಸಿನಿಯಾ ತೋಟಗಳನ್ನು ಕಾಡುಗಳೆಂದು ತಪ್ಪಾಗಿ ಗ್ರಹಿಸಲಾಗಿದೆ. 100ಕ್ಕಿಂತ ಕಡಿಮೆ ಜನಸಂಖ್ಯೆ ಸಾಂದ್ರತೆ ಹೊಂದಿರುವ ಪ್ರದೇಶಗಳನ್ನು ಇಎಸ್‌ಎ ಎಂದು ಪರಿಗಣಿಸಿರುವುದು ಅವೈಜ್ಞಾನಿಕ ಎಂದು ವೇದಿಕೆ ವರದಿಯಲ್ಲಿ ತಿಳಿಸಿದೆ.

**ಅರಣ್ಯ ಸಂರಕ್ಷಣೆ ಹೆಸರಲ್ಲಿ ಒಕ್ಕಲೆಬ್ಬಿಸದಿರಿ:** ನ್ಯಾ.ನಾಗಮೋಹನ ದಾಸ್ ಕಸ್ತೂರಿ ರಂಗನ್ ವರದಿಯ ಸಂಬಂಧ ಪ್ರತಿಕ್ರಿಯಿಸಿದ ಜಸ್ಟೀಸ್ ಎಚ್. ಎನ್. ನಾಗಮೋಹನ ದಾಸ್ ಅವರು, ಅರಣ್ಯ ಸಂರಕ್ಷಣೆಯ ಹೆಸರಲ್ಲಿ ಜನರನ್ನು ಒಕ್ಕಲೆಬ್ಬಿಸಬಾರದು ಎಂದು ಎಚ್ಚರಿಸಿದರು. ನಮ್ಮ ಸರ್ಕಾರಗಳು, ಅರಣ್ಯ ಉಳಿಸಬೇಕು ಎಂದು ತೋರಿಸುವ ಆಸಕ್ತಿ ಪ್ರಶಂಸನೀಯ. ಅದನ್ನ ಯಾರು ವಿರೋಧ ಮಾಡಬೇಕಾಗಿಲ್ಲ.

ಪ್ರಕೃತಿಯ ನಿಯಮದ ಪ್ರಕಾರ, ಜಗತ್ತಿನಾದ್ಯಂತ, ಮೂರನೇ ಒಂದು ಭಾಗದಷ್ಟು ಯಾವಾಗಲೂ ಅರಣ್ಯ ಇರಬೇಕು. ಆದರೆ ಅನೇಕ ಕಾರಣಗಳಿಗಾಗಿ, ಭಾರತ ದೇಶದಲ್ಲಿ ಅರಣ್ಯವು ಶೇ. 22–23ಕ್ಕೆ ಇಳಿದಿದೆ. ಇದ್ದಿದ್ದನ್ನು ನಾವು ಕಳೆದುಕೊಳ್ಳಬಾರದು. ಕಾಡು ಉಳಿದಿದೆ ಅಂದರೆ, ಅದಕ್ಕೆ ಅರಣ್ಯವಾಸಿಗಳು ಕಾರಣ. ಹಾಗಾಗಿ ನಮ್ಮ ಅರಣ್ಯನ ಉಳಿಸಬೇಕು ಅಂದಾಗ, ಅಲ್ಲಿನ ಜನರನ್ನು ಉಳಿಸಬೇಕು.

ಕಾಡಿನಲ್ಲಿ ನೂರಾರು ಸಾವಿರಾರು ವರ್ಷಗಳಿಂದ ಇರುವ ಬುಡಕಟ್ಟು ಜನಾಂಗಳನ್ನು ಉಳಿಸಬೇಕು. ಇವರನ್ನು ಹೊರಗೆ ಹಾಕುವುದರಿಂದ ಕಾಡನ್ನು ಉಳಿಸಲು ಆಗುವುದಿಲ್ಲ.

ಕಸ್ತೂರಿರಂಗನ್ ವರದಿಯಲ್ಲಿ ಇರುವುದೆಲ್ಲವೂ ಕೆಟ್ಟದ್ದಲ್ಲ. ಗಣಿಗಾರಿಕೆ ಬಗ್ಗೆ ಇರುವ ಅಂಶಗಳನ್ನು ಕಡೆಗಣಿಸಬೇಕಿಲ್ಲ. ಬೃಹತ್ತಾದ ಅಣೆಕಟ್ಟುಗಳ ಬಗ್ಗೆ ಇರುವ ಪ್ರಸ್ತಾಪಗಳಿಗೆ ತಕರಾರು ತೆಗೆಯಬೇಕಿಲ್ಲ ಎಂದು ಸ್ಪಷ್ಟಪಡಿಸಿದರು.

## ಕೆಎಸ್‌ಆರ್‌ಪಿ ಕಾನ್ಸ್‌ಟೇಬಲ್ ನೇಮಕಾತಿ ಪರೀಕ್ಷೆ ಇಂದು

**ಬೆಂಗಳೂರು, ಸೆ.19:** ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ) ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಸೆ.20ರಂದು ಲಿಖಿತ ಪರೀಕ್ಷೆ ನಡೆಸುತ್ತಿದ್ದು, ಎಲ್ಲೆಡೆ ವ್ಯಾಪಕ ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಬೆಂಗಳೂರು ಸೇರಿದಂತೆ ಒಟ್ಟು 8 ಜಿಲ್ಲೆಗಳ 333 ಕೇಂದ್ರಗಳಲ್ಲಿ ಮಿಕ್ಕುಳಿದ ವೃಂದ ಹಾಗೂ ಕಲ್ಯಾಣ ಕರ್ನಾಟಕದ ಅಭ್ಯರ್ಥಿಗಳಿಗೆ ನಾಲ್ಕು ಜಿಲ್ಲೆಗಳ 85 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಬೆಳಗ್ಗೆ 10.30ಕ್ಕೆ ಮಿಕ್ಕುಳಿದ ವೃಂದದವರಿಗೆ ಪರೀಕ್ಷೆ ಆರಂಭವಾದರೆ, ಕಲ್ಯಾಣ ಕರ್ನಾಟಕ ವೃಂದದವರಿಗೆ ಮಧ್ಯಾಹ್ನ 3ರಿಂದ ಆರಂಭವಾಗಲಿದೆ ಎಂದು ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಮಿಕ್ಕುಳಿದ ವೃಂದದಲ್ಲಿ 1,42,912



ಮಂದಿ ಹಾಗೂ ಕಲ್ಯಾಣ ಕರ್ನಾಟಕ ವೃಂದದಲ್ಲಿ 38,332 ಮಂದಿ ಅರ್ಜಿ ಸಲ್ಲಿಸಿದ್ದು, ಇಷ್ಟೂ ಮಂದಿಗೆ ಪರೀಕ್ಷೆ ನಡೆಯಲಿದೆ ಎಂದು ಅವರು ವಿವರಿಸಿದ್ದಾರೆ.

ಪರೀಕ್ಷಾ ಅಕ್ರಮಗಳಿಗೆ ಯಾವುದೇ ಅವಕಾಶ ಇರುವುದಿಲ್ಲ. ವಸ್ತ್ರ ಸಂಹಿತೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಕ್ಯಾಮರಾ ಕಣ್ಗಾವಲು ಇರುತ್ತದೆ. ಅಲ್ಲದೆ ವೆಬ್‌ಕಾಸ್ಟಿಂಗ್ ಕೂಡ ಮಾಡುತ್ತಿದ್ದು, ಅಭ್ಯರ್ಥಿಗಳು ಎಚ್ಚರಿಕೆಯಿಂದ ಪರೀಕ್ಷೆ ಬರೆಯಬೇಕು ಎಂದು ಅವರು ಹೇಳಿದರು.

### ಅಂತಿಮವಾಗಿ ಮತದಾರರ ಪಟ್ಟಯಿಂದ ಹೊರಗುಳಿದವರೆಷ್ಟು: ಜಾಗೃತ ಕರ್ನಾಟಕ ಒತ್ತಾಯ

**ಬೆಂಗಳೂರು, ಸೆ.19:** ರಾಜ್ಯದಲ್ಲಿ ಕರಡು ಮತದಾರರ ಪಟ್ಟಿ ಬಿಡುಗಡೆಯಾದ ಬಳಿಕ, ಲಕ್ಷಾಂತರ ಮತದಾರರಿಗೆ ನೋಟಿಸ್ ಜಾರಿ ಮತ್ತು ವಿಚಾರಣೆಗಳು ನಡೆದ ನಂತರ, ಅಂತಿಮವಾಗಿ ಎಷ್ಟು ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗುತ್ತದೆ ಎಂಬುದನ್ನು ಸಾರ್ವಜನಿಕವಾಗಿ ಪ್ರಕಟಿಸುವಂತೆ ಚುನಾವಣಾ ಆಯೋಗವನ್ನು ಜಾಗೃತ ಕರ್ನಾಟಕ ಆಗ್ರಹಿಸಿದೆ. ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯು ಇತ್ತೀಚೆಗೆ ಬಿಡುಗಡೆ ಮಾಡಿರುವ ಪತ್ರಿಕಾ ಪ್ರಕಟಣೆಯ ಅಂಕಿಅಂಶಗಳನ್ನು ಉಲ್ಲೇಖಿಸಿ ಜಾಗೃತ ಕರ್ನಾಟಕ ಸಂಘಟನೆ ಪತ್ರಿಕಾ ಹೇಳಿಕೆ ನೀಡಿದೆ. ಎಸ್‌ಐಆರ್‌ನ ಎಲ್ಲ ಹಂತದ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಪ್ರಶ್ನಿಸಿದೆ. ಆಯೋಗದ ಪ್ರಕಟಣೆಯ ಪ್ರಕಾರ, ರಾಜ್ಯಾದ್ಯಂತ ಒಟ್ಟು 43.81 ಲಕ್ಷಕ್ಕೂ ಅಧಿಕ ನೋಟಿಸ್‌ಗಳನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ. ಈ ಪೈಕಿ 34.96 ಲಕ್ಷಕ್ಕೂ ಹೆಚ್ಚು ನೋಟಿಸ್‌ಗಳನ್ನು ಸಾರ್ವಜನಿಕರಿಗೆ ವಿತರಿಸಲಾಗಿದ್ದು, 8.85 ಲಕ್ಷಕ್ಕೂ ಅಧಿಕ ನೋಟಿಸ್‌ಗಳ ವಿತರಣೆ ಬಾಕಿ ಉಳಿದಿದೆ. ನೋಟಿಸ್‌ಗಳ ಪೈಕಿ 17.63 ಲಕ್ಷಕ್ಕೂ ಹೆಚ್ಚು ಪ್ರಕರಣಗಳಲ್ಲಿ ವಿಚಾರಣೆ ಪ್ರಕ್ರಿಯೆ ಮುಕ್ತಾಯಗೊಂಡಿದ್ದು, 17.33 ಲಕ್ಷಕ್ಕೂ ಅಧಿಕ ಪ್ರಕರಣಗಳ ವಿಚಾರಣೆ ಬಾಕಿಯಿದೆ.

## ನೈಸ್ ಯೋಜನೆ ಬಗ್ಗೆ ಹೈಕೋರ್ಟ್ ಆದೇಶ ಜಾರಿಗೊಳಿಸಿ: ಸಿಪಿಐಎಂ ಆಗ್ರಹ





**ಬೆಂಗಳೂರು, ಸೆ.19:** ರಾಜ್ಯ ಹೈಕೋರ್ಟ್ ಜುಲೈ 29ರಂದು ನೈಸ್ ಭೂಮಿಯನ್ನು ರೈತರಿಗೆ ವಾಪಸು ನೀಡಬೇಕೆಂದು ಮತ್ತು ಅಕ್ರಮವಾಗಿ ಸಂಗ್ರಹಿಸುತ್ತಿರುವ ಟೋಲ್ ಸಂಗ್ರಹ ನಿಲ್ಲಿಸಬೇಕೆಂದು ತೀರ್ಪು ನೀಡಿದ್ದರೂ ಅದನ್ನು ಜಾರಿಗೆ ತರದ ಡಿ.ಕೆ. ಶಿವಕುಮಾರ್ ಸರ್ಕಾರ, ಭೂಮಿ ಕಳೆದುಕೊಂಡ ರೈತರನ್ನು, ರೈತ–ಕಾರ್ಮಿಕ ಸಂಘಗಳ ಮುಖಂಡರನ್ನು ಬಂಧಿಸಲು ಹೊರಟಿರುವ ಸಿಪಿಐಎಂ ರಾಜ್ಯ ಸಮಿತಿ ತೀವ್ರವಾಗಿ ಖಂಡಿಸಿದೆ.

ಕರ್ನಾಟಕ ಹೈಕೋರ್ಟ್‌ನ ತೀರ್ಪಿನ ಆಧಾರದಲ್ಲಿ ನೈಸ್ ಭೂಮಿಯನ್ನು ರೈತರಿಗೆ ವಾಪಸ್ ಮಾಡುವುದು ಮತ್ತು ಅಕ್ರಮವಾದ ಟೋಲ್ ಸಂಗ್ರಹವನ್ನು ನಿಲ್ಲಿಸಬೇಕೆಂದು ಇಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಇದನ್ನು ದಮನ ಮಾಡಲು ರಾಜ್ಯ ಸರ್ಕಾರ ಮುಖಂಡರನ್ನು ಬಂಧಿಸುವ ಕೆಲಸ ಮಾಡುತ್ತಿದೆ ಎಂದು ಸಿಪಿಐಎಂ ತಿಳಿಸಿದೆ.

ಕರ್ನಾಟಕ ಪ್ರಾಂತ ರೈತ ಸಂಘದ ರಾಜ್ಯ ಅಧ್ಯಕ್ಷರಾದ ಯು.ಬಸವರಾಜು, ಮುಖಂಡರಾದ ಎನ್.ವೆಂಕಟಾಚಲಯ್ಯ, ಶಿವಣ್ಣ, ಚಂದ್ರಣ್ಣ, ಕಾರ್ಮಿಕ ಮುಖಂಡರಾದ ಮಹಾಂತೇಶ್ ಮತ್ತು ಇತರರನ್ನು ಬಂಧಿಸಲಾಗಿದೆ. ಇನ್ನೂ ಕೆಲವರನ್ನು ಬಂಧಿಸಲು ಪ್ರಯತ್ನಗಳು ನಡೆದಿವೆ. ಹೈಕೋರ್ಟ್‌ನ ಆದೇಶ ಇದೆಯೆಂದು ಫ್ರೀಡಂ ಪಾರ್ಕ್ ಹೊರತುಪಡಿಸಿ ಬೇರೆಡೆ ಪ್ರತಿಭಟನೆ ನಡೆಸಲು ಅವಕಾಶ ನೀಡದ ಸರ್ಕಾರ, ನೈಸ್ ವಿರುದ್ಧ ನೀಡಿರುವ ತೀರ್ಪನ್ನು 50 ದಿನ ಕಳೆದರೂ ಜಾರಿ ಮಾಡದೆ, ಪ್ರಜಾಸತ್ತಾತ್ಮಕವಾಗಿ ಪ್ರತಿಭಟನೆ ನಡೆಸಲು ಅವಕಾಶ ನೀಡುತ್ತಿಲ್ಲ. ಕರ್ನಾಟಕದ ಜನತೆ ಇದನ್ನು ವಿರೋಧಿಸಬೇಕಾಗಿದೆ ಎಂದು ಸಿಪಿಐಎಂ ಹೇಳಿದೆ.

ಇದನ್ನು ಖಂಡಿಸಿ, ಪಕ್ಷದ ಸಮಿತಿಗಳು, ಸಮೂಹ ಸಂಘಟನೆಗಳು ಮತ್ತು ಹಿತೈಷಿ ಸಂಘಟನೆಗಳನ್ನು ಒಳಗೊಂಡು ರಾಜ್ಯದ ಎಲ್ಲಾ ಕಡೆಗಳಲ್ಲೂ ಪ್ರತಿಭಟನೆಗಳನ್ನು ನಡೆಸಲು ಸಿಪಿಐಎಂ ಕರೆ ನೀಡಿದೆ.

ಬಂಧಿತರರನ್ನು ಕೂಡಲೇ ಬಿಡುಗಡೆ ಮಾಡಬೇಕು, ಪ್ರತಿಭಟನೆಗೆ ಅವಕಾಶ ನೀಡಬೇಕು ಹಾಗೂ ನೈಸ್ ಕಂಪನಿ ವಿರುದ್ಧ ಹೈಕೋರ್ಟ್ ತೀರ್ಪಿನ ಅನ್ವಯ ಭೂಮಿಯನ್ನು ರೈತರಿಗೆ ವಾಪಾಸು ನೀಡಬೇಕು ಮತ್ತು ಟೋಲ್ ಸಂಗ್ರಹಿಸುವುದನ್ನು ನಿಲ್ಲಿಸಬೇಕೆಂದು ಸಿಪಿಐಎಂ ಆಗ್ರಹಿಸಿದೆ.




ಬೆಂಗಳೂರಿನ ಕೊಂಡಜ್ಜಿ ಬಸಪ್ಪ ಭವನದಲ್ಲಿ ಶನಿವಾರ ಮಾಜಿ ಸಿಎಂ ಸಿದ್ದರಾಮಯ್ಯ ಅವರು 'ಪಿಜಿಆರ್ ಸಿಂಧಿಯಾ 'ಜೀವನ ಸೇವೆ' ಬಿಡುಗಡೆ ಮಾಡಿದರು. ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಮಾಜಿ ಸಚಿವ ಪಿಜಿಆರ್ ಸಿಂಧ್ಯಾ, ಸಚಿವರಾದ ಈಶ್ವರ ಖಂಡ್ರೆ, ಬಸವರಾಜ ರಾಯರೆಡ್ಡಿ, ಯು.ಟಿ.ಖಾದರ್ ಕಾಣಿಸಿಕೊಂಡಿದ್ದಾರೆ.

# ಮುಂಗಾರು ಸಂಪೂರ್ಣ ವಿಫಲ, ಬರ ಘೋಷಿಸದಿದ್ದರೆ ಅರಬೆತ್ತಲೆ ಹೋರಾಟ: ಶಾಸಕ ಶರಣು ಸಲಗರ ಎಚ್ಚರಿಕೆ

**ಬೀದರ, ಸೆ. 19:** ಮುಂಗಾರು ಮಳೆ ಬಾರದೇ ಬೆಳೆ ಸಂಪೂರ್ಣ ವಿಫಲಗೊಂಡಿದೆ. ಎರಡು ವಾರದಿಂದ ಹುಲಸೂರು ತಾಲೂಕು ಬರಪೀಡಿತ ಘೋಷಿಸಬೇಕು ಎಂದು ಆಗ್ರಹಿಸಿ ವಿವಿಧ ಗ್ರಾಮದ ರೈತರು ಹೋರಾಟ ಮಾಡುತ್ತಿದ್ದರೂ ಸರ್ಕಾರ ಎಚ್ಚೆತ್ತುಕೊಳ್ಳುತ್ತಿಲ್ಲ. ಬರುವ ಅಧಿವೇಶನಕ್ಕೂ ಮುನ್ನ ಬರ ಘೋಷಿಸದಿದ್ದರೆ ವಿಧಾನಸೌಧದ ಮುಂದೆ ಅರಬೆತ್ತಲೆ ಧರಣಿ ಮಾಡುತ್ತೇನೆ ಎಂದು ಶಾಸಕ ಶರಣು ಸಲಗರ ಎಚ್ಚರಿಸಿದರು.

ಹುಲಸೂರ ಪಟ್ಟಣದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಳೆದ ವರ್ಷ ಅತಿವೃಷ್ಟಿಯಿಂದ ರೈತರ ಬದುಕು ಬರಡಾದರೆ, ಈ ವರ್ಷ ಅನಾವೃಷ್ಟಿಯಿಂದ ಜೀವನ ಹಾಳಾಗಿದೆ. ಸರ್ಕಾರ ರೈತರ ಸಮಸ್ಯೆಗೆ ಸ್ಪಂದಿಸದಿದ್ದರೆ ಉಗ್ರ ಹೋರಾಟ ಮಾಡಲಾಗುವುದು ಎಂದರು.



ರೈತ ಪ್ರಮುಖ ಅನಿಲ ತಾಂಬೋಳೆ ಮಾತನಾಡಿ, ಸರ್ಕಾರದ ಚರ್ಮ ದಪ್ಪಾಗಿದೆ. ಜಿಲ್ಲೆಯ ಕೆಲ ತಾಲೂಕುಗಳನ್ನು ಬರ ಘೋಷಿಸಿ ನಮಗೆ ಅನ್ಯಾಯ ಮಾಡಿದೆ. ರೈತರು ಸುಮ್ಮನೆ ಕುಳಿತುಕೊಳ್ಳುವ ಸಮಯ ಇದಲ್ಲ. ರಸ್ತೆಗಿಳಿದು ಉಗ್ರ ಹೋರಾಟ ಮಾಡಿದಾಗಲೇ ನ್ಯಾಯ ದೊರೆಯುತ್ತದೆ ಎಂದು ಗುಡುಗಿದರು. ರೈತ ಮುಖಂಡರಾದ ಮಲ್ಲಿಕಾರ್ಜುನ ಸ್ವಾಮಿ, ಡಾ.ಶಂಕರಗೌಡ, ದೇವಾನಂದ ಕುಡದೆ, ಸಂತೋಷ ಭರಮಶೆಟ್ಟೆ ಮಾತನಾಡಿದರು.

ಹೋರಾಟದಲ್ಲಿ ಜಿಪಂ ಮಾಜಿ ಸದಸ್ಯ ಸುಧೀರ ಕಾಡಾದಿ, ಗಡಿಗೌಂಡಗಾವ ಪಿಕೆಪಿಎಸ್ ಅಧ್ಯ ಹರ್ಷಾಂತ ಅಳ್ಳೆ, ಹುಲಸೂರು ಪಿಕೆಪಿಎಸ್ ಅಧ್ಯಕ್ಷ ಭಾಗವತ ಜಾನಬಾ, ಪ್ರಮುಖರಾದ ದತ್ತು ರಾಜ, ಬಸವರಾಜ ಚೌರೆ, ಸೂರ್ಯಕಾಂತ ಚಿಲ್ಲಾಬಟ್ಟೆ, ಗೋವಿಂದರಾವ ಸೋಮವಂಶಿ, ಚಂದ್ರಕಾಂತ ದೇಟ್ನೆ, ರಾಜಕುಮಾರ ನಿಡೋದೆ, ಬಸವರಾಜ ಹಾರಕೂಡೆ, ಧೊಂಡಿಬಾ ನಿಟ್ಟೂರೆ, ಡಾ.ನಾಗನಾಥ ತೊಗರಗೆ, ಪ್ರಕಾಶ ಮೆಂಡೋಳೆ, ಸತೀಶ ಹಿರೇಮಠ, ಸುನಿಲ ಭುಜಂಗೆ, ಮಾಡೋಳಪ್ಪ ಖಪಲೆ, ಶಿವಕುಮಾರ ಕನ್ನಾಡೆ ಇತರರು ಪಾಲ್ಗೊಂಡಿದ್ದರು. ತಹಸೀಲ್ದಾರ್ ಶಿವಾನಂದ ಮೇತ್ರೆ, ಕಂದಾಯ ಅಧಿಕಾರಿಗಳು ಹಾಜರಿದ್ದರು.

ಬೃಹತ್ ಮೆರವಣಿಗೆಪಟ್ಟಣದ ಸಾಯಿಬಾಬಾ ದೇವಸ್ಥಾನದಿಂದ ಶುರುವಾದ ಪ್ರತಿಭಟನಾ ಮೆರವಣಿಗೆ ಶಿವಾಜಿ ಚೌಕ್, ಮುಖ್ಯರಸ್ತೆ ಮೂಲಕ ಬಸವೇಶ್ವರ ವೃತ್ತದವರೆಗೆ ನಡೆಯಿತು. ರೈತರು ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತ ಮಳೆ ಇಲ್ಲದೆ ಒಣಗಿದ ಸೋಯಾ, ಉದ್ದು, ಹೆಸರು, ತೊಗರಿ ಬೆಳೆಗಳನ್ನು ಕೈಯಲ್ಲಿ ಹಿಡಿದು ಆಕ್ರೋಶ ವ್ಯಕ್ತಪಡಿಸಿದರು.

ಬೀದರ್-ಲಾತೂರ್ ರಾಷ್ಟ್ರೀಯ ಹೆದ್ದಾರಿ ಸಂಚಾರ ಬಂದ್ ಮಾಡಿ ರಸ್ತೆಯಲ್ಲಿ ಕುಳಿತುಕೊಳ್ಳಲು ಎಷ್ಟೇ ಪ್ರಯತ್ನಿಸಿದರೂ ಪೊಲೀಸರು ಆಸ್ಪದ ಕೊಡದ್ದರಿಂದ ಪೊಲೀಸ್ ಠಾಣೆ ಎದುರಿನ ರಾಜ್ಯ ಹೆದ್ದಾರಿ ಸಂಚಾರ ತಡೆದು ಪ್ರತಿಭಟಿಸಿದರು. ಸಿಪಿಐ ಅಲಿಸಾಬ್, ಪಿಎಸ್ಐ ಶಿವಪ್ಪ ಮೇಟಿ ಮತ್ತು ಸಿಬ್ಬಂದಿ ಬಂದೋಬಸ್ತ್ ಮಾಡಿದ್ದರು.

# ಬಂದರಿನಲ್ಲಿ ಅಸಮರ್ಪಕ ನಿರ್ವಹಣೆ, ನೈರ್ಮಲ್ಯ ಕೊರತೆ: ಅಧಿಕಾರಿ ಅಮಾನತಿಗೆ ಸಿಎಂ ಆದೇಶ

**ಮಂಗಳೂರು, ಸೆ.19:** ಕರಾವಳಿ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ಪ್ರಕಟಿಸಿದ ಬೆನ್ನಲ್ಲೇ, ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶನಿವಾರ ಬೆಳ್ಳಂಬೆಳಿಗ್ಗೆ ಮಂಗಳೂರಿನ ಬಂದರಿಗೆ ದಿಢೀರ್ ಭೇಟಿ ನೀಡಿ ಸಾರ್ವಜನಿಕರ ಗಮನ ಸೆಳೆದರು.

ಬಂದರಿನ ಒಟ್ಟಾರೆ ವ್ಯವಸ್ಥೆ ಹಾಗೂ ಮೀನುಗಾರಿಕಾ ಚಟುವಟಿಕೆಗಳನ್ನು ಅವರು ಹತ್ತಿರದಿಂದ ಸಿಎಂ ವೀಕ್ಷಿಸಿದರು. ಈ ವೇಳೆ ಸ್ಥಳೀಯ ಮೀನುಗಾರರು ಮತ್ತು ವ್ಯಾಪಾರಿಗಳೊಂದಿಗೆ ನೇರ ಸಂವಾದ ನಡೆಸಿದ ಸಿಎಂ, ಅವರ ಕುಂದುಕೊರತೆಗಳನ್ನು ಆಲಿಸಿದರು.

ಬಂದರಿನಲ್ಲಿ ಸರಿಯಾದ ನಿರ್ವಹಣೆ ಹಾಗೂ ನೈರ್ಮಲ್ಯದ ಕೊರತೆ ಕಂಡುಬಂದಿದ್ದಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಅವರು, ಕರ್ತವ್ಯ ಲೋಪ ಎಸಗಿದ ಸಂಬಂಧಪಟ್ಟ ಅಧಿಕಾರಿಯನ್ನು ಸ್ಥಳದಲ್ಲೇ ಅಮಾನತು ಮಾಡಲು ಖಡಕ್ ಆದೇಶ ನೀಡಿದರು.

ಈ ಪರಿಶೀಲನಾ ಭೇಟಿಯ ಸಂದರ್ಭದಲ್ಲಿ ಕರ್ನಾಟಕ ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್, ಕಾಂಗ್ರೆಸ್ ನಾಯಕರಾದ ಪದ್ಮರಾಜ್, ಇನಾಯತ್ ಅಲಿ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಟ್ರಾಲ್‌ಬೋಟ್ ಮೀನುಗಾರರ ಸಂಘದ ಮಾಜಿ ಅಧ್ಯಕ್ಷರಾದ ಚೇತನ್ ಬೆಂಗ್ರೆ, ಮೋಹನ್ ಬೆಂಗ್ರೆ ಸೇರಿದಂತೆ ಹಲವಾರು ಪ್ರಮುಖ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಬಂದರು ಪರಿಶೀಲನೆಯ ಬಳಿಕ



ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಡಿಸಿಎಂ, ಮೀನುಗಾರರು ಎದುರಿಸುತ್ತಿರುವ ಮೂಲಸೌಕರ್ಯ ಸಮಸ್ಯೆಗಳಿಗೆ ಶೀಘ್ರವೇ ಶಾಶ್ವತ ಪರಿಹಾರ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು. ಅಲ್ಲದೆ, ಸಾರ್ವಜನಿಕ ಸೇವೆಯಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಡಿಕೆಶಿ ಎಚ್ಚರಿಸಿದರು.

# ಎರಡನೇ ದಿನ ಮುಂದುವರಿದ ರೈತರ ಅಹೋರಾತ್ರಿ, ಅನಿರ್ದಿಷ್ಟಾವಧಿ ಹೋರಾಟ




**ಬಳ್ಳಾರಿ, ಸೆ 19.** ಕುರುಗೋಡಿನ ನೀರಾವರಿ ಇಲಾಖೆಯ ಕಚೇರಿ ಬಳಿ ನಡೆಯುತ್ತಿರುವ ರೈತರ ಅಹೋರಾತ್ರಿ ಮತ್ತು ಅನಿರ್ದಿಷ್ಟಾವಧಿ ಹೋರಾಟ ಶನಿವಾರ ಎರಡನೇ ದಿನಕ್ಕೆ ಕಾಲಿಟ್ಟಿತು.

ಶುಕ್ರವಾರ ರಾತ್ರಿ ಒಂಬತ್ತು ಗಂಟೆಗೆ ಸ್ಥಳಕ್ಕೆ ಆಗಮಿಸಿದ ಬಳ್ಳಾರಿಯ ಕಾರ್ಯನಿರ್ವಾಹಕ ಅಭಿಯಂತರರು ಕಾಲುವೆಗೆ ನೀರು ಬಿಡುವುದರ ಕುರಿತು ರೈತರೊಂದಿಗೆ ನಡೆಸಿದ ಚರ್ಚೆ ವಿಫಲವಾಗಿ ರೈತರ ಹೋರಾಟ ಎರಡನೇ ದಿನವು ಮುಂದುವರೆದಿದೆ.

ಈಗಾಗಲೇ ದಿನಾಂಕ 2 ರಂದು ನಡೆದ ಹೋರಾಟದ ಸಂದರ್ಭದಲ್ಲಿ ಅಧಿಕಾರಿಗಳು ನೀಡಿದ ಭರವಸೆಯನ್ನು ಈಡೇರಿಸಿಲ್ಲ, ಆದ್ದರಿಂದ ರೈತರು ಅಧಿಕಾರಿಗಳ ಭರವಸೆ ಮೇಲೆ ಸಂಪೂರ್ಣವಾಗಿ ನಂಬಿಕೆ ಕಳೆದುಕೊಂಡಿದ್ದು, ಈಗ ಮಳೆ ಬರುವವರೆಗೂ ಡಿ.7 ಕಾಲುವೆಗೆ ಕನಿಷ್ಠ 600 ಕ್ಯೂಸೆಕ್ ನೀರು ಹರಿಸುವಂತೆ ಪಟ್ಟು ಹಿಡಿದು ಧರಣಿ ನಡೆಸುತ್ತಿದ್ದಾರೆ. ಇಷ್ಟು ಪ್ರಮಾಣದ ನೀರು ಬಿಟ್ಟಲ್ಲಿ ಮಾತ್ರ ರೈತರು ಬೀಜ ಬಿತ್ತಲು ಸಾಧ್ಯ ಮತ್ತು ಬಿತ್ತಿದ ಬೆಳೆಯನ್ನು ಉಳಿಸಿಕೊಳ್ಳಲು ಸಾಧ್ಯ. ಆದ್ದರಿಂದ ಸರ್ಕಾರ ಕೂಡಲೇ ಡಿ.7 ಕಾಲುವೆಗೆ 600 ನೀರು ಕ್ಯೂಸೆಕ್ ಬಿಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ತಾಲೂಕಿನ ಎ ಇ ಇ ಅವರು ಹೋಲಿಸಿ ಇಲಾಖೆಯ ಸುಪ್ರೀತ್ ಅವರ ಉಪಸ್ಥಿತಿಯಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಪ್ರತಿಹಳ್ಳಿಯ ಕೊನೆಯ ಭಾಗದ ರೈತರಿಗೂ ನೀರು ತಲುಪಿಸುವಂತೆ ಜವಾಬ್ದಾರಿ ತೆಗೆದುಕೊಂಡರು, ಇದರೊಂದಿಗೆ ರೈತರು ತಮ್ಮ ಹೋರಾಟವನ್ನು ಹಿಂತೆಗೆದು ಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಅಧ್ಯಕ್ಷರು ಗೋವಿಂದ, ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ, ತಾಲೂಕು ಮುಖಂಡರಾದ ಕಲ್ಲುಕಂಬ ಪಂಪಾಪತಿ, ಶೇಖರ್, ಎಚ್ ಎನ್ ಬಸವರಾಜ್, ಹೇಮರೆಡ್ಡಿ, ಜಿ.ಕೆಶಪ್ಪ, ಕೀರ್ತಿ ರೆಡ್ಡಿ, ಹೇಮಂತ್ ರಾಜ್, ಹೆಗ್ಗೂರು ಬಸವರಾಜ, ಕೆ ರಾಮಲಿಂಗ, ಹನುಮಂತಪ್ಪ, ಬಸವರಾಜ್, ಕಡ್ಲೆ ದೇವಣ್ಣ, ಲಕ್ಷ್ಮಿಕಾಂತ್ ರೆಡ್ಡಿ, ವಾಯುಪುತ್ರ ರೆಡ್ಡಿ, ಮೋಹನ್, ತಾತಯ್ಯ ರೈತರು ಉಪಸ್ಥಿತರಿದ್ದರು.

## ಜನರ ಸಮಸ್ಯೆಗೆ ತಕ್ಷಣ ಸ್ಪಂದಿಸಿ, ಇಲ್ಲವೇ ಕ್ರಮ ಎದುರಿಸಿ: ಅಧಿಕಾರಿಗಳಿಗೆ ಎಂ.ಬಿ. ಪಾಟೀಲ ಖಡಕ್ ಸೂಚನೆ



**ವಿಜಯಪುರ, ಸೆ.19:** ಪ್ರಜಾ ಸೇವಾ ಆಂದೋಲನದ ಮೂಲಕ ಸರಕಾರವೇ ಜನರ ಮನೆ ಬಾಗಿಲಿಗೆ ಬರುತ್ತಿದೆ. ಇದು ಇಡೀ ದೇಶದಲ್ಲೇ ವಿನೂತನ ಪ್ರಯೋಗವಾಗಿದೆ. ಆದ್ದರಿಂದ ಪ್ರಜಾಸೇವೆ ಆಂದೋಲನ ಸಭೆಯಲ್ಲಿ ಸಲ್ಲಿಕೆಯಾಗುವ ಎಲ್ಲ ಅರ್ಜಿಗಳಿಗೆ ಅಧಿಕಾರಿಗಳು ಸಕಾಲದಲ್ಲಿ ಸ್ಪಂದಿಸಬೇಕು. ಇಲ್ಲವಾದಲ್ಲಿ ಅಧಿಕಾರಿಗಳ ವಿರುದ್ಧ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

8.60 ಕೋಟಿ ರೂ. ವೆಚ್ಚದ ಎರಡಂತಸ್ತಿನ ನೂತನ ಪ್ರಜಾಸೌಧ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ ಸಮಾರಂಭ ಹಾಗೂ ಪ್ರಜಾಸೇವೆ ಆಂದೋಲನ ಸಭೆ ಉದ್ಘಾಟಿಸಿ, ಸಲ್ಲಿಕೆ ಯಾಗಿರುವ ಅರ್ಜಿಗಳನ್ನು ನಿಗದಿತ ಅವಧಿಯಲ್ಲಿಯೇ ನಿಮ್ಮ ಹಂತದಲ್ಲಿರುವ ಅರ್ಜಿಗಳಿಗೆ ಸ್ಪಂದಿಸಿ, ಕಾಲಮಿತಿಯೊಳಗೆ ಇತ್ಯರ್ಥ ಪಡಿಸಬೇಕು ಎಂದ ಸಚಿವರು, ಮಹಾತ್ಮ ಗಾಂಧೀಜಿಯವರು ಹಳ್ಳಿಗಳ ಉದ್ಧಾರವೇ ದೇಶದ ಉದ್ಧಾರ ಎಂದು ಕನಸು ಕಂಡಿದ್ದರು. ಹಾಗಾಗಿ ಗಾಂಧೀಜಿಯವರ ಆಶಯಕ್ಕನುಗುಣವಾಗಿ ಪ್ರತಿಯೊಬ್ಬ ಅಧಿಕಾರಿಯೂ ಕಾರ್ಯ ನಿರ್ವಹಿಸಬೇಕು ಎಂದರು.

## ಅಕ್ರಮ ಕಲ್ಲುಸಾಗಣೆ: ಮಾಜಿ ಶಾಸಕ ವಿರೂಪಾಕ್ಷಪ್ಪಗೆ 3.43 ಕೋಟಿ ರೂ. ದಂಡ ವಿಧಿಸಿ ನೋಟಿಸ್

**ಹಾವೇರಿ, ಸೆ.19:** ಕಲ್ಲು ಗಣಿಗಾರಿಕೆ ಪರವಾನಗಿ ನಿಯಮಗಳನ್ನು ಉಲ್ಲಂಘಿಸಿ ಅಕ್ರಮವಾಗಿ ಕಲ್ಲುಸಾಗಣೆ ಮಾಡಿರುವ ಆರೋಪದ ಮೇಲೆ, ಬ್ಯಾಡಗಿ ಕ್ಷೇತ್ರದ ಮಾಜಿ ಶಾಸಕ ಹಾಗೂ ಬಿಜೆಪಿ ಹಾವೇರಿ ಜಿಲ್ಲಾ ಅಧ್ಯಕ್ಷ ವಿರೂಪಾಕ್ಷಪ್ಪ ಬಳ್ಳಾರಿ ಅವರಿಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯು 3.43 ಕೋಟಿ ರೂ. ದಂಡ ವಿಧಿಸಿ ನೋಟಿಸ್ ಜಾರಿ ಮಾಡಿದೆ.

ಇಲಾಖೆಯ ಮೂಲಗಳ ಪ್ರಕಾರ, 'ವಿ.ಆರ್. ಬಳ್ಳಾರಿ' ಹೆಸರಿನಲ್ಲಿ ಎರಡು ಕಡೆ ಕ್ವಾರಿ ನಡೆಸಲು ಅವರು ಗುತ್ತಿಗೆ ಪರವಾನಗಿ ಪಡೆದಿದ್ದರು. ಆದರೆ ಪರವಾನಗಿ ನಿಯಮಗಳನ್ನು ಮೀರಿ ಗಣಿಗಾರಿಕೆ ನಡೆಸಿರುವ ಕಾರಣ ಅವರಿಗೆ ಈ ದಂಡ ವಿಧಿಸಲಾಗಿದ್ದು, ಮುಂದಿನ ಆರು ತಿಂಗಳ ಒಳಗಾಗಿ ದಂಡದ ಮೊತ್ತವನ್ನು ಕಟ್ಟುಕೊಳ್ಳುವಂತೆ ಸೂಚನೆ ನೀಡಲಾಗಿದೆ.

ಕರ್ನಾಟಕ ರಿಮೋಟ್ ಸೆನ್ಸಿಂಗ್ ಅಪ್ಲಿಕೇಷನ್ಸ್ ಸೆಂಟರ್ ನೀಡಿರುವ ವರದಿಯ ಪ್ರಕಾರ, ಲೈಸೆನ್ಸ್‌ನಲ್ಲಿ ನಿಗದಿಪಡಿಸಿದ್ದ ಮಿತಿಗಿಂತ ಅಧಿಕವಾಗಿ 3,84,161 ಟನ್ ಕಲ್ಲನ್ನು ಅಕ್ರಮವಾಗಿ ಹೊರತೆಗೆದು ಸಾಗಿಸಲಾಗಿದೆ. ಅಷ್ಟೇ



ಅಲ್ಲದೆ, ನಿಗದಿತ ಗಡಿ ಪ್ರದೇಶವನ್ನು ಮೀರಿ ಅಕ್ಕಪಕ್ಕದ ಜಾಗವನ್ನು ಒತ್ತುವರಿ ಮಾಡಿಕೊಂಡು ಹೆಚ್ಚುವರಿಯಾಗಿ 53,410 ಟನ್ ಕಲ್ಲನ್ನು ಹೊರತೆಗೆದಿರುವುದು ಪತ್ತೆಯಾಗಿದೆ.

ಸಹೋದರನಿಗೂ ತಪ್ಪದ ದಂಡದ ಬಿಸಿ ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ವಿರೂಪಾಕ್ಷಪ್ಪ ಬಳ್ಳಾರಿ ಅವರ ಸಹೋದರ ಎಸ್.ಆರ್. ಬಳ್ಳಾರಿ ಅವರಿಗೂ ಕೂಡ ಗಣಿ ಇಲಾಖೆ 1.23 ಕೋಟಿ ರೂ. ದಂಡ ವಿಧಿಸಿದೆ. ಇವರು 1,76,313 ಟನ್ ಕಲ್ಲನ್ನು ಹೆಚ್ಚುವರಿಯಾಗಿ ಹಾಗೂ 50,401 ಟನ್ ಕಲ್ಲನ್ನು ಒತ್ತುವರಿ ಮಾಡುವ ಮೂಲಕ ಹೊರಗೆ ತೆಗೆದಿರುವುದಾಗಿ ಇಲಾಖೆಯ ಮೂಲಗಳು ಮಾಹಿತಿ ನೀಡಿವೆ.

# ಬೀದರ ಸಹಕಾರಿ ಸಕ್ಕರೆ ಕಾರ್ಖಾನೆ ಪುನಶ್ಚೇತನ: ನಾಳೆ ಸಿಎಂ ಬಳಿ ನಿಯೋಗ



**ಬೀದರ, ಸೆ. 19:** ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ (ಬಿಎಸ್‌ಎಸ್‌ಕೆ) ಪುನಶ್ಚೇತನಗೊಳಿಸಿ ಕಾರ್ಯಾರಂಭ ಮಾಡುವ ನಿಟ್ಟಿನಲ್ಲಿ ಇಲ್ಲಿ ಹೋರಾಟ ನಡೆಸಿದರೆ ಉಪಯೋಗವಿಲ್ಲ. ಸರ್ಕಾರದ ಗಮನಕ್ಕೆ ತರಬೇಕಾಗುತ್ತದೆ. ಈ ದಿಸೆಯಲ್ಲಿ ನಿಯೋಗದೊಂದಿಗೆ ಭೇಟಿಯಾಗಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಭರವಸೆ ನೀಡಿದರು.

ನಗರದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ ಬಣ) ಜಿಲ್ಲಾಧ್ಯ ಶ್ರೀಮಂತರಾವ ಬಿರಾದಾರ, ಸಂಘಟನೆ ಪದಾಧಿಕಾರಿಗಳು, ಹಾಗೂ ಬಿಎಸ್‌ಎಸ್‌ಕೆ ಕಾರ್ಮಿಕರೊಂದಿಗೆ ಕಾರ್ಖಾನೆ ಹರಾಜು ಪ್ರಕ್ರಿಯೆ ಕುರಿತ ಚರ್ಚೆಯಲ್ಲಿ ಮಾತನಾಡಿದ ಅವರು, ಬಿಎಸ್‌ಎಸ್‌ಕೆ ಕೇವಲ ಒಂದು ಕೈಗಾರಿಕೆಯಲ್ಲ. ಜಿಲ್ಲೆಯ ಸಾವಿರಾರು ರೈತರು, ಕಾರ್ಮಿಕರು ಮತ್ತು ಅವರ ಕುಟುಂಬದವರ ಬದುಕಿನೊಂದಿಗೆ ನೇರವಾಗಿ ಬೆಸೆದುಕೊಂಡಿದೆ. ಹೀಗಾಗಿ ಕಾರ್ಖಾನೆ ಭವಿಷ್ಯ ಗಮನದಲ್ಲಿಟ್ಟುಕೊಂಡು ಪುನಶ್ಚೇತನಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದರು.

ಸೋಮವಾರ ರಾಜ್ಯ ರೈತ ಸಂ ಮತ್ತು ಹಸಿರು ಸೇನೆ ಜಿಲ್ಲಾಧ್ಯರು, ರೈತ ಮುಖಂಡರು ಮತ್ತು ಬಿಎಸ್‌ಎಸ್‌ಕೆ ಕಾರ್ಮಿಕರನ್ನು ಒಳಗೊಂಡ ನಿಯೋಗವನ್ನು ಸಿಎಂ ಡಿ.ಕೆ. ಶಿವಕುಮಾರ್, ಸಕ್ಕರೆ ಸಚಿವ ರುದ್ರಪ್ಪ ಲಮಾಣಿ ಹಾಗೂ ಸಹಕಾರ ಸಚಿವ ಲಕ್ಷ್ಮಣಸವದಿ ಅವರಲ್ಲಿ ಕೊಂಡೊಯ್ದು ಕಾರ್ಖಾನೆ ಪುನಶ್ಚೇತನಕ್ಕೆ ಒತ್ತಾಯಿಸಲಾಗುವುದು ಎಂದರು.

# ಚಕ್ರ ಎಸೆತದಲ್ಲಿ ಅವಿನಾಶ್‌ಗೆ ಚಿನ್ನದ ಪದಕ: ರಾಷ್ಟ್ರಮಟ್ಟದ ಸ್ಪರ್ಧೆಗೆ ಆಯ್ಕೆ

**ದೇವರಹಿಪ್ಪರಗಿ, ಸೆ.19–** ಅಥ್ಲೆಟಿಕ್ಸ್ ಫೆಡರೇಷನ್ ಆಫ್ ಇಂಡಿಯಾ ವತಿಯಿಂದ ಪುದುಚೇರಿಯಲ್ಲಿ ಆಯೋಜಿಸಲಾಗಿರುವ 37ನೇ ದಕ್ಷಿಣ ವಲಯ ಜೂನಿಯರ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ದೇವರಹಿಪ್ಪರಗಿ ಪಟ್ಟಣದ ಸಿದ್ದೇಶ್ವರ ಸ್ವಾಮೀಜಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ಅವಿನಾಶ್ ಮಲ್ಲಿಕಾರ್ಜುನ ತಳಕೇರಿ ಚಕ್ರ ಎಸೆತ ಸ್ಪರ್ಧೆಯಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ

ಚಕ್ರವನ್ನು 51.02 ಮೀಟರ್ ದೂರ ಎಸೆಯುವ ಮೂಲಕ ಪ್ರಥಮ ಸ್ಥಾನ ಪಡೆದುಕೊಂಡಿರುವ ಅವಿನಾಶ್ ಚಿನ್ನದ ಪದಕಕ್ಕೆ ಭಾಜನರಾಗಿದ್ದು, ಈ ಸಾಧನೆಯೊಂದಿಗೆ ರಾಷ್ಟ್ರಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಕ್ರೀಡಾಕೂಟದಲ್ಲಿ ಸತತ ಮೂರನೇ ಬಾರಿಗೆ ಭಾಗವಹಿಸಿರುವ ಅವಿನಾಶ್, ನಿರಂತರ ಪರಿಶ್ರಮ, ಕಠಿಣ ತರಬೇತಿ ಹಾಗೂ ಕ್ರೀಡಾ ಪ್ರತಿಭೆಯ ಮೂಲಕ ಈ ಗಮನಾರ್ಹ ಸಾಧನೆ ಮಾಡಿದ್ದಾರೆ. ಶಿಕ್ಷಕರ ಪುತ್ರರಾಗಿರುವ ಅವರು ವಿಜಯಪುರ ಜಿಲ್ಲೆಯ ಪರವಾಗಿ ಸತತ ಏಳನೇ ಬಾರಿಗೆ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿರುವುದು ವಿಶೇಷವಾಗಿದೆ.

ಅವಿನಾಶ್ ಅವರ ಸಾಧನೆಯಿಂದ ವಿಜಯಪುರ ಜಿಲ್ಲೆ ಹಾಗೂ ದೇವರಹಿಪ್ಪಗಿ ತಾಲೂಕಿನ ಕೀರ್ತಿ ಹೆಚ್ಚಾಗಿದೆ. ರಾಷ್ಟ್ರಮಟ್ಟದ ಸ್ಪರ್ಧೆ ಯಲ್ಲಿಯೂ ಉತ್ತಮ ಪ್ರದರ್ಶನ ನೀಡುವ ನಿರೀಕ್ಷೆ ವ್ಯಕ್ತವಾಗಿದೆ. ಅವಿನಾಶ್ ಅವರ ಸಾಧನೆಗೆ ಶ್ರೀಸಿದ್ದೇಶ್ವರ ಸ್ವಾಮೀಜಿ ಪದವಿ ಪೂರ್ವ ಕಾಲೇಜಿನ ಸಂಸ್ಥೆಯ ಅಧ್ಯಕ್ಷ ವಿ.ಕೆ. ಪಾಟೀಲ,



ತರಬೇತುದಾರರಾದ ಹಾಜಿಲಾಲ್ ಮಕಾಂದರ್, ರಾಜು ಕಾಖಂಡಕಿ ಸೇರಿದಂತೆ ತಾಲೂಕಿನ ಗಣ್ಯರು ಹಾಗೂ ಕ್ರೀಡಾಭಿಮಾನಿಗಳು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿಯೂ ಅವಿನಾಶ್ ಅತ್ಯುತ್ತಮ ಪ್ರದರ್ಶನ ನೀಡಿ ಜಿಲ್ಲೆ ಹಾಗೂ ರಾಜ್ಯಕ್ಕೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

# ಹಾವು ಕಡಿತದಿಂದ ಸಾವು ತಪ್ಪಿಸಲು ತಕ್ಷಣ ಆಸ್ಪತ್ರೆಗೆ ದಾಖಲಾಗಿ: ಡಾ. ಮರಿಯಂಬಿ ವಿ.ಕೆ ಕರೆ

**ಬಳ್ಳಾರಿ,ಸೆ.19.** ಹಾವು ಕಡಿತಕ್ಕೆ ಒಳಗಾದಾಗ ಯಾವುದೇ ಕಾರಣಕ್ಕೂ ಗಾಬರಿಯಾಗದೆ, ನಾಟಿ ವೈದ್ಯರ ಮೊರೆಹೋಗದೆ ತಕ್ಷಣ ಸಮೀಪದ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುವ ಮೂಲಕ ಸಾವು-ನೋವುಗಳನ್ನು ತಪ್ಪಿಸಬಹುದು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಮರಿಯಂಬಿ ವಿ.ಕೆ ಅವರು ತಿಳಿಸಿದರು.

'ಅಂತಾರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನ' ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಪ್ರತಿ ವರ್ಷ ಸೆಪ್ಟೆಂಬರ್ 19 ರಂದು ಅಂತಾರಾಷ್ಟ್ರೀಯ ಹಾವು ಕಡಿತ ಜಾಗೃತಿ ದಿನವನ್ನು ಆಚರಿಸಲಾಗುತ್ತದೆ. ಹಾವು ಕಡಿತದ ಅಪಾಯ, ತಕ್ಷಣದ ವೈದ್ಯಕೀಯ ಚಿಕಿತ್ಸೆಯ ಮಹತ್ವ ಹಾಗೂ ಕಡಿತದಿಂದ ಬದುಕುಳಿದವರಲ್ಲಿ ಉಂಟಾಗಬಹುದಾದ ದೀರ್ಘಕಾಲೀನ ಅಂಗವೈಕಲ್ಯದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಈ ದಿನಾಚರಣೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ ಸೆಕ್ಷನ್ 3ರ ಅಡಿಯಲ್ಲಿ ಹಾವು ಕಡಿತವನ್ನು ಅಧಿಸೂಚಿತ ಕಾಯಿಲೆ ಎಂದು ಘೋಷಿಸಲಾಗಿದೆ. ಪ್ರಮುಖವಾಗಿ ನಾಗರಹಾವು, ಕೊಳಕುಮಂಡಲ, ಕಟ್ಟಾವು ಮತ್ತು ಗರಗಸ ಮಂಡಲ ಹಾವುಗಳು ವಿಷಪೂರಿತವಾಗಿದ್ದು, ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಹಾವು ಕಡಿತಕ್ಕೆ ಅಗತ್ಯ ಔಷಧಗಳು ಲಭ್ಯವಿವೆ ಎಂದು ಅವರು ಮಾಹಿತಿ ನೀಡಿದರು.

**ಹಾವು ಕಡಿದಾಗ ಏನು ಮಾಡಬೇಕು?**



ರೋಗಿಯು ಗಾಬರಿಯಾಗಬಾರದು, ಸಮಾಧಾನವಾಗಿರಬೇಕು. ಹಾವಿನಿಂದ ನಿಧಾನವಾಗಿ ದೂರ ಸರಿಯಬೇಕು ಹಾಗೂ ಕಡಿತಕ್ಕೊಳಗಾದ ದೇಹದ ಭಾಗವನ್ನು ಅಲುಗಾಡಿಸಬಾರದು. ಕಾಲಿನ ಉಂಗುರ, ಪಾದರಕ್ಷೆ, ಬೆಲ್ಟ್, ಆಭರಣ, ವಾಚ್ ಹಾಗೂ ಬಿಗಿಯಾದ ಬಟ್ಟೆಗಳನ್ನು ತಕ್ಷಣ ತೆಗೆಯಬೇಕು. ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ, ಕಡಿತಕ್ಕೊಳಗಾದ ಅಂಗವನ್ನು ನಿಶ್ಚಲವಾಗಿರಿಸಿ ತಕ್ಷಣ ಆಸ್ಪತ್ರೆಗೆ ಕರೆದೊಯ್ಯಬೇಕು.

**ಏನು ಮಾಡಬಾರದು:**

ಕಡಿತಕ್ಕೊಳಗಾದ ಜಾಗಕ್ಕೆ ರಕ್ತಬಂಧಕ ಪಟ್ಟಿ (ಟೂರ್ನಿಕೆಟ್) ಅಥವಾ ಬಿಗಿಯಾದ ಬಟ್ಟೆ ಕಟ್ಟಬಾರದು. ಗಾಯವನ್ನು ಬ್ಲೇಡ್‌ನಿಂದ ಕೊಯ್ಯುವುದು, ಯಾವುದೇ ಲೇಪನ ಹಚ್ಚುವುದು ಮಾಡಬಾರದು. ಬಾಯಿಯಿಂದ ವಿಷವನ್ನು ಹೀರುವ ಸಾಹಸಕ್ಕೆ ಕೈಹಾಕಬಾರದು. ನಾಟಿ ಔಷಧಿ ಅಥವಾ ಇತರ ಅಸುರಕ್ಷಿತ ವಿಧಾನಗಳನ್ನು ಅವಲಂಬಿಸಬಾರದು. ಹಾವನ್ನು ಹಿಡಿಯಲು ಅಥವಾ ಕೊಲ್ಲಲು ಪ್ರಯತ್ನಿಸಿ ಅಮೂಲ್ಯ ಸಮಯವನ್ನು ವ್ಯರ್ಥ ಮಾಡಬಾರದು ಎಂದರು. ಹಾವು ಮತ್ತು ವನ್ಯಜೀವಿಗಳ ಸಂರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಸಮೀರ್ ಸೇತ್ ಮಾತನಾಡಿ, ರಾತ್ರಿ ವೇಳೆ ಸಂಚರಿಸುವಾಗ ಕಡ್ಡಾಯವಾಗಿ ಟಾರ್ಚ್ ಬಳಸಬೇಕು. ರೈತರು ಹೊಲದಲ್ಲಿ ಕೆಲಸ ಮಾಡುವಾಗ ಕಾಲಿಗೆ ರಕ್ಷಾ ಕವಚಗಳನ್ನು (ಗಮ್ ಬೂಟ್ಸ್) ಧರಿಸಬೇಕು. ಮನೆಯ ಅಂಗಳದಲ್ಲಿ ಅಥವಾ ನೆಲದ ಮೇಲೆ ಮಲಗದೆ ಎತ್ತರದ ಸ್ಥಳದಲ್ಲಿ ಮಲಗಬೇಕು ಹಾಗೂ ಇಲಿ-ಹೆಗ್ಗಣಗಳು ಬಾರದಂತೆ ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಸಾಂಕ್ರಾಮಿಕ ರೋಗಶಾಸ್ತ್ರಜ್ಞರಾದ ಡಾ. ವಿಶಾಲಾಕ್ಷಿ ಅವರು ಪಿಪಿಟಿ ಮೂಲಕ ವಿಶೇಷ ಉಪನ್ಯಾಸ ನೀಡಿದರು.

ಹಾಸ್ಮಿ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ಸೈಯದ್ ಆಸಿಫ್, ಜಿಲ್ಲಾ ಎನ್‌ಸಿಡಿ ಕಾರ್ಯಕ್ರಮ ಸಲಹೆಗಾರ ಡಾ. ಜಬೀನಾ ತಾಜ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ., ಮೈಕ್ರೋಬಯಾಲಜಿಸ್ಟ್ ಶರತ್‌ಬಾಬು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗೋವಿಂದಪ್ಪ, ಶಾಲಾ ಶಿಕ್ಷಕರು, ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

## ದಲಿತರಿಗೆ ಇನ್ನಷ್ಟು ರಾಜಕೀಯ ಪ್ರಾತಿನಿಧ್ಯ ಸಿಗಬೇಕು

# ಡಾ.ಬಿ.ಆರ್.ಅಂಬೇಡಕರ್ ಸಂಘಕ್ಕೆ 10 ಲಕ್ಷ ರೂ. ದೇಣಿಗೆ ನೀಡಿದ ಶಾಸಕ ನಾರಾ ಭರತ್‌ರೆಡ್ಡಿ

**ಬಳ್ಳಾರಿ, ಸೆ.19:** ಜಿಲ್ಲೆಯಲ್ಲಿ ದೊಡ್ಡ ಸಂಖ್ಯೆ ಹೊಂದಿರುವ ದಲಿತ ಸಮುದಾಯದವರಿಗೆ ಸಮರ್ಪಕ ರಾಜಕೀಯ ಪ್ರಾತಿನಿಧ್ಯ ಸಿಗಬೇಕೆಂದು ಬಳ್ಳಾರಿ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಗುರುವಾರ ಸಂಜೆ ನಗರದ ಡಾ.ಬಿ.ಆರ್.ಅಂಬೇಡಕರ್ ಸಂಘದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಘದ ಚಟುವಟಿಕೆಗಳಿಗಾಗಿ ವೈಯಕ್ತಿಕ 10 ಲಕ್ಷ ರೂ.ಗಳ ದೇಣಿಗೆ ನೀಡಿ ಅವರು ಮಾತನಾಡಿದರು.

ದಲಿತ ಸಮುದಾಯ ಇಂದಿಗೂ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದೆ. ಕೆಲವೇ ಕೆಲವು ವ್ಯಕ್ತಿಗಳಿಗೆ ಅಧಿಕಾರ ಸಿಕ್ಕರೆ ಸಾಲದು, ಈ ಸಮುದಾಯದ ಅಭಿವೃದ್ಧಿ ಆಗಬೇಕಾದರೆ ಇದೇ ಸಮುದಾಯದವರ ಕೈಗೆ ಇನ್ನಷ್ಟು ರಾಜಕೀಯ ಅಧಿಕಾರ ಸಿಗಬೇಕು ಎಂದರು.

ಬಳ್ಳಾರಿಯಂತಹ ಮಹಾನಗರ ಪಾಲಿಕೆಯಲ್ಲಿ ದಲಿತ ಸಮುದಾಯದವರ ಪ್ರಾತಿನಿಧ್ಯ ಎಷ್ಟಿದೆ? ಇದರ ಬಗ್ಗೆ ಆಲೋಚಿಸಬೇಕು ಎಂದು ಹೇಳಿದ ಅವರು, ಡಾ.ಅಂಬೇಡಕರ್ ಅವರ ವಿಚಾರಧಾರೆ ಯನ್ನು



ಹೊಂದಿರುವಂತಹ ಸಮುದಾಯದ ಕಾಳಜಿ ಇರುವ ಯುವಕರು ಮುಂದೆ ಬರಬೇಕು, ರಾಜಕೀಯವಾಗಿ ಅಧಿಕಾರ ಹಿಡಿಯಬೇಕು. ದಲಿತ ಸಮುದಾಯದವರ ಅಭಿವೃದ್ಧಿಗೆ ನಾನು ಬದ್ಧನಾಗಿದ್ದೇನೆ ಎಂದು ಶಾಸಕ ನಾರಾ ಭರತ್‌ರೆಡ್ಡಿ ಹೇಳಿದರು. ಇದಕ್ಕೂ ಮುನ್ನ ದಲಿತ ಮುಖಂಡ ಎ.ಮಾನಯ್ಯ ಅವರು ಮಾತನಾಡಿ; ದಲಿತರು ರಾಜಕೀಯ ವಾಗಿ ಬೆಂಬಲಿಸಬೇಕಾದಾಗ ಎಚ್ಚರ ವಹಿಸಬೇಕು, ದಲಿತಪರ - ಅಂಬೇಡಕರ್ ಪರ ಹಾಗೂ ಸಾಮಾಜಿಕ ನ್ಯಾಯದಲ್ಲಿ ನಂಬಿಕೆ ಇರುವಂತಹ ವ್ಯಕ್ತಿ ಹಾಗೂ ಪಕ್ಷಗಳನ್ನು ಬೆಂಬಲಿಸಬೇಕು ಎಂದರು.

ಇದೇ ಸಂದರ್ಭ ಹಾಜರಿದ್ದು ಮಾತನಾಡಿದ ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ; ಶಾಸಕ ನಾರಾ ಭರತ್ ರೆಡ್ಡಿಯವರು ಅಭಿವೃದ್ಧಿ ಪರ ಚಿಂತನೆಯಿರುವವರು, ಅಹಿಂದ ಸಮುದಾಯಗಳ ಬಗ್ಗೆ ಅವರಿಗೆ ಹಲವಾರು ಕನಸುಗಳಿವೆ, ಜನರ ಸೇವೆಯೇ ಅವರ ಮೊದಲ ಆದ್ಯತೆಯಾಗಿದೆ ಎಂದರು.

ಈ ಸಂದರ್ಭ ಶಾಸಕ ನಾರಾ ಭರತ್ ರೆಡ್ಡಿಯವರನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ದಲಿತ ಮುಖಂಡರಾದ ಎಲ್.ಮಾರೆಣ್ಣ, ಎರುಕುಲಸ್ವಾಮಿ, ಸೋಮಶೇಖರ್, ಎಂ.ಸೋಮಶೇಖರ್, ಡಾ.ಬಿ.ಆರ್. ಅಂಬೇಡ್ಕರ್ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಗೋವಿಂದು, ಉದ್ಯಮಿ ಎಂ.ಜಿ.ಗೌಡ ಮತ್ತಿತರ ಮುಖಂಡರು ಹಾಜರಿದ್ದರು.

# ಬೋರಿ ನದಿಯಿಂದ ಅಮರ್ಜಾ ಜಲಾಶಯಕ್ಕೆ ಹರಿದು ಬಂದ ನೀರು

**ಕಲಬುರಗಿ, ಸೆ. 19:** ಜಿಲ್ಲೆಯ ಅಫಜಲಪುರ ತಾಲ್ಲೂಕಿನ ಬೋರಿ ನದಿಯಿಂದ ಪೈಪ್‌ಲೈನ್ ಮೂಲಕ ಆಳಂದ ತಾಲ್ಲೂಕಿನ ಅಮರ್ಜಾ ಜಲಾಶಯಕ್ಕೆ ನೀರು ತರುವ ಕಾರ್ಯ ಯಶಸ್ವಿಯಗಿದ್ದು, ಜಲಾಶಯಕ್ಕೆ ನೀರು ಹರಿದು ಬರುವ ಮೂಲಕ ಮಳೆಯಿಲ್ಲದೇ ಸಂಪೂರ್ಣ ಬತ್ತಿ ಹೋಗಿದ್ದ ಜಲಾಶಯದಲ್ಲೀಗ ನೀರು ಕಣಿಸುವಂತಾಗಿದೆ.

ಮೂಲತಃ ಬೋರಿ ನದಿಯಿಂದ ಅಮರಜಾ ಜಲಾಶಯಕ್ಕೆ ಏತ ನೀರಾವರಿ ಯೋಜನೆ ಶಾಸಕ ಬಿ.ಆರ್.ಪಾಟೀಲ್ ಕನಸಾಗಿತ್ತು. ಅದಕ್ಕಾಗಿ ಮಾಜಿ ಸಿಎಂ ಸಿದ್ದರಾಮಯ್ಯ 2017ರಲ್ಲಿ 350 ಕೋಟಿ ಅನುದಾನ ಘೋಷಣೆ ಮಾಡಿದ್ದರಿಂದ ಇಂದು ಕರೆಗಳಿಗೆ ನೀರು ತುಂಬಲು ಸಾಧ್ಯವಾಗಿದೆ ಎಂದು ಕಲಬುರಗಿ, ಬೀದರ್ ಮತ್ತು ಯಾದಗಿರಿ ಹಾಲು ಉತ್ಪಾದಕರ ಒಕ್ಕೂಟದ ಅಧ್ಯಕ್ಷ ಆರ್.ಕೆ.ಪಾಟೀಲ್ ಈ ಸಂದರ್ಭದಲ್ಲಿ ಸಂತಸದಿಂದ ಹೇಳಿದರು.

ಬೋರಿ ನದಿಯಿಂದ ಅಮರ್ಜಾ ಜಲಾಶಯಕ್ಕೆ ಹರಿದು ಬರುತ್ತಿರುವ ನೀರಿಗೆ ಬಾಗಿನ ಅರ್ಪಿಸಿದ ಅವರು, ಚೆನ್ನೈ-ಸೂರತ ಭಾರತಮಾಲ ಕಾರಿಡಾರ್ ಕಾಮಗಾರಿ ವೇಳೆ ಅರ್ಜುಣಗಿಯಲ್ಲಿ ಪೈಪು ಕತ್ತರಿಸಲಾಗಿತ್ತು. ಇಲಾಖೆಯವ ರೊಂದಿಗೆ ನಿರಂತರ ಪತ್ರ ವ್ಯವಹಾರ ಮಾಡಿದ್ದರೂ ಸಮಸ್ಯೆ ಬಗೆಹರಿಯಲಿಲ್ಲ. ಇದರಿಂದ ಹಡಲಗಿ ಗ್ರಾಮದಿಂದ ಕಾರ್ಯಕರ್ತ ರೊಂದಿಗೆ ಪಾದಯಾತ್ರೆ ಮೂಲಕ ಧರಣಿ ನಡೆಸಲಾಯಿತು. ಇದಕ್ಕೆ ಮಣಿದ ಜಿಲ್ಲಾಡಳಿತ ಹಾಗೂ ಪ್ರಾಧಿಕಾರ ತುರ್ತು ಪರಿಸ್ಥಿತಿಯಲ್ಲಿ ಪೈಪ್ ಜೋಡಣೆ ಮಾಡಿದ್ದರಿಂದ ಜಲಾಶಯಕ್ಕೆ ನೀರು ಬರುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದರು.

**ಎಂಟು ವರ್ಷದಿಂದ ಕಾಮಗಾರಿ ನನೆಗುದಿಗೆ ಬಿದ್ದಿದ್ದರಿಂದ ನಾನು ಮತ್ತು ಎಂ.ವೈ.ಪಾಟೀಲ್ ಸರ್ಕಾರದ ಮೇಲೆ ಒತ್ತಡ ಹಾಕಿದ್ದೆವು. ಯೋಜನೆಗೆ 400 ಕೋಟಿ ರೂ. ಖರ್ಚಾಗಿದ್ದು, 22 ಕೆರೆ ತುಂಬುವ ಯೋಜನೆಯಿದೆ.**
**– ಬಿ.ಆರ್.ಪಾಟೀಲ್ ಶಾಸಕ.**



**ಕೆರೆಗಳಿಗೆ ನೀರು ತುಂಬಿಸುವುದು ಬಿ.ಆರ್?.ಪಾಟೀಲ್? ಕನಸಾಗಿತ್ತು. ಅದರಂತೆ ಇಂದು ಅಮರ್ಜಾ ಜಲಾಶಯಕ್ಕೆ ಬೋರಿ ನದಿಯಿಂದ ನೀರು ಬರುತ್ತಿರುವುದು ಐತಿಹಾಸಿಕ ಕ್ಷಣ. 150 ಕೋಟಿ ಅನುದಾನದಲ್ಲಿ ಆಳಂದ ತಾಲೂಕಿನ ಕೆರೆಗಳು ತುಂಬುತ್ತಿವೆ.**
**– ಎಂ.ವೈ.ಪಾಟೀಲ್ ಶಾಸಕ**



ಮೈಸೂರಿನಲ್ಲಿ ಶನಿವಾರ ನಡೆದ ಜಂಬೂಸವಾರಿ ಮಾರ್ಗದ ದೈನಂದಿನ ತಾಲೀಮಿನ ವೇಳೆ, ದಸರಾ ಆನೆ ಧನಂಜಯ ಆನೆಗಳ ಮೆರವಣಿಗೆಯ ನೇತೃತ್ವ ವಹಿಸಿತು. ದೀರ್ಘಕಾಲದವರೆಗೆ ಅಂಬಾರಿ ಹೊತ್ತಿದ್ದ ಹಿರಿಯ ಆನೆ ಅಭಿಮನ್ಯು ನಿವೃತ್ತರಾದ ನಂತರ, ಭವ್ಯ ಜಂಬೂ ಸವಾರಿ ಮೆರವಣಿಗೆಯಲ್ಲಿ ಅಂಬಾರಿ ಹೊರುವ ಪ್ರಮುಖ ಆನೆಯಾಗಿ ಅರಣ್ಯ ಇಲಾಖೆಯು ಧನಂಜಯನನ್ನು ಆಯ್ಕೆಮಾಡಿದೆ.

# ಸಿದ್ದರಾಮಯ್ಯ ಮೂರ್ತಿ ತೆರವು ವಿರೋಧಿಸಿ ಪ್ರತಿಭಟನೆ

**ಕಲಬುರಗಿ, ಸೆ. 19:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೂರ್ತಿ ತೆರವುಗೊಳಿಸಿರುವುದನ್ನು ಖಂಡಿಸಿ, ನಗರದಲ್ಲಿ ಶನಿವಾರ ಸಿದ್ದರಾಮಯ್ಯ ಅಭಿಮಾನಿಗಳ ಬಳಗದ ವತಿಯಿಂದ ಪ್ರತಿಭಟನೆ ನಡೆಯಿತು.

ನಗರದ ಹೈಕೋರ್ಟ್ ಸರ್ಕಲ್ ಹಾಗೂ ಸಿದ್ದರಾಮಯ್ಯ ವೃತ್ತದ ಬಳಿ ಜಮಾಯಿಸಿದ ಅಭಿಮಾನಿಗಳು ಮಹಾನಗರ ಪಾಲಿಕೆಯ ಕ್ರಮವನ್ನು ಖಂಡಿಸಿ ಆಕ್ರೋಶ ವ್ಯಕ್ತಪಡಿಸಿದರು. ತೆರವುಗೊಳಿಸಿರುವ ಸ್ಥಳದಲ್ಲೇ ಸಿದ್ದರಾಮಯ್ಯ ಅವರ ಮೂರ್ತಿಯನ್ನು ಮತ್ತೆ ಮರುಸ್ಥಾಪಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಅಫಜಲಪುರಕ್ಕೆ ತೆರಳುವ ರಸ್ತೆ ಬಳಿಯೂ ಪ್ರತಿಭಟನೆ ನಡೆಸಿದ ಅಭಿಮಾನಿಗಳು ಟೈರ್ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಪರಿಸ್ಥಿತಿ ನಿಯಂತ್ರಿಸಲು ಪೊಲೀಸರು ಮಧ್ಯ ಪ್ರವೇಶಿಸಿದ್ದು, ಪ್ರತಿಭಟನೆ ನಡೆಸುತ್ತಿದ್ದ ಕೆಲ ಅಭಿಮಾನಿಗಳನ್ನು ಬಂಧಿಸಿ ವಶಕ್ಕೆ ಪಡೆದರು.

ಮಾಜಿ ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರ ಮೂರ್ತಿಯನ್ನು ತೆರವುಗೊಳಿಸಿರುವುದು ಖಂಡನೀಯ. ಯಾವ ಸ್ಥಳದಲ್ಲಿ ಮೂರ್ತಿ ಪ್ರತಿಷ್ಠಾಪಿಸಲಾಗಿತ್ತೋ ಅದೇ ಸ್ಥಳದಲ್ಲಿ ಮತ್ತೆ ಮೂರ್ತಿಯನ್ನು ಪ್ರತಿಷ್ಠಾಪಿಸಬೇಕು.

ಮಹಾನಗರ ಪಾಲಿಕೆ ಕೂಡಲೇ ತನ್ನ ನಿರ್ಧಾರವನ್ನು ಮರುಪರಿಶೀಲಿಸ ಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಮೂರ್ತಿ ತೆರವು ಕ್ರಮವನ್ನು ಖಂಡಿಸಿ ಮುಂದಿನ ಹೋರಾಟ ನಡೆಸುವುದಾಗಿ ಅಭಿಮಾನಿಗಳ ಬಳಗದ ಮುಖಂಡರು ಎಚ್ಚರಿಕೆ ನೀಡಿದರು.

ಕಳೆದ ದಿ.17ರಂದು ರಾತೋರಾತ್ರಿ ಕೆಲವರು ಸಿದ್ದರಾಮಯ್ಯ ಅವರ ಒಂಭತ್ತು ಅಡಿ ಎತ್ತರದ ಮೂರ್ತಿಯನ್ನು ಸ್ಥಾಪಿಸಿದ್ದರು. ರಾತ್ರಿಯೇ ಈ ಸುದ್ದಿ ಸಾಮಾಜಿಕ ಜಾಲತಾಣದಲ್ಲಿ ಹರಿದಾಡತೊಡಗಿತ್ತು. ಅನುಮತಿ ಇಲ್ಲದೇ ಹೈಕೋರ್ಟ್ ಸಮೀಪದ ವೃತ್ತದಲ್ಲಿ ಮೂರ್ತಿ ಸ್ಥಾಪಿಸಿದ್ದು, ಇದರಿಂದ ನ್ಯಾಯಾಲಯ ತೊಂದರೆ ನೀಡಬಹುದು ಎಂದು ಮಹಾನಗರ ಪಾಲಿಕೆಯು ಬೆಳಗಾಗುವುದರೊಳಗೆ ಮೂರ್ತಿಯನ್ನು ತೆರವುಗೊಳಿಸಿತ್ತು.


ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಪಾಲ್ಗೊಳ್ಳಲು ನಗರಕ್ಕೆ ಆಗಮಿಸಿದ್ದರು. ಅದೇ ದಿನ ಅವರು ಗಾಣಗಾಪುರಕ್ಕೆ ಶ್ರೀ ದತ್ತಾತ್ರೇಯ ದೇವಸ್ಥಾನದ ದರ್ಶನಕ್ಕೆ ಇದೇ ಮಾರ್ಗವಾಗಿ ಹೋಗುವವರಿದ್ದರು. ಮಾಧ್ಯಮದವರು ಮೂರ್ತಿ ತೆರವಿನ ಬಗ್ಗೆ ಅವರ ಗಮನ ಸೆಳೆದಾಗ, ಸಿದ್ದರಾಮಯ್ಯ ಅವರು ನಮ್ಮ ಗೌರವಾನ್ವಿತ ನಾಯಕರು. ಅವರ ಮೂರ್ತಿಯನ್ನು ಈ ರೀತಿ ಅಕ್ರಮವಾಗಿ ಸ್ಥಾಪಿಸುವುದು ನಮಗೂ ಒಪ್ಪಿಗೆ ಇಲ್ಲ. ಅವರ ಮೂರ್ತಿಯನ್ನು ಯವುದೇ ವಿವಾದವಿಲ್ಲದೇ ಗೌರವಪೂರ್ವಕವಾಗಿಯೇ ಸ್ಥಾಪಿಸಬೆಕಗುತ್ತದೆ ಎಂದರು. ಮತ್ತೆ ಸ್ಥಾಪಿಸುವಿರಾ ಎಂದಾಗ, ಅದನ್ನು ಸ್ಥಳೀಯ ಸಂಸ್ಥೆಯವರು ನಿರ್ಧರಿಸುತ್ತಾರೆಂದರು.

# ಶಿಲ್ಪಕಲೆಯ ಸ್ಮಾರಕಗಳ ಸೌಂದರ್ಯದಲ್ಲಿ ವಿಶ್ವಕರ್ಮ ಸಮಾಜದ ಕೊಡುಗೆ ಅಪಾರ: ಶಾಸಕ ಅಲ್ಲಮಪ್ರಭು

**ಕಲಬುರಗಿ, ಸೆ. 19:** ಕರ್ನಾಟಕದ ಐತಿಹಾಸಿಕ ತಾಣಗಳಾದ ಹಂಪಿ, ಪಟ್ಟದಕಲ್ಲು ಹಾಗೂ ಐಹೊಳೆ, ಬೇಲೂರು ಮತ್ತು ಹಳೇಬೀಡು ಸೇರಿದಂತೆ ಹಲವು ಸ್ಮಾರಕಗಳ ವಾಸ್ತುಶಿಲ್ಪ ಮತ್ತು ಸೌಂದರ್ಯಕ್ಕೆ ವಿಶ್ವಕರ್ಮ ಸಮುದಾಯದ ಕಲಾತ್ಮಕ ಕೊಡುಗೆ ಅಪಾರವಾಗಿದೆ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮ ಪ್ರಭು ಪಾಟೀಲ ಹೇಳಿದರು.

ನಗರದ ಡಾ. ಎಸ್.ಎಂ. ಪಂಡಿತ್ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ವಿಶಿಷ್ಟ ವಾಸ್ತುಶಿಲ್ಪ, ಶಿಲ್ಪಕಲೆ ಹಾಗೂ ಮೂರ್ತಿಗಳ ಕೆತ್ತನೆಯ ಮೂಲಕ ಭಾರತೀಯ ಸಂಸ್ಕೃತಿ ಮತ್ತು ಕಲಾ ಪರಂಪರೆಯನ್ನು ವಿಶ್ವದ ಗಮನಕ್ಕೆ ಪರಿಚಯಿಸು ವಲ್ಲಿ ವಿಶ್ವಕರ್ಮ ಸಮುದಾಯದ ಪಾತ್ರಮಹತ್ವದ್ದಾಗಿದೆ ಎಂದು ಹೇಳಿದರು.





ವಿಶ್ವಕರ್ಮ ಜಯಂತಿಯ ಶುಭಾಶಯಗಳನ್ನು ತಿಳಿಸಿದ ಶಾಸಕ ಅಲ್ಲಮಪ್ರಭು ಪಾಟೀಲ, ವಿಶ್ವಕರ್ಮ ಸಮುದಾಯದ ಕಟ್ಟಡ ನಿರ್ಮಾಣಕ್ಕೆ ತಮ್ಮ ಶಾಸಕರ ನಿಧಿಯಿಂದ 25 ಲಕ್ಷ ಅನುದಾನ ನೀಡುವುದಾಗಿ ಭರವಸೆ ನೀಡಿದರು. ಇತರ ಶಾಸಕರು ಹಾಗೂ ಸಂಸದರ ಸಹಕಾರದೊಂದಿಗೆ ಒಟ್ಟು 50 ಲಕ್ಷದವರೆಗೆ ಅನುದಾನ ಒದಗಿಸಲು ಪ್ರಯತ್ನಿಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಕಲಬುರಗಿ ಗ್ರಾಮೀಣ ಶಾಸಕ ಬಸವರಾಜ ಮತ್ತಿ ಮೂಡ ಮಾತನಾಡಿ, ವಿಶ್ವಕರ್ಮ ಸಮುದಾಯವು ತನ್ನ ಪಂಚ ಕುಲಕಸುಬುಗಳ ಮೂಲಕ ರೈತರ ಬದುಕಿಗೆ ನೆರವಾಗುವುದರ ಜೊತೆಗೆ, ಶಿಲ್ಪಕಲೆ, ಮೂರ್ತಿನಿರ್ಮಾಣ ಮತ್ತು ಆಭರಣ ತಯಾರಿಕೆ ಕ್ಷೇತ್ರಗಳಲ್ಲೂ ಮಹತ್ವದ ಕೊಡುಗೆ ನೀಡುತ್ತಿದೆ ಎಂದರು.

ಸಮುದಾಯದ ಸರ್ವಾಂಗೀಣ ಅಭಿವೃದ್ಧಿಗೆ ಅಗತ್ಯ ಸಹಕಾರ ನೀಡಲಾಗುವುದು. ಮುಂದಿನ ದಿನಗಳಲ್ಲಿ ಜಿಲ್ಲೆಯಾದ್ಯಂತ ವಿಶ್ವಕರ್ಮ ಸಮುದಾ ಯದ ಶ್ರೇಯೋಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸಲು ಕ್ರಮ ಕೈಗೊಳ್ಳಲಾಗು ವುದು ಎಂದು ಭರವಸೆ ನೀಡಿದರು.

ಕಲಬುರಗಿ ಸರ್ಕಾರಿ ಮಹಾವಿದ್ಯಾ ಲಯ (ಸ್ವಾಯತ್ತ)ದ ಸಹಾಯಕ ಪ್ರಾಧ್ಯಾಪಕ ಲಕ್ಷ್ಮಿಕಾಂತ ಪಂಚಾಳ್ ಅವರು ವಿಶೇಷ ಉಪನ್ಯಾಸ ನೀಡಿದರು.

ಕಲಬುರಗಿ ವಿಶ್ವಕರ್ಮ ಏಕದಂಡಿ ಮಠದ ಪರಮಪೂಜ್ಯ ಶ್ರೀ ಸುರೇಂದ್ರ ಮಹಾಸ್ವಾಮಿಗಳು ಹಾಗೂ ವಿಶ್ವಕರ್ಮ ಮೂರುಝಾವದೀಶ್ವರ ಮಠದ ಪೂಜ್ಯ ಶ್ರೀ ಪ್ರಣವ ನಿರಂಜನ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಕಾರ್ಯಕ್ರಮ ನಡೆಯಿತು.

ಜಿಲ್ಲಾಧಿಕಾರಿ ಕಚೇರಿಯ ಸಹಾಯಕ ಶಿವಪ್ರಭು ಹಿರೇಮಠ, ವಿಶ್ವಕರ್ಮ ಸಮಾಜದ ಹಿರಿಯ ಮುಖಂಡ ಸುಭಾಷ ಪಂಚಾಳ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಹಿಂದುಳಿದ ಕಲ್ಯಾಣ ಕರ್ನಾಟಕಕ್ಕೆ ಕೇಂದ್ರದಿಂದ 5 ಸಾವಿರ ಕೋಟಿ ನೀಡಲಿ: ಡಾ.ಅಜಯ್‌ಸಿಂಗ್

**ರಾಯಚೂರು, ಸೆ. 19 :** ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ರಾಜ್ಯ ಸರಕಾರ 5 ಸಾವಿರ ಕೋಟಿ ರೂ. ಅನುದಾನ ನೀಡುತ್ತಿದ್ದು, ಕೇಂದ್ರ ಸರಕಾರವೂ ಇದೇ ಪ್ರಮಾಣದ ಅನುದಾನ ನೀಡಬೇಕು ಎಂದು ಜಿಲ್ಲಾ ಉಸ್ತುವರಿ ಸಚಿವ ಡಾ.ಅಜಯ್ ಸಿಂಗ್ ಆಗ್ರಹಿಸಿದರು.

ಕರ್ನಾಟಕದ ಬಜೆಟ್ ಸುಮಾರು 4.48 ಲಕ್ಷ ಕೋಟಿ ರೂ. ಇದ್ದು, ಅದರಲ್ಲಿ ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಕೋಟಿ ರೂ. ಮೀಸಲಿಡಲಾ ಗುತ್ತಿದೆ. ಕೇಂದ್ರ ಸರಕಾರದ ಬಜೆಟ್ ಸುಮಾರು 52 ಲಕ್ಷ ಕೋಟಿ ರೂ. ಇದೆ. ಹೀಗಾಗಿ ಕೇಂದ್ರ ಸರಕಾರವೂ ಕಲ್ಯಾಣ ಕರ್ನಾಟಕಕ್ಕೆ 5 ಸಾವಿರ ಕೋಟಿ ರೂ. ನೀಡಿದರೆ ಒಟ್ಟು 10 ಸಾವಿರ ಕೋಟಿ ರೂ. ಅನುದಾನ ದೊರೆಯಲಿದ್ದು, ಈ ಭಾಗದ ಅಭಿವೃದ್ಧಿಗೆ ಇನ್ನಷ್ಟು ವೇಗ ಸಿಗಲಿದೆ ಎಂದರು.

'ಮೋದಿಯವರ ಕೊಡುಗೆ ಏನು? ಎಂದು ಪ್ರಶ್ನಿಸಿದ ಅವರು, ಕಳೆದ 12-13 ವರ್ಷಗಳಿಂದ ನರೇಂದ್ರ ಮೋದಿ ಅವರು ಅಧಿಕಾರದಲ್ಲಿದ್ದಾರೆ. 2014ರಲ್ಲಿ ಕರ್ನಾಟಕದಿಂದ 17 ಸಂಸದರು ಆಯ್ಕೆಯಾಗಿದ್ದರು. 2019ರಲ್ಲಿ 26 ಎನ್‌ಡಿಎ ಸಂಸದರು ಆಯ್ಕೆಯಾಗಿದ್ದರು. ಈಗಲೂ 19 ಸಂಸದರು ಇದ್ದಾರೆ. ಆದರೆ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಕೇಂದ್ರದಿಂದ ಹೆಚ್ಚಿನ ಅನುದಾನ ತರುವ ಕುರಿತು ಯಾರೂ ಧ್ವನಿ ಎತ್ತುತ್ತಿಲ್ಲ ಎಂದು ಟೀಕಿಸಿದರು.



**ಬಿಜೆಪಿ ನಾಯಕರ ಬಳಿ ಯಾವುದೇ ದಾಖಲೆಗಳಿಲ್ಲ :** ಕೆಪಿಎಸ್‌ಸಿ ನೇಮಕಾತಿ ಹಗರಣದ ವಿಚಾರದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕು ಎಂಬ ಬಿಜೆಪಿ ನಾಯಕರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಅಜಯ್ ಧರಂಸಿಂಗ್, ಬಿಜೆಪಿ ನಾಯಕರ ಬಳಿ ಯಾವುದೇ ದಾಖಲೆಗಳಿಲ್ಲ ಎಂದರು.

ಬಿಜೆಪಿ ನಾಯಕರು ಕಳೆದ ಒಂದು ತಿಂಗಳು, 15 ದಿನಗಳಿಂದ ಈ ಕುರಿತು ಹೇಳಿಕೆಗಳನ್ನು ನೀಡುತ್ತಿದ್ದಾರೆ. ಆದರೆ ಇದುವರೆಗೆ ಯಾವುದೇ ದಾಖಲೆಗಳನ್ನು ಬಹಿರಂಗ ಪಡಿಸಿಲ್ಲ. ಪ್ರಿಯಾಂಕ್ ಖರ್ಗೆ ಅವರು ತಮ್ಮ ನಿಲುವಿನ ಬಗ್ಗೆ ಸ್ಪಷ್ಟನೆಯನ್ನೂ ನೀಡಿದ್ದಾರೆ. ಕೇವಲ ಪ್ರಚಾರಕ್ಕಾಗಿ ಆರೋಪ ಮಾಡಲಾಗುತ್ತಿದೆ ಎಂದು ಹೇಳಿದರು.

ಹಿಂದೆ ಕುಮಾರಸ್ವಾಮಿ ಅವರೂ ತಮ್ಮ ಬಳಿ ಸಿಡಿ ಹಾಗೂ ಪೆನ್‌ಡ್ರೈವ್ ಇದೆ ಎಂದು ಹೇಳಿದ್ದರು. ಆದರೆ ಯಾವುದೇ ಸಿಡಿ ಅಥವಾ ಪೆನ್‌ಡ್ರೈವ್ ಹೊರಬರಲಿಲ್ಲ. ಈಗ ಆರೋಪ ಮಾಡುತ್ತಿರುವವರೇ "ಹಿಟ್ ವಿಕೆಟ್" ಆಗುತ್ತಿದ್ದಾರೆ ಎಂದು ಹೇಳಿದರು.

# ಶಿಥಿಲ ಶಾಲಾ ಕೊಠಡಿಗಳ ತೆರವಿಗೆ ಶಿಕ್ಷಣ ಇಲಾಖೆ-ಲೋಕೋಪಯೋಗಿ ಇಲಾಖೆ ಸಿದ್ಧತೆ



**ಬೀದರ್, ಸೆ. 19:** ಮಕ್ಕಳ ಜೀವಕ್ಕೆ ಅಪಾಯಕಾರಿಯಾಗಿರುವ ಶಿಥಿಲ ಶಾಲಾ ಕಟ್ಟಡಗಳ ತೆರವುಗೊಳಿಸಿ ಹೊಸ ಕಟ್ಟಡ ನಿರ್ಮಾಣಕ್ಕೆ ಶಿಕ್ಷಣ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಜಂಟಿಯಾಗಿ ಕ್ರಮ ಕೈಗೊಂಡಿವೆ.

ಜಿಲ್ಲೆಯ ಐದು ತಾಲೂಕುಗಳಲ್ಲಿ ಅಪಾಯದ ಸ್ಥಿತಿಯಲ್ಲಿರುವ ಶಾಲಾ ಕೊಠಡಿಗಳನ್ನು ತೆರವುಗೊಳಿಸಲು ಸಿದ್ಧತೆ ನಡೆಸಲಾಗಿದೆ. ಶಿಕ್ಷಣ ಇಲಾಖೆ ನೀಡಿರುವ ಪಟ್ಟಿಯ ಆಧಾರದ ಮೇಲೆ ಜಿಲ್ಲೆಯ 434 ಶಾಲೆಗಳ 1,311 ಶಿಥಿಲ ಕೊಠಡಿಗಳನ್ನು ನೆಲಸಮ ಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈಗಾಗಲೇ ಸಂಬಂಧಪಟ್ಟ ಇಲಾಖೆಗಳು ಪರಿಶೀಲನೆ ನಡೆಸಿದ್ದು, ಶಿಥಿಲ ಕಟ್ಟಡಗಳ ತೆರವಿಗೆ ಲೋಕೋಪಯೋಗಿ ಇಲಾಖೆ ಹಸಿರು ನಿಶಾನೆ ನೀಡಿದೆ. ಔರಾದ್ ತಾಲೂಕಿನಲ್ಲಿ 357 ಕೊಠಡಿಗಳು, ಭಾಲ್ಕಿಯಲ್ಲಿ 390 ಕೊಠಡಿಗಳು, ಬಸವಕಲ್ಯಾಣದಲ್ಲಿ 99 ಕೊಠಡಿಗಳು, ಬೀದರ್ ತಾಲೂಕಿನಲ್ಲಿ 130 ಕೊಠಡಿಗಳು ಹಾಗೂ ಹುಮನಾಬಾದ್ನಲ್ಲಿ 108 ಕೊಠಡಿಗಳನ್ನು ತೆರವುಗೊಳಿಸಲು ಸಿದ್ಧತೆ ನಡೆದಿದೆ.

ಈ ಪೈಕಿ ಭಾಲ್ಕಿ ತಾಲೂಕಿನಲ್ಲಿ ಅತಿ ಹೆಚ್ಚು ಶಿಥಿಲ ಕೊಠಡಿಗಳಿರುವುದು ಗಮನಕ್ಕೆ ಬಂದಿದೆ. ಬೀಳುವ ಹಂತದಲ್ಲಿರುವ ಕಟ್ಟಡಗಳಲ್ಲಿ ವಿದ್ಯಾರ್ಥಿ ಗಳಿಗೆ ಪಾಠ ನಡೆಸುವುದ ರಿಂದ ಅಪಾಯ ಉಂಟಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ, ಅಂತಹ ಕೊಠಡಿಗಳನ್ನು ತೆರವು ಗೊಳಿಸಿ ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಲು ಇಲಾಖೆ ಮುಂದಾಗಿದೆ.

ಶಿಕ್ಷಣ ಇಲಾಖೆ ಅಧಿಕಾರಿಗಳ ಹೇಳಿಕೆ: "ಶಿಥಿಲಗೊಂಡು ಮಕ್ಕಳ ಸುರಕ್ಷತೆಗೆ ಅಪಾಯಕಾರಿಯಾಗಿರುವ ಶಾಲಾ ಕೊಠಡಿಗಳನ್ನು ಗುರುತಿಸಿ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಲೋಕೋಪಯೋಗಿ ಇಲಾಖೆಯ ತಾಂತ್ರಿಕ ಪರಿಶೀಲನೆ ಹಾಗೂ ಅನುಮೋದನೆಯ ಬಳಿಕ ಹಂತ ಹಂತವಾಗಿ ತೆರವು ಕಾರ್ಯ ಕೈಗೊಳ್ಳಲಾಗುವುದು. ಮಕ್ಕಳ ಸುರಕ್ಷತೆಗೆ ಯಾವುದೇ ರೀತಿಯ ರಾಜಿ ಮಾಡಿಕೊಳ್ಳುವುದಿಲ್ಲ" ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಆದಿಕವಿ ವಾಲ್ಮೀಕಿ ವಿವಿಯಲ್ಲಿ ಶಾಸಕರಿಂದ ಕಾಮಗಾರಿ ಪರಿಶೀಲನೆ

**ರಾಯಚೂರು, ಸೆ. 19:** ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯಕ್ಕೆ ಶಾಸಕ ಬಸನಗೌಡ ದದ್ದಲ್ ಭೇಟಿ ನೀಡಿ ವಿಶ್ವವಿದ್ಯಾಲಯದಲ್ಲಿ ಪ್ರಗತಿಯಲ್ಲಿರುವ ವಿವಿಧ ಪ್ರಮುಖ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯುತ್ತಿರುವ ರಸ್ತೆ ನಿರ್ಮಾಣ, ಉದ್ಯಾನವನಗಳ ಅಭಿವೃದ್ಧಿ, ವಿದ್ಯಾರ್ಥಿ ವಸತಿ ನಿಲಯಗಳ ಕಟ್ಟಡ ಕಾಮಗಾರಿ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.



ಕಾಮಗಾರಿಗಳ ಗುಣಮಟ್ಟ ಹಾಗೂ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವು ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಸಾವಿರಾರು ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶ ಕಲ್ಪಿಸುವ ಪ್ರಮುಖ ಶಿಕ್ಷಣ ಸಂಸ್ಥೆಯಾಗಿದೆ. ವಿಶ್ವವಿದ್ಯಾಲಯದಲ್ಲಿ ಅಗತ್ಯ ಮೂಲ ಸೌಕರ್ಯಗಳು ಅಭಿವೃದ್ಧಿ ಯಾಗುವುದರಿಂದ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ, ವಸತಿ ಹಾಗೂ ಅಗತ್ಯ ಸೌಲಭ್ಯಗಳು ದೊರೆಯಲಿವೆ ಎಂದು ಹೇಳಿದರು.

# ಸುಜಯ ಶೆಟ್ಟಿ ಅವಿರತ ಪ್ರಯತ್ನ: ಮತ್ತೆ ಬರಲಾರಂಭಿಸಿದ ಟೂಲ್‌ಕಿಟ್‌ಗಳು

**ಗೋಕರ್ಣ, ಸೆ.9-** ಸಾಂಪ್ರದಾಯಿಕ ವೃತ್ತಿಗಳಲ್ಲಿ ತೊಡಗಿಸಿಕೊಂಡಿರುವ ಕುಶಲಕರ್ಮಿಗಳನ್ನು ಆರ್ಥಿಕವಾಗಿ ಸಬಲಗೊಳಿಸಿ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಆರಂಭಗೊಂಡಿದ್ದ ಪಿ.ಎಂ. ವಿಶ್ವಕರ್ಮ ಯೋಜನೆ ಫಲಾನುಭವಿಗಳಿಗೆ ಮರಿಚಿಕೆಯಾಗಿತ್ತು.

ಕೇಂದ್ರ ಸರಕಾರದ ಪಿ.ಎಂ. ವಿಶ್ವಕರ್ಮ ಯೋಜನೆ ಉತ್ತರ ಕನ್ನಡ ಜಿಲ್ಲೆಯಲ್ಲಿ ತನ್ನ ಮೂಲ ಉದ್ದೇಶದಿಂದ ದೂರ ಸರಿಯುತ್ತಿದ್ದು, ಸಾವಿರಾರು ಫಲಾನುಭವಿಗಳು ತರಬೇತಿ ಪೂರ್ಣಗೊಳಿಸಿ ಎರಡೂವರೆ ವರ್ಷ ಕಳೆದರೂ ಟೋಲ್ ಕಿಟ್ ಬಾರದೇ ಯೋಜನೆಯ ಅನುಷ್ಠಾನದ ಮೇಲೆ ಪ್ರಶ್ನೆ ಹುಟ್ಟುಹಾಕಿತ್ತು.

ಈ ಎಲ್ಲಾ ಅಂಶಗಳನ್ನು ಅರಿತು ಸಂಭಂದಪಟ್ಟ ಇಲಾಖೆಯ ಅಧಿಕಾರಿಗಳಿಗೆ, ಸ್ಥಳೀಯ ಸಂಸದರಿಗೆ, ಕೇಂದ್ರ ಸಚಿವರಿಗೆ ಸುಜಯ ಶೆಟ್ಟಿ ಮನವಿ ಮಾಡಿದ್ದರು.

ಇದನ್ನೆಲ್ಲಾ ಗಮನಿಸಿದ ಅಧಿಕಾರಿಗಳು ಮತ್ತು ಸಂಭಂದಿಸಿದವರು ಇತ್ತೆಚ್ಚುಕೊಂಡು ತರಬೇತಿ ಪೂರ್ಣಗೊಳಿಸಿದ ಶಿಬಿರಾರ್ಥಿಗಳಿಗೆ ಎರಡೂವರೆ ವರ್ಷದ ನಂತರ ಈಗ 15,000 ರೂ ಮೌಲ್ಯದ ಟೂಲ್ ಕಿಟ್ ಗಳು ಮತ್ತೆ ಬರಲು ಪ್ರಾರಂಭಿಸಿವೆ.



ತರಬೇತಿ ಪಡೆದ ಪಲಾನುಭವಿಗಳಲ್ಲಿ ಸಂತಸ ತಂದಿದ್ದು ಪ್ರಧಾನಮಂತ್ರಿಗಳ ಕನಸಿನ ಪಿ.ಎಂ.ವಿಶ್ವಕರ್ಮ ಯೋಜನೆಯ ಬಗ್ಗೆ ಭರವಸೆ ಮೂಡಿದೆ.

ತರಬೇತಿ ಪಡೆದು ಎರಡೂವರೆ ವರ್ಷದ ನಂತರ ಈಗ ಹೊಲಿಗೆ ಯಂತ್ರದ ಟೂಲ್ ಕಿಟ್ ಬಂದಿದ್ದು ಸಂತಸ ತಂದಿದೆ.ಜೀವನೋಪಾಯಕ್ಕೆ ಅನುಕೂವಾಗಲಿದೆ. ಕುಶಲಕರ್ಮಿಗಳ ಸಮಸ್ಯೆಗೆ ಸ್ಪಂದಿಸಿದ ಸುಜಯ ಶೆಟ್ಟಿ ಗೋಕರ್ಣ ಅವರಿಗೆ ಧನ್ಯವಾದ ಸಲ್ಲಿಸುತ್ತೇನೆ.
-ಸುಜಯ ಶೆಟ್ಟಿ ಗೋಕರ್ಣ
ನಿಕಟಪೂರ್ವ ಗ್ರಾಮ ಪಂಚಾಯತ್ ಸದಸ್ಯರು

# ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿ ಡಾ. ಕಿರಣ ದೇಶಮುಖ ಅಧಿಕಾರ

**ಕಲಬುರಗಿ, ಸೆ. 19:** ಪಕ್ಷದ ಜಿಲ್ಲಾ ಅಧ್ಯಕ್ಷರಿಗೆ ಮಹತ್ತರ ಜವಬ್ದಾರಿ ಇರುತ್ತದೆ. ನೂತನ ಅಧ್ಯಕ್ಷ ಡಾ.ಕಿರಣ ದೇಶಮುಖ ಅವರು ಮೊದಲು ಪ್ರತಿ ತಾಲ್ಲೂಕು ಕೇಂದ್ರಕ್ಕೆ ತೆರಳಿ ಪಕ್ಷದ ಯುವ ಕಾರ್ಯಕರ್ತರನ್ನು ಸೇರಿಸಿ ಪಕ್ಷದ ಇತಿಹಾಸವನ್ನು ಮನದಟ್ಟು ಮಾಡಬೇಕು. ಮಹಾತ್ಮ ಗಾಂಧೀಜಿ, ನೇತಾಜಿ ಸುಭಾಷಚಂದ್ರ ಬೋಸ್, ಜವಾಹರಲಾಲ್ ನೆಹರೂ, ಪಟೇಲ್, ಸುಚೇತಾ ಕೃಪಲಾನಿ ಮುಂತಾದ ಮಹಾನ್ ನಾಯಕರು ನಮ್ಮ ಪಕ್ಷದವರು. ಅವರಿಂದಲೇ ಪಕ್ಷ ಬೆಳೆದಿದೆ ಎಂಬುದನ್ನು ಮನದಟ್ಟು ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ಜೈ ಭವಾನಿ ಕಲ್ಯಾಣ ಮಂಟಪದಲ್ಲಿ ಸಚಿವರು, ಶಾಸಕರು ಮತ್ತು ಜಿಲ್ಲೆಯ ಸಹಸ್ರಾರು ಕಾಂಗ್ರೆಸ್ ಕಾರ್ಯಕರ್ತರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷದ ನೂತನ ಜಿಲ್ಲಾಧ್ಯಕ್ಷ ಡಾ.ಕಿರಣ ಪಾಟೀಲ್ ಅವರ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಮಾತನಡಿದ ಅವರು, ಸರ್ಕಾರಕ್ಕಿಂತ ಪಕ್ಷ ದೊಡ್ಡದು. ನಮ್ಮ ಪಕ್ಷದ ಪ್ರತಿಯೊಬ್ಬ ಸಚಿವರು, ಶಾಸಕರು, ಪರಿಷತ್ ಸದಸ್ಯರು ಮತ್ತು ಸ್ಥಳೀಯ ಸಂಸ್ಥೆಯ ಎಲ್ಲ ಚುನಾಯಿತ ಸದಸ್ಯರು ನಿಯಮಿತವಾಗಿ ಪಕ್ಷದ ಕಚೇರಿಗೆ ಬಂದು ಕಾರ್ಯಕರ್ತರೊಂದಿಗೆ ಸಭೆಗಳನ್ನು ನಡೆಸುವ ಮೂಲಕ ಜನರ ಸಮಸ್ಯೆಗಳು ಮತ್ತು ಪರಿಹಾರ ಕುರಿತು ಸಮಾಲೋಚನೆ ನಡೆದಾಗ ಮಾತ್ರ ಪಕ್ಷ ಮತ್ತೆ ಅಧಿಕಾರಕ್ಕೆ ತರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಅವರು ಅಂಬೇಡ್ಕರ್ ಅವರ ಕನಸು ನನಸು ಮಾಡಲು ಹಾಗೂ ಬಿಜೆಪಿ ದುರಾಡಳಿತವನ್ನು ತಿಳಿಹೇಳಲು ದೇಶದಾದ್ಯಂತ ಸಂಚರಿಸುತ್ತಿದ್ದಾರೆಯೇ ಹೊರತು ಅಧಿಕಾರಕ್ಕಾಗಿ ಅಲ್ಲ. ಕಾಂಗ್ರೆಸ್ ಪಕ್ಷದ ಇತಿಹಶ, ಹೋರಾಟ ಮತ್ತು ಜನಪರ ಕಾರ್ಯಕ್ರಮಗಳ ಕುರಿತು ಜನರಿಗೆ ತಿಳಿಸುವ ಕೆಲಸ ಪಕ್ಷದ ಕಾರ್ಯಕರ್ತರಿಂದ ನಡೆಯಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹೇಳಿದರು.



ಸಚಿವ ಡಾ.ಅಜಯಸಿಂಗ್ ಅವರು, ಹೋರಾಟ ನಮ್ಮ ಕಾಂಗ್ರೆಸ್ ಪಕ್ಷದ ರಕ್ತದಲ್ಲೇ ಇದೆ. ಸ್ವಾತಂತ್ರ್ಯ ಹೋರಾಟದಿಂದ ಇದುವರೆಗೂ ಪಕ್ಷ ಜನರಿಗಾಗಿ ಹೋರಾಡುತ್ತ ಬಂದಿದೆ. ನಮ್ಮ ಪಕ್ಷ ಅಧಿಕಾರದಲ್ಲಿದ್ದಗ, ಜನರಿಗಾಗಿ ದುಡಿದಿದೆ. ಜನಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡತನ ನಿವಾರಣೆ ಮತ್ತು ಭದ್ರತೆ ಒದಗಿಸುವಲ್ಲಿ ಶ್ರಮಿಸಿದೆ, ಶ್ರಮಿಸುತ್ತಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕರ ಸ್ವೀಕರಿಸಿದ ಡಾ.ಕಿರಣ ಪಾಟೀಲ್ ಅವರು, ನಾನೊಬ್ಬನೇ ಏನನ್ನೂ ಎಲ್ಲವನ್ನೂ ಮಾಡಲು ಸಾಧ್ಯವಿಲ್ಲ. ನಮ್ಮ ಪಕ್ಷ ಮೊದಲಿಂದಲೂ ಸಾಮೂಹಿಕ ನಾಯಕತ್ವದಲ್ಲಿ ಮತ್ತು ಕಾರ್ಯಕರ್ತರ ಮೇಲೆ ನಂಬಿಕೆ ಯನ್ನಿಟ್ಟಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನನಗೆ ನೀಡಿರುವ ಅವಕಶವನ್ನು ಪಕ್ಷದ ಸಂಘಟನೆ ಮತ್ತು ಮುಂಬರುವ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವುದು ನಮ್ಮ ಮುಂದಿನ ಗುರಿಯಗಿದೆ ಎಂದರು.

ಪಕ್ಷದ ಬಾವುಟವನ್ನು ಡಾ. ಕಿರಣ ದೇಶಮುಖ ಅವರಿಗೆ ಹಸ್ತಾಂತರಿಸಿದ ಪಕ್ಷದ ನಿಕಟಪೂರ್ವ ಅಧ್ಯಕ್ಷ ಜಗದೇವ ಗುತ್ತೇದಾರ ಮಾತನಾಡಿ, ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರುಗಳ ಅವಧಿಯಲ್ಲಿ ಜಿಲ್ಲಾ ಅಧ್ಯಕ್ಷನಾಗಿ ಕೆಲಸ ಮಾಡುವ ಮಹತ್ವದ ಹೊಣೆಗಾರಿಕೆಯನ್ನು ಪಕ್ಷದ ವರಿಷ್ಠರು ನನಗೆ ವಹಿಸಿದ್ದು, ಮರೆಯಲಾಗದ ಅನುಭವ. ಪಕ್ಷದಲ್ಲಿ ಎಲ್ಲರನ್ನೂ ಒಗ್ಗೂಡಿಸಿಕೊಂಡು ಕೆಲಸ ಮಾಡಿದ್ದು ತೃಪ್ತಿ ತಂದಿದೆ ಎಂದರು.

ಶಾಸಕರಾದ ಎಂ.ವೈ.ಪಾಟೀಲ, ಅಲ್ಲಮಪ್ರಭು ಪಾಟೀಲ, ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ಗ್ರಾಮಗಳನ್ನು ಸುತ್ತಿ ಸಮಸ್ಯೆಗಳನ್ನು ಅರ್ಥ ಮಾಡಿಕೊಂಡು ಪಕ್ಷವನ್ನು ಸಂಘಟಿಸಬೇಕು ಎಂದು ಸಲಹೆ ನೀಡಿದರು.

# ರಷ್ಯಾದ ತೈಲ ಖರೀದಿಸುವ ದೇಶಗಳಿಗೆ ಶೇ.100ರಷ್ಟು ಸುಂಕ: ಮಸೂದೆಗೆ ಅಮೆರಿಕ ಅಧ್ಯಕ್ಷ ಟ್ರಂಪ್ ಸಹಿ




**ವಾಷಿಂಗ್ಟನ್, ಸೆ. 19:** ರಷ್ಯಾ ದೇಶದಿಂದ ಕಚ್ಚಾತೈಲ ಮತ್ತು ಗ್ಯಾಸ್ ಖರೀದಿಸುವ ದೇಶಗಳಿಗೆ 100% ಸುಂಕ ವಿಧಿಸುವ ಲಿಂಡ್ಸೆ ಒ. ಗ್ರಹಾಂ ಸ್ಯಾಂಕ್ಷನಿಂಗ್ ರಷ್ಯಾ ಅಂಡ್ ಇರಾನ್ ಆಕ್ಟ್ ಆಫ್ 2026 ಎಂಬ ಮಸೂದೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶನಿವಾರ ಸಹಿ ಹಾಕಿದ್ದು, ಇದು ಭಾರತದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ ಎಂದು ವರದಿಯಾಗಿದೆ.

ಗುರುವಾರ ಅಮೆರಿಕ ಸಂಸತ್‌ನಲ್ಲಿ ಡೆಮಾಕ್ರಟಿಕ್ ಪಕ್ಷದ ಇಬ್ಬರು ಸಂಸದರು ಪಕ್ಷದ ವಿರುದ್ಧವಾಗಿ ಬೆಂಬಲಿಸಿದ್ದರಿಂದ 214–211 ಮತಗಳಿಂದ ಮಸೂದೆ ಅಂಗೀಕಾರಗೊಂಡಿತ್ತು. ಎರಡೂ ದಿನಗಳ ಬಳಿಕ ಇದು ಟ್ರಂಪ್ ಕಾನೂನಿಗೆ ಸಹಿ ಹಾಕಿದ್ದಾರೆ.

ಮಸೂದೆಯು ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ರಷ್ಯಾದ ತೈಲ ಮತ್ತು ಗ್ಯಾಸ್ ಖರೀದಿಸುವ ಅಗ್ರ ಐದು ಆಮದುದಾರ ದೇಶಗಳ ಸರಕುಗಳ ಮೇಲೆ 100 ಪ್ರತಿಶತ ಸುಂಕವನ್ನು ವಿಧಿಸಲು ಅವಕಾಶ ನೀಡುತ್ತದೆ. ಪ್ರಸ್ತುತ, ರಷ್ಯಾದಿಂದ ತೈಲ ಮತ್ತು ಅನಿಲವನ್ನು ಆಮದು ಮಾಡಿಕೊಳ್ಳುವ ಅಗ್ರ ಐದು ದೇಶಗಳೆಂದರೆ ಚೀನಾ, ಭಾರತ, ಅಜರ್‌ಬೈಜಾನ್, ಹಂಗೇರಿ ಮತ್ತು ಸ್ಲೋವಾಕಿಯಾ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ.

ಜೊತೆಗೆ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಉದ್ಯಮಿಗಳು ಮತ್ತು ಹಣಕಾಸು ಸಂಸ್ಥೆಗಳು ಸೇರಿದಂತೆ ರಷ್ಯಾದ ನಾಯಕರು ಹಾಗೂ ಅಧಿಕಾರಿಗಳ ಮೇಲೆ ನಿರ್ಬಂಧಗಳನ್ನು ವಿಧಿಸಲು ಈ ಮಸೂದೆಯು ಉದ್ದೇಶಿಸಿದೆ. ರಷ್ಯಾಕ್ಕೆ ಸಂಬಂಧಿಸಿದ ಕ್ರಮಗಳ ಜೊತೆಗೆ, ಈ ಮಸೂದೆಯು 1996ರ 'ಇರಾನ್ ನಿರ್ಬಂಧಗಳ ಕಾಯಿದೆ'ಯ ಅವಧಿಯನ್ನು 2031ರವರೆಗೆ ವಿಸ್ತರಿಸಲಿದೆ. ಇರಾನ್‌ನ ಇಂಧನ ವಲಯದಲ್ಲಿ ಹೂಡಿಕೆ ಮಾಡುವ ಕಂಪನಿಗಳಿಗೆ ಈ ಕಾಯಿದೆಯಡಿ ದಂಡ ವಿಧಿಸಲಾಗುತ್ತದೆ ಎನ್ನಲಾಗಿದೆ.

ರಷ್ಯಾದಿಂದ ತೈಲ ಖರೀದಿಸುವ ದೇಶಗಳ ಮೇಲೆ ಶೇ. 100ರಷ್ಟು ಸುಂಕ ವಿಧಿಸುವ ಮಸೂದೆಗೆ ಅಮೆರಿಕ ಸಂಸತ್‌ನಲ್ಲಿ ಅಂಗೀಕರಿಸಿದ ಬೆನ್ನಲ್ಲೆ ಪ್ರತಿಕ್ರಿಯಿಸಿರುವ ಕೇಂದ್ರ ಸರ್ಕಾರ, ಭಾರತದ ವ್ಯಾಪಾರ, ಆರ್ಥಿಕ ಹಿತಾಸಕ್ತಿಗಳನ್ನು ರಕ್ಷಿಸುತ್ತೇವೆ ಎಂದು ಹೇಳಿದೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಕೇಂದ್ರ ವಿದೇಶಾಂಗ ಸಚಿವಾಲಯ, ಹಿಂದಿನ ಹಲವಾರು ಸಂದರ್ಭಗಳಲ್ಲಿ ಹೇಳಿದಂತೆ, ಭಾರತವು ತನ್ನ 140 ಕೋಟಿ ಜನರಿಗೆ ಇಂಧನ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ದೃಢವಾಗಿ ಬದ್ಧವಾಗಿದೆ. ಮತ್ತು ವೈವಿಧ್ಯಮಯ ಪೂರೈಕೆ ಮೂಲಗಳ ಮೂಲಕ ಅದನ್ನು ಮುಂದುವರಿಸುತ್ತದೆ ಎಂದು ತಿಳಿಸಿದೆ.

# ಎಚ್–1ಬಿ ವೀಸಾ ನಿರ್ಬಂಧ ಮತ್ತೊಂದು ವರ್ಷಕ್ಕೆ ವಿಸ್ತರಣೆ




■ ವಿದೇಶಿ ನೌಕರರ ನೇಮಕಾತಿಗೆ ಅಮೆರಿಕ ಕತ್ತರಿ: 1 ಲಕ್ಷ ಡಾಲರ್ ಶುಲ್ಕ ಆದೇಶ ಮುಂದುವರಿಕೆ

**ವಾಷಿಂಗ್ಟನ್, ಸೆ.19:** ವಿದೇಶಿ ನೌಕರರ ನೇಮಕಾತಿಗೆ ಕಠಿಣ ನಿಯಮಗಳನ್ನು ಜಾರಿಗೆ ತರುತ್ತಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು, ಹೊಸ ಎಚ್–1ಬಿ ವೀಸಾಗಳ ಮೇಲಿನ $1,00,000 ಭಾರಿ ಶುಲ್ಕದ ಆದೇಶವನ್ನು ಮತ್ತೊಂದು ವರ್ಷಕ್ಕೆ ವಿಸ್ತರಿಸಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಹೊಸ ಎಚ್–1ಬಿ ವೀಸಾ ಅರ್ಜಿಗಳಿಗೆ ವಿಧಿಸಲಾಗುತ್ತಿರುವ 1 ಲಕ್ಷ ಅಮೆರಿಕನ್ ಡಾಲರ್ ಶುಲ್ಕದ ನಿಯಮವನ್ನು 2027ರ ಸೆಪ್ಟೆಂಬರ್ 21ರವರೆಗೆ ವಿಸ್ತರಿಸುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದ್ದಾರೆ.

ಶುಕ್ರವಾರ (ಸೆಪ್ಟೆಂಬರ್ 18, 2026) ಹೊರಡಿಸಲಾದ ಈ ಹೊಸ ಆದೇಶದ ಅನ್ವಯ, ಈ ಕಟ್ಟುನಿಟ್ಟಿನ ನಿಯಮವು 21 ಸೆಪ್ಟೆಂಬರ್ 2027 ರವರೆಗೆ ಜಾರಿಯಲ್ಲಿರಲಿದೆ. ಇದರೊಂದಿಗೆ, ಅಮೆರಿಕದ ಸ್ಥಳೀಯ ಉದ್ಯೋಗಿಗಳನ್ನು ಕೆಲಸದಿಂದ ತೆಗೆದುಹಾಕುವ ಕಂಪನಿಗಳ ಮೇಲೆಯೂ ತೀವ್ರ ನಿಗಾ ವಹಿಸುವಂತೆ ಟ್ರಂಪ್ ಮತ್ತೊಂದು ಆದೇಶ ಹೊರಡಿಸಿದ್ದಾರೆ.

ಅಮೆರಿಕದ ಎಚ್–1ಬಿ ವೀಸಾ ಕಾರ್ಯಕ್ರಮದ ಅತಿದೊಡ್ಡ ಫಲಾನುಭವಿ ಸಮುದಾಯವಾಗಿ ಭಾರತೀಯರು ಮುಂದುವರಿದಿದ್ದಾರೆ.

ಶುಕ್ರವಾರ ಹೊರಡಿಸಿದ ಅಧ್ಯಕ್ಷೀಯ ಘೋಷಣೆಯಲ್ಲಿ, 2025ರಲ್ಲಿ 1 ಲಕ್ಷ ಡಾಲರ್ ಶುಲ್ಕ ವಿಧಿಸುವ ನಿರ್ಧಾರ ಕೈಗೊಂಡ ಬಳಿಕ ದೊಡ್ಡ ಐಟಿ ಹೊರಗುತ್ತಿಗೆ ಸಂಸ್ಥೆಗಳಿಂದ ಸಲ್ಲಿಕೆಯಾಗುತ್ತಿದ್ದ ಎಚ್–1ಬಿ ನೋಂದಣಿಗಳಲ್ಲಿ ಶೇ.92ರಷ್ಟು ಇಳಿಕೆಯಾಗಿದೆ ಎಂದು ಟ್ರಂಪ್ ಹೇಳಿದ್ದಾರೆ.

2025ರ ಘೋಷಣೆಯನ್ನು ವಿಸ್ತರಿಸುವುದರಿಂದ ಅಮೆರಿಕದ ಆರ್ಥಿಕ ಮತ್ತು ರಾಷ್ಟ್ರೀಯ ಭದ್ರತಾ ಹಿತಾಸಕ್ತಿಗಳನ್ನು ರಕ್ಷಿಸುವುದು, ಅಮೆರಿಕದ ಕಾರ್ಮಿಕರು ಹಾಗೂ ಪದವೀಧರರಿಗೆ ಉದ್ಯೋಗ ಮಾರುಕಟ್ಟೆ ಪ್ರವೇಶವನ್ನು ಸುಧಾರಿಸುವುದು ಮತ್ತು ಕಾರ್ಯಕ್ರಮದ ಮೂಲ ಉದ್ದೇಶಕ್ಕೆ ಅನುಗುಣವಾಗಿ ಅಗತ್ಯವಿದ್ದಾಗ ಅತ್ಯಂತ ಕೌಶಲ್ಯ ಹೊಂದಿರುವ ಹಾಗೂ ಪ್ರಮುಖ ವಿದೇಶಿ ಉದ್ಯೋಗಿಗಳನ್ನು ಮಾತ್ರ ನೇಮಕ ಮಾಡಿಕೊಳ್ಳುವುದನ್ನು ಖಚಿತಪಡಿಸುವುದು ಎಂದು ತಿಳಿಸಿದ್ದಾರೆ..

2025ರಲ್ಲಿ 1 ಲಕ್ಷ ಡಾಲರ್ ಶುಲ್ಕ ವಿಧಿಸುವ ನಿರ್ಧಾರ ಕಾನೂನು ಸವಾಲನ್ನು ಎದುರಿಸುತ್ತಿದ್ದು, ಈ ವಿಚಾರ ಎರಡು ಪ್ರತ್ಯೇಕ ಫೆಡರಲ್ ನ್ಯಾಯಾಲಯಗಳ ಮುಂದೆ ವಿಚಾರಣೆಯಲ್ಲಿದೆ.

2025ರಲ್ಲಿ ಶುಲ್ಕ ಹೆಚ್ಚಿಸುವ ಕುರಿತು ಹೊರಡಿಸಿದ್ದ ಆದೇಶದ ಅವಧಿ ಈ ತಿಂಗಳು ಮುಕ್ತಾಯಗೊಳ್ಳಬೇಕಿತ್ತು. ಅಮೆರಿಕದಲ್ಲಿ ಈಗಾಗಲೇ ವಿದ್ಯಾರ್ಥಿ ವೀಸಾದಡಿ ನೆಲೆಸಿರುವ ವಿದೇಶಿ ನಾಗರಿಕರಿಗೆ ನೀಡಲಾಗುವ ವೀಸಾಗಳಿಗೆ ಈ ಶುಲ್ಕ ಅನ್ವಯವಾಗುತ್ತಿರಲಿಲ್ಲ. ಹೊಸ ಎಚ್–1ಬಿ ವೀಸಾ ಪಡೆಯುವವರಲ್ಲಿ ಇವರು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಪ್ರಸ್ತುತ ವೀಸಾಗಳ ನವೀಕರಣಕ್ಕೂ ಈ ಶುಲ್ಕ ಅನ್ವಯವಾಗುವುದಿಲ್ಲ.

ಇದೇ ವೇಳೆ, ಕಾರ್ಮಿಕ ಕಾರ್ಯದರ್ಶಿಯು ವೇತನ ಮತ್ತು ಕೆಲಸದ ವಿಭಾಗದ ಮೂಲಕ ಈ ಹಿಂದೆ ಸಲ್ಲಿಸಲಾದ ಕಾರ್ಮಿಕ ಷರತ್ತು ಅರ್ಜಿಗಳ ದತ್ತಾಂಶವನ್ನು ಪರಿಶೀಲಿಸುವ ಪ್ರಕ್ರಿಯೆ ಆರಂಭಿಸಲು 30 ದಿನಗಳ ಗಡುವನ್ನು ಆದೇಶದಲ್ಲಿ ನಿಗದಿಪಡಿಸಲಾಗಿದೆ. ಪ್ರಾಯೋಜಕ ಸಂಸ್ಥೆಗಳ ವಿರುದ್ಧ ಮತ್ತಷ್ಟು ಕ್ರಮ ಕೈಗೊಳ್ಳುವ ಅಗತ್ಯವಿದೆಯೇ ಎಂಬುದನ್ನು ಈ ಪರಿಶೀಲನೆ ನಿರ್ಧರಿಸಲಿದೆ. ಎಚ್–1ಬಿ ವೀಸಾ ಅರ್ಜಿಗಳ ಪರಿಶೀಲನೆಯನ್ನು ಮತ್ತಷ್ಟು ಬಿಗಿಗೊಳಿಸುವ ನಿಟ್ಟಿನಲ್ಲಿ ವಿವಿಧ ಸರ್ಕಾರಿ ಇಲಾಖೆಗಳ ನಡುವಿನ ಸಮನ್ವಯವನ್ನು ಹೆಚ್ಚಿಸುವ ಪ್ರತ್ಯೇಕ ಘೋಷಣೆಯನ್ನೂ ಅಧ್ಯಕ್ಷರು ಹೊರಡಿಸಿದ್ದಾರೆ.

ಅಮೆರಿಕದ ಉದ್ಯೋಗಿಗಳು ಕೆಲಸ ಕಳೆದುಕೊಳ್ಳುವ ಹೆಚ್ಚಿನ ಅಪಾಯವಿರುವ ಸಂದರ್ಭಗಳಲ್ಲಿ ಎಚ್–1ಬಿ ವೀಸಾ ಅರ್ಜಿಗಳ ಪರಿಶೀಲನೆಯನ್ನು ಹೆಚ್ಚಿಸುವ ಮೂಲಕ ಹಾಗೂ ವಿವಿಧ ಸರ್ಕಾರಿ ಸಂಸ್ಥೆಗಳ ನಡುವಿನ ಸಮನ್ವಯವನ್ನು ಸುಧಾರಿಸುವ ಮೂಲಕ ಈ ಆದೇಶವು ಎಚ್–1ಬಿ ವೀಸಾ ಕಾರ್ಯಕ್ರಮದ ಸಮಗ್ರತೆಯನ್ನು ಬಲಪಡಿಸುತ್ತದೆ ಎಂದು ಶ್ವೇತಭವನ ಬಿಡುಗಡೆ ಮಾಡಿರುವ ಮಾಹಿತಿ ಪತ್ರದಲ್ಲಿ ತಿಳಿಸಲಾಗಿದೆ.

ಎಚ್–1ಬಿ ವೀಸಾ ಅರ್ಜಿಗಳನ್ನು ಪರಿಶೀಲಿಸುವಾಗ ಅರ್ಜಿ ಸಲ್ಲಿಸುವ ಸಂಸ್ಥೆಗಳು ಇತ್ತೀಚೆಗೆ ಅಥವಾ ಮುಂದಿನ ದಿನಗಳಲ್ಲಿ ಸಮಾನ ಹುದ್ದೆಯಲ್ಲಿರುವ ಅಮೆರಿಕದ ಉದ್ಯೋಗಿಗಳನ್ನು ಕೆಲಸದಿಂದ ತೆಗೆದುಹಾಕಿದ್ದಾರೆಯೇ ಎಂಬುದನ್ನು ಪರಿಗಣಿಸುವಂತೆ ವಿದೇಶಾಂಗ ಸಚಿವರು, ಕಾರ್ಮಿಕ ಸಚಿವರು ಹಾಗೂ ಗೃಹ ಭದ್ರತಾ ಸಚಿವರಿಗೆ ಆದೇಶಿಸಲಾಗಿದೆ.

ವಿಶಿಷ್ಟ ಕೌಶಲ್ಯ ಹಾಗೂ ಅತ್ಯಂತ ಪರಿಣತಿ ಹೊಂದಿರುವ ವಿದೇಶಿ ತಾತ್ಕಾಲಿಕ ಉದ್ಯೋಗಿಗಳನ್ನು ಗುರುತಿಸಿ, ಅಮೆರಿಕದ ಆರ್ಥಿಕತೆಗೆ ಅಗತ್ಯವಿರುವ ಸಂದರ್ಭದಲ್ಲಿ ಅವರ ಸೇವೆಯನ್ನು ಬಳಸಿಕೊಳ್ಳುವ ಉದ್ದೇಶದಿಂದ ಎಚ್–1ಬಿ ವಲಸೆ ರಹಿತ ವೀಸಾ ಕಾರ್ಯಕ್ರಮವನ್ನು ರೂಪಿಸಲಾಗಿದೆ ಎಂದು ಟ್ರಂಪ್ ಕಾರ್ಯಕಾರಿ ಆದೇಶದಲ್ಲಿ ಹೇಳಿದ್ದಾರೆ.

ಆದರೆ, ಕೆಲವು ಉದ್ಯೋಗದಾತರು, ಮೂರನೇ ವ್ಯಕ್ತಿಯ ನೇಮಕಾತಿ ಸಂಸ್ಥೆಗಳು ಹಾಗೂ ಹೊರಗುತ್ತಿಗೆ ಸಂಸ್ಥೆಗಳು ಅಮೆರಿಕದ ಕೌಶಲ್ಯ ಹೊಂದಿರುವ ಕಾರ್ಮಿಕರ ಉದ್ಯೋಗಾವಕಾಶಗಳನ್ನು ಕುಗ್ಗಿಸಲು ಮತ್ತು ಅವರನ್ನು ಕೆಲಸದಿಂದ ಬದಲಿಸಲು ಈ ಕಾರ್ಯಕ್ರಮವನ್ನು ವ್ಯಾಪಕವಾಗಿ ದುರುಪಯೋಗಪಡಿಸಿಕೊಂಡಿವೆ ಎಂದು ಆರೋಪಿಸಿದ್ದಾರೆ.

# ಪ್ರವಾಹ ಪೀಡಿತ ನೇಪಾಳಕ್ಕೆ ಭಾರತದಿಂದ ಹೆಚ್ಚುವರಿ ಪರಿಹಾರ ಸಾಮಗ್ರಿಗಳ ಹಸ್ತಾಂತರ

**ಕಠ್ಮಂಡು, ಸೆ.19:** ಆ.26 ರಂದು ಸಂಭವಿಸಿದ ಭೀಕರ ಪ್ರವಾಹದ ನಂತರ ನೇಪಾಳದ ಚೇತರಿಕೆಗೆ ತನ್ನ ಬೆಂಬಲವನ್ನು ಮುಂದುವರಿಸಿರುವ ಭಾರತವು, ಶನಿವಾರದಂದು 11 ಟನ್ ಪರಿಹಾರ ಸಾಮಗ್ರಿಗಳನ್ನು ನೇಪಾಳದ ಅಧಿಕಾರಿಗಳಿಗೆ ಹಸ್ತಾಂತರಿಸಿದೆ. ನವದೆಹಲಿಯಿಂದ ಹೊರಟ ಒಂಬತ್ತನೇ ವಿಮಾನವು ಈ ಹಿಮಾಲಯನ್ ರಾಷ್ಟ್ರವನ್ನು ತಲುಪಿದಾಗ ಈ ಸಾಮಗ್ರಿಗಳನ್ನು ಒಪ್ಪಿಸಲಾಯಿತು.

"ನೇಪಾಳದ ಚೇತರಿಕೆಯ ಪ್ರಯತ್ನಗಳಿಗೆ ಭಾರತದ ಬೆಂಬಲ ಮುಂದುವರೆದಿದೆ: ಡೇರೆಗಳು, ಔಷಧಗಳು, ಸ್ಲೀಪಿಂಗ್ ಬ್ಯಾಗ್‌ಗಳು ಮತ್ತು ಫೋರೆನ್ಸಿಕ್ (ನ್ಯಾಯಾಲಯ ವೈದ್ಯಕೀಯ ತನಿಖಾ) ಸಾಮಗ್ರಿಗಳು ಸೇರಿದಂತೆ 11 ಟನ್ ಸರಕುಗಳನ್ನು ಹೊತ್ತ ಭಾರತೀಯ ವಾಯುಪಡೆಯ (ಐಎಎಫ್) 9ನೇ ವಿಮಾನವು ಕಠ್ಮಂಡುವನ್ನು ತಲುಪಿತು ಮತ್ತು ಆ ಸಾಮಗ್ರಿಗಳನ್ನು ನೇಪಾಳ ಸರ್ಕಾರಕ್ಕೆ ಹಸ್ತಾಂತರಿಸಲಾಯಿತು," ಎಂದು ನೇಪಾಳದಲ್ಲಿರುವ ಭಾರತದ ರಾಯಭಾರಿ ನವೀನ್ ಶ್ರೀವಾಸ್ತವ ಅವರು 'ಎಕ್ಸ್' (ಫೆ) ನಲ್ಲಿ ತಿಳಿಸಿದ್ದಾರೆ. ನೇಪಾಳದ ಚೇತರಿಕೆಗೆ ಬೆಂಬಲ ನೀಡುವ ಭಾರತದ ಬದ್ಧತೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯವೂ ಪುನರುಚ್ಚರಿಸಿದೆ.

ರಸುವಾದಲ್ಲಿ ಇತ್ತೀಚೆಗೆ ಸಂಭವಿಸಿದ ಹಠಾತ್ ಪ್ರವಾಹದ ನಂತರ ರಕ್ಷಣಾ ಮತ್ತು ಪರಿಹಾರ ಕಾರ್ಯಗಳಲ್ಲಿ ನೀಡಿದ ಬೆಂಬಲಕ್ಕಾಗಿ ನೇಪಾಳದ ಹಣಕಾಸು ಸಚಿವ ಸ್ವರ್ಣಿಮ್ ವಾಗ್ಲೆ ಅವರು ಭಾರತ ಸರ್ಕಾರಕ್ಕೆ ಶುಕ್ರವಾರ ಧನ್ಯವಾದ ಅರ್ಪಿಸಿದರು ಎಂದು ಭಾರತದಲ್ಲಿರುವ ನೇಪಾಳದ ರಾಯಭಾರ ಕಚೇರಿ ತಿಳಿಸಿದೆ.


"ಉಭಯ ಸಚಿವರು ದೀರ್ಘಕಾಲದ ನೇಪಾಳ–ಭಾರತ ಸ್ನೇಹವನ್ನು ಗಾಢವಾಗಿಸುವ ಮತ್ತು ವಿಶೇಷವಾಗಿ ಹೂಡಿಕೆ, ಇಂಧನ ಹಾಗೂ ಸಂಪರ್ಕ ವಲಯಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸಿದರು," ಎಂದು ಅದು ಸೇರಿಸಿದೆ.

ಕಳೆದ ವಾರ, ಸುರಂಗ ರಕ್ಷಣಾ ಕಾರ್ಯಾಚರಣೆಗೆ ಬೇಕಾದ ಸಾಮಗ್ರಿಗಳು ಮತ್ತು ಫೋರೆನ್ಸಿಕ್ ಸರಕುಗಳು ಸೇರಿದಂತೆ ಭಾರತವು ಕಳುಹಿಸಿದ್ದ ಪರಿಹಾರ ಮತ್ತು ರಕ್ಷಣಾ ಸಾಮಗ್ರಿಗಳನ್ನು ನೇಪಾಳದ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಸಚಿವ ಮಹಾಬೀರ್ ಪುನ್ ಅವರಿಗೆ ಹಸ್ತಾಂತರಿಸಲಾಗಿತ್ತು.

"ಸುರಂಗ ರಕ್ಷಣಾ ಕಾರ್ಯಾಚರಣೆಯ ಸಾಮಗ್ರಿಗಳು ಮತ್ತು ಫೋರೆನ್ಸಿಕ್ ಸರಕುಗಳು ಸೇರಿದಂತೆ ಪರಿಹಾರ ಮತ್ತು ರಕ್ಷಣಾ ಸಾಮಗ್ರಿಗಳನ್ನು ಹೊತ್ತ ಭಾರತದ 8ನೇ ವಿಮಾನವು ಕಠ್ಮಂಡುವನ್ನು ತಲುಪಿತು ಮತ್ತು ಆ ಸಾಮಗ್ರಿಗಳನ್ನು ನೇಪಾಳದ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಸಚಿವ ಮಹಾಬೀರ್ ಪುನ್ ಅವರಿಗೆ ಹಸ್ತಾಂತರಿಸಲಾಯಿತು," ಎಂದು ನೇಪಾಳದಲ್ಲಿರುವ ಭಾರತದ ರಾಯಭಾರಿ ನವೀನ್ ಶ್ರೀವಾಸ್ತವ ಅವರು 'ಎಕ್ಸ್'ನಲ್ಲಿ ತಿಳಿಸಿದ್ದರು.

ಭೀಕರ ಹಠಾತ್ ಪ್ರವಾಹದ ಹಿನ್ನೆಲೆಯಲ್ಲಿ, ಆಗಸ್ಟ್ 26 ರಿಂದ ಒಂಬತ್ತು ವಿಶೇಷ ವಿಮಾನಗಳ ಮೂಲಕ ಪರಿಹಾರ ಸಾಮಗ್ರಿಗಳು, ಉಪಕರಣಗಳು ಮತ್ತು ತಜ್ಞ ಸಿಬ್ಬಂದಿಯನ್ನು ನೇಪಾಳಕ್ಕೆ ತಲುಪಿಸುವ ಪ್ರಕ್ರಿಯೆಯನ್ನು ಭಾರತವು ತ್ವರಿತಗೊಳಿಸಿದೆ.

# ಸುಡಾನ್‌ನಲ್ಲಿ ಭೀಕರ ದುರಂತ: ಚಿನ್ನದ ಗಣಿ ಕುಸಿದು 82ಕ್ಕೂ ಹೆಚ್ಚು ಕಾರ್ಮಿಕರು ಸಜೀವ ಸಮಾಧಿ



**ಪಶ್ಚಿಮ ಕಾರ್ಡೋಫಾನ್ (ಸುಡಾನ್), ಸೆ.19:** ಹಳದಿ ಲೋಹಕ್ಕಾಗಿ ನಡೆದ ರಕ್ತಸಿಕ್ತ ಸಮರಗಳು ಒಂದೆರಡಲ್ಲ. ಆದರೆ ಅದೇ ಬಂಗಾರದ ಹೊಳಪಿನ ಹಿಂದೆ ಅದೆಷ್ಟೋ ಬಡ ಜೀವಗಳ ಕಣ್ಣೀರು ಮತ್ತು ಕರಾಳ ವಾಸ್ತವ ಅಡಗಿರುತ್ತದೆ ಎಂಬುದಕ್ಕೆ ಆಫ್ರಿಕಾದ ಸುಡಾನ್ ದೇಶದಲ್ಲಿ ನಡೆದ ಈ ಭೀಕರ ದುರಂತವೇ ಸಾಕ್ಷಿ.

ಸುಡಾನ್‌ನ ಪಶ್ಚಿಮ ಕಾರ್ಡೋಫಾನ್ ಪ್ರಾಂತ್ಯದ ಅಲ್–ನುಹುದ್ ಪಟ್ಟಣದ ಬಳಿ ಇರುವ ಅಲ್–ಝುರಾ ಅನಧಿಕೃತ ಚಿನ್ನದ ಗಣಿ ದಿಢೀರನೆ ಕುಸಿದು 82ಕ್ಕೂ ಹೆಚ್ಚು ಕಾರ್ಮಿಕರು ಸಜೀವ ಸಮಾಧಿಯಾಗಿದ್ದಾರೆ.

ಸುಡಾನ್‌ನ ಅಲ್–ನುಹುದ್ ಪಟ್ಟಣದ ಸಮೀಪದ ಅಲ್–ಝುರಾ ಚಿನ್ನದ ಗಣಿಯ ಅತ್ಯಂತ ಕಿರಿದಾದ ಜಾಗದಲ್ಲಿ ನೂರಾರು ಕಾರ್ಮಿಕರು ಕೆಲಸ ಮಾಡುತ್ತಿದ್ದಾಗ, ಇದ್ದಕ್ಕಿದ್ದಂತೆ ಒಂದು ಸುರಂಗದ ಭಾಗ ಕುಸಿದಿದೆ. ಆ ಸುರಂಗಗಳು ಒಂದಕ್ಕೊಂದು ಸಂಪರ್ಕ ಹೊಂದಿದ್ದರಿಂದ ಒಂದರ ಹಿಂದೆ ಒಂದರಂತೆ ಎಲ್ಲ ಸುರಂಗಗಳು ಕುಸಿದು ಬಿದ್ದಿವೆ. ಅದರಲ್ಲೂ, ಯುದ್ಧದ ಕಾರಣದಿಂದಾಗಿ ಸ್ಥಳದಲ್ಲಿ ಯಾವುದೇ ಸರ್ಕಾರಿ ರಕ್ಷಣಾ ತಂಡಗಳಾಗಲಿ ಅಥವಾ ಮಣ್ಣು ತೆರವುಗೊಳಿಸುವ ಹೆವಿ ಮೆಷಿನರಿಗಳಾಗಲಿ ಇರಲಿಲ್ಲ. ಸ್ಥಳೀಯರು ಗುದ್ದಲಿ–ಪಿಕಾಸಿ ಮುಂತಾದ ಹಳೆಯ ಸಲಕರಣೆಗಳಿಂದಲೇ ಮಣ್ಣು ಅಗೆಯಲು ಹೆಣಗಾಡಬೇಕಾಯಿತು.

ಸುಡಾನ್‌ನಲ್ಲಿ ಉತ್ಪತ್ತಿಯಾಗುವ ಚಿನ್ನದಲ್ಲಿ ಸುಮಾರು 80% ಭಾಗ ಬರುವುದು ಇಂತಹ ಅನಧಿಕೃತ, ಸಾಂಪ್ರದಾಯಿಕ ಗಣಿಗಳಿಂದಲೇ. ಇಲ್ಲಿ ಕೆಲಸ ಮಾಡುವವರಿಗೆ ಹೆಲ್ಮೆಟ್, ಆಮ್ಲಜನಕ, ಸುರಂಗ ಕುಸಿಯದಂತೆ ತಡೆಯುವ ಮರದ ಅಥವಾ ಕಬ್ಬಿಣದ ಆಧಾರಸ್ತಂಭಗಳಂತಹ ಯಾವುದೇ ಸುರಕ್ಷತಾ ಸೌಲಭ್ಯಗಳಿರುವುದಿಲ್ಲ. ಅದರಲ್ಲೂ, ಸುಡಾನ್‌ನಲ್ಲಿ ಸೇನೆ ಮತ್ತು ಖಖಈ ಬಂಡುಕೋರರ ನಡುವೆ ನಡೆಯುತ್ತಿರುವ ಭೀಕರ ಯುದ್ಧದಿಂದಾಗಿ ಕೃಷಿ, ವ್ಯಾಪಾರ ಸಂಪೂರ್ಣ ನಾಶವಾಗಿದೆ. ಹಸಿವು ಮತ್ತು ನಿರುದ್ಯೋಗದಿಂದ ತಪ್ಪಿಸಿಕೊಳ್ಳಲು ಲಕ್ಷಾಂತರ ಜನರಿಗೆ ಪ್ರಾಣದ ಹಂಗು ತೊರೆದು ಗಣಿಗಳಲ್ಲಿ ಚಿನ್ನ ಹುಡುಕುವುದೇ ಕೊನೆಯ ಜೀವನೋಪಾಯ ವಾಗಿದೆ. ಈ ಅಕ್ರಮ ಗಣಿಗಳಿಂದ ತೆಗೆಯುವ ಬಂಗಾರವನ್ನು ಗಡಿ ದಾಟಿಸಿ ಕಳ್ಳಸಾಗಣೆ ಮಾಡಲಾಗುತ್ತದೆ. ಇದರಿಂದ ಬರುವ ಅಪಾರ ಹಣವನ್ನು ಸ್ಥಳೀಯ ಸಶಸ್ತ್ರ ಗುಂಪುಗಳು ಮತ್ತು ಯುದ್ಧಕೋರರು ಶಸ್ತ್ರಾಸ್ತ್ರ ಖರೀದಿಸಲು ಬಳಸಿಕೊಳ್ಳುತ್ತಿದ್ದಾರೆ. ಹೀಗಾಗಿ ಗಣಿಗಳಲ್ಲಿ ಕಾರ್ಮಿಕರ ಸುರಕ್ಷತೆಯ ಬಗ್ಗೆ ಯಾರೂ ನಿಯಮ ರೂಪಿಸುವುದಿಲ್ಲ. ಅದರಲ್ಲೂ, ಯುದ್ಧಗ್ರಸ್ತ ಪ್ರದೇಶಗಳಲ್ಲಿ ಸರ್ಕಾರದ ಯಾವುದೇ ಕಾನೂನು ಅಥವಾ ಆಡಳಿತ ಅಸ್ತಿತ್ವದಲ್ಲಿಲ್ಲದಿರುವು ದರಿಂದ, ಗಣಿ ಮಾಲೀಕರು ಹಳೆಯ, ಅಪಾಯಕಾರಿ ಮತ್ತು ಮುಚ್ಚಲ್ಪಟ್ಟಿದ್ದ ಹೊಂಡಗಳನ್ನು ಮತ್ತೆ ಅಗೆದು ಅಮಾಯಕ ಕಾರ್ಮಿಕರನ್ನು ಸಾವಿನ ಕೂಪಕ್ಕೆ ತಳ್ಳುತ್ತಾರೆ.

# 24 ಗಂಟೆಯಲ್ಲಿ 26 ದಾಳಿ: ಸೌದಿ ವಿರುದ್ಧ ಹೌತಿ ಆರೋಪ

**ಯೆಮನ್, ಸೆ.19:** ಕಳೆದ 24 ಗಂಟೆಗಳಲ್ಲಿ ತಮ್ಮ ನಿಯಂತ್ರಣದಲ್ಲಿರುವ ಪ್ರದೇಶಗಳ ಮೇಲೆ ಸೌದಿ ಅರೇಬಿಯಾ 26 ದಾಳಿಗಳನ್ನು ನಡೆಸಿದೆ, ಹಾಗೆಯೇ ಕಳೆದ ಶುಕ್ರವಾರಕ್ಕೆ ಕೊನೆಗೊಳ್ಳುವಂತೆ ಒಂದು ವಾರದಲ್ಲಿ ಈ ಸಂಖ್ಯೆ 300 ತಲುಪಿದೆ ಎಂದು ಯೆಮೆನ್‌ನ ಹೌತಿ ಬಂಡುಕೋರರು ತಿಳಿಸಿದ್ದಾರೆ.

ಸೌದಿ ಬೆಂಬಲಿತ ಯೆಮೆನ್ ಸರ್ಕಾರವು, ತೈಜ್ ಪ್ರಾಂತ್ಯದ ಅಲ್–ವಾಜಿಯಾ ಜಿಲ್ಲೆಯಲ್ಲಿ ನಡೆದ ಘರ್ಷಣೆಯಲ್ಲಿ ತಮ್ಮ ಪಡೆಗಳು 30 ಹೌತಿ ಬಂಡುಕೋರ 'ರನ್ನು ಕೊಂದಿದ್ದು, 60 ಕ್ಕೂ ಹೆಚ್ಚು ಜನರನ್ನು ಗಾಯಗೊಳಿಸಿವೆ ಎಂದು ತಿಳಿಸಿದೆ.ಇರಾನ್ ಬೆಂಬಲಿತ ಹೌತಿಗಳಿಗೆ ಬೆಂಬಲವಾಗಿ ಮತ್ತು ಸೌದಿ ಅರೇಬಿಯಾ ವಿರುದ್ಧ ಸಾವಿರಾರು ಜನರು ಸನಾದಲ್ಲಿ ಪ್ರತಿಭಟನೆ ನಡೆಸಿದರು. ಹೌತಿಗಳು ಬಾಬ್ ಅಲ್–ಮಂದೇಬ್ ಜಲಸಂಧಿ ಸೇರಿದಂತೆ ಯೆಮೆನ್‌ನ ಕೆಂಪು ಸಮುದ್ರ ತೀರದ ಪ್ರಮುಖ ಪ್ರದೇಶಗಳನ್ನು ತಮ್ಮ ನಿಯಂತ್ರಣಕ್ಕೆ ತೆಗೆದುಕೊಂಡಿದ್ದಾರೆ.


**ಪ್ರಾದೇಶಿಕ ಶಾಂತಿಯನ್ನು ಕದಡುತ್ತಿದೆ: ವಿಶ್ವಸಂಸ್ಥೆ ಭದ್ರತಾ ಮಂಡಳಿ:**

ಹೌತಿಗಳು ನಡೆಸುತ್ತಿರುವ ಮಿಲಿಟರಿ ತೀವ್ರತೆ, ಸೌದಿ ಅರೇಬಿಯಾದ ಮೇಲಿನ ದಾಳಿಗಳು ಮತ್ತು ಕೆಂಪು ಸಮುದ್ರದಲ್ಲಿನ ಅಂತರರಾಷ್ಟ್ರೀಯ ಹಡಗು ರವಾನೆಗೆ ಒಡ್ಡುತ್ತಿರುವ ಬೆದರಿಕೆಗಳು ಪ್ರಾದೇಶಿಕ ಶಾಂತಿಯನ್ನು ಹಾಳುಮಾಡುತ್ತಿವೆ ಎಂದು ವಿಶ್ವಸಂಸ್ಥೆ ಭದ್ರತಾ ಮಂಡಳಿ ಖಂಡಿಸಿದೆ. ಸೆಪ್ಟೆಂಬರ್ ಆರಂಭದಿಂದ ಯೆಮೆನ್‌ನಲ್ಲಿ ಕನಿಷ್ಠ 1,25,000 ಜನರು ನಿರಾಶ್ರಿತರಾಗಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದೆ.

**ಅಮೆರಿಕೆ ಹಿಂಜರಿಕೆ:** ಮತ್ತೊಂದೆಡೆ ಜಾಗತಿಕ ವ್ಯಾಪಾರಕ್ಕೆ ಪ್ರಮುಖವಾಗಿರುವ ಬಾಬ್ ಅಲ್–ಮಂದೇಬ್ ಮೂಲಕ ಹಡಗು ಸಂಚಾರಕ್ಕೆ ಎದುರಾಗಿರುವ ಬೆದರಿಕೆಯ ಹಿನ್ನೆಲೆಯಲ್ಲಿ, ಅಮೆರಿಕದ ಅಧಿಕಾರಿಗಳು ಓಮನ್‌ನ ಮಸ್ಕಟ್‌ನಲ್ಲಿ ಹೌತಿ ಪ್ರತಿನಿಧಿಗಳನ್ನು ಭೇಟಿಯಾಗಿ ಚರ್ಚೆ ನಡೆಸಿದ್ದು, ಸೌದಿ ಅರೇಬಿಯಾಗೆ ಸಂಬಂಧಿಸದ ಹಡಗುಗಳನ್ನು ಗುರಿಯಾಗಿಸುವುದಿಲ್ಲ ಎಂದು ಹೌತಿಗಳು ಭರವಸೆ ನೀಡಿದ್ದಾರೆ ಎನ್ನಲಾಗಿದೆ. ಈ ನಡುವೆ ಸೌದಿ ಅರೇಬಿಯಾ ದಾಳಿಗೆ ವಿನಂತಿಸಿದರೂ, ಇರಾನ್ ಜೊತೆಗಿನ ಯುದ್ಧದ ಕಾರಣದಿಂದ ಅಮೆರಿಕ ನೇರ ದಾಳಿಗೆ ಹಿಂಜರಿದಿದೆ.

ಯುರೋಪಿಯನ್ ಯೂನಿಯನ್ ಖಂಡನೆ ಯುರೋಪಿಯನ್ ಯೂನಿಯನ್‌ನ ವಿದೇಶಾಂಗ ನೀತಿ ಮುಖ್ಯಸ್ಥೆ ಕಾಜಾ ಕಲ್ಲಾಸ್, ಕೆಂಪು ಸಮುದ್ರದ ನೌಕಾಪಡೆಯ 'ಆಪರೇಷನ್ ಆಸ್ಪೈಡ್ಸ್' ಹೆಚ್ಚಿನ ಜಾಗರೂಕತೆ ವಹಿಸಿದೆ ಎಂದು ತಿಳಿಸಿದ್ದಾರೆ. ಸೌದಿ ಅರೇಬಿಯಾದ ಮೇಲಿನ ಹೌತಿ ದಾಳಿಗಳನ್ನು ಅವರು ಖಂಡಿಸಿದ್ದು, ಶಾಂತಿ ಮರುಸ್ಥಾಪನೆಗಾಗಿ ಸೌದಿ ವಿದೇಶಾಂಗ ಸಚಿವರೊಂದಿಗೆ ಚರ್ಚಿಸಿದ್ದಾರೆ.

# ಉತ್ತರ ಕೊರಿಯಾ: 1,399 ಬಾರಿ ಕಂಪಿಸಿದ ಭೂಮಿ



**ಪ್ಯೊಂಗ್ಯಾಂಗ್ (ಉತ್ತರ ಕೊರಿಯಾ), ಸೆ.19:** ಉತ್ತರ ಕೊರಿಯಾದ ಸರ್ವಾಧಿಕಾರಿ ಭೂಗತ ಅಣು ಪರೀಕ್ಷೆ ನಡೆಸಿ ಜಂಬ ಕೊಚ್ಚಿಕೊಂಡಿದ್ದು ಹಳೆಯ ಸುದ್ದಿ. ಆದರೆ ಕಿಮ್‌ನ ಆ ಒಂದು ನಿರ್ಧಾರದಿಂದಾಗಿ ನೆಲದಡಿಯಲ್ಲಿ ಸದ್ದಿಲ್ಲದೆ ಸಾವಿರಕ್ಕೂ ಹೆಚ್ಚು ಬಾರಿ ಭೂಮಿ ನಡುಗಿದೆ ಎಂಬ ಆಘಾತಕಾರಿ ಸತ್ಯವನ್ನು ವಿಜ್ಞಾನಿಗಳು ಹೊರಹಾಕಿದ್ದಾರೆ.

ಪ್ರಸಿದ್ಧ ವಿಜ್ಞಾನ ಪತ್ರಿಕೆಯಾದ ಸೈನ್ಸ್ ನಲ್ಲಿ ಸೆಪ್ಟೆಂಬರ್ 2026ರಲ್ಲಿ ಪ್ರಕಟವಾದ ಈ ಜಂಟಿ ಅಧ್ಯಯನ ವರದಿಯು ಇಡೀ ಜಗತ್ತನ್ನು ಆಶ್ಚರ್ಯಚಕಿತಗೊಳಿಸಿದೆ. ದಕ್ಷಿಣ ಕೊರಿಯಾ ಮತ್ತು ಚೀನಾದ ಭೂವಿಜ್ಞಾನಿಗಳು ಜಂಟಿಯಾಗಿ 2008ರಿಂದ 2025ರವರೆಗಿನ ಭೂಕಂಪನ ದತ್ತಾಂಶಗಳನ್ನು ಆಳವಾಗಿ ವಿಶ್ಲೇಷಿಸಿದಾಗ, ಉತ್ತರ ಕೊರಿಯಾ ನಡೆಸಿದ ಸರಣಿ ಭೂಗತ ಪರಮಾಣು ಪರೀಕ್ಷೆಗಳ ಪರಿಣಾಮವಾಗಿ ಮೌಂಟ್ ಮಂಟಾಪ್ ಪರ್ವತ ಪ್ರದೇಶದಲ್ಲಿ ಒಟ್ಟು 1,399 ಬಾರಿ ಸಣ್ಣ ಪ್ರಮಾಣದ ಭೂಕಂಪಗಳು ಸಂಭವಿಸಿವೆ ಎಂಬ ಆಘಾತಕಾರಿ ಸತ್ಯ ಹೊರಬಿದ್ದಿದೆ.

**2,000 ವರ್ಷಗಳ ಶಾಂತಿ ಭಂಗ**

ಐತಿಹಾಸಿಕ ದಾಖಲೆಗಳ ಪ್ರಕಾರ ಮೌಂಟ್ ಮಂಟಾಪ್ ಮತ್ತು ಪುಂಗ್ಯೆ–ರಿ ಪ್ರದೇಶಗಳು ಕಳೆದ ಎರಡು ಸಾವಿರ ವರ್ಷಗಳಿಂದ ಯಾವುದೇ ಪ್ರಮುಖ ಭೂಕಂಪನವಿಲ್ಲದೆ ಸಂಪೂರ್ಣ ಶಾಂತವಾಗಿದ್ದವು. ಆದರೆ 2006 ಮತ್ತು 2017 ರ ನಡುವೆ ಉತ್ತರ ಕೊರಿಯಾ ನಡೆಸಿದ 6 ಭೂಗತ ಅಣು ಪರೀಕ್ಷೆಗಳು ಇಡೀ ಭೂಮಿಯ ಮೇಲ್ಮೈಯನ್ನೇ ಬದಲಾಯಿಸಿವೆ. ಅದರಲ್ಲೂ, 2017ರಲ್ಲಿ ಉತ್ತರ ಕೊರಿಯಾ ನಡೆಸಿದ 6ನೇ ಹಾಗೂ ಅತ್ಯಂತ ಶಕ್ತಿಶಾಲಿ (ಸುಮಾರು 160 ಕಿಲೋಟನ್ ಸಾಮರ್ಥ್ಯದ) ಹೈಡ್ರೋಜನ್ ಬಾಂಬ್ ಪರೀಕ್ಷೆಯು ರಿಕ್ಟರ್ ಮಾಪಕದಲ್ಲಿ 6.3 ತೀವ್ರತೆಯ ಪ್ರಬಲ ಭೂಕಂಪಕ್ಕೆ ಕಾರಣವಾಗಿತ್ತು. ಈ ಸ್ಫೋಟದಿಂದಾಗಿ ಪರ್ವತದೊಳಗಿನ ಸುರಂಗಗಳು ಕುಸಿದಿದ್ದವು ಹಾಗೂ ಪರ್ವತದ ಮೇಲ್ಭಾಗದ ಆಕಾರವೇ ಸುಮಾರು 3 ಮೀಟರ್‌ಗಳಷ್ಟು ಕುಸಿದಿತ್ತು.

ಸಾಮಾನ್ಯವಾಗಿ ಯಾವುದೇ ಭೂಗತ ಸ್ಫೋಟ ನಡೆದ ಕೆಲವು ವಾರಗಳ ಬಳಿಕ ಭೂಮಿ ಶಾಂತವಾಗುತ್ತದೆ. ಆದರೆ, ಮಂಟಾಪ್ ಪರ್ವತದ ಅಡಿಯಲ್ಲಿ ಸ್ಫೋಟ ನಿಂತು ವರ್ಷಗಳು ಕಳೆದರೂ ಭೂಕಂಪಗಳ ಸಂಖ್ಯೆ ಮತ್ತು ತೀವ್ರತೆ ವರ್ಷದಿಂದ ವರ್ಷಕ್ಕೆ (2025ರ ವರೆಗೂ) ಹೆಚ್ಚುತ್ತಲೇ ಹೋಗಿದೆ. ಜೊತೆಗೆ, ಸರಣಿ ಅಣು ಸ್ಫೋಟಗಳ ಭೀಕರ ಒತ್ತಡಕ್ಕೆ ಸಿಲುಕಿ ಭೂಮಿಯ ಆಳದಲ್ಲಿದ್ದ ಹಳೆಯ, ನಿಷ್ಕ್ರಿಯ ಬಿರುಕುಗಳು ಮರುಜೀವ ಪಡೆದುಕೊಂಡಿವೆ. ಈ ಬಿರುಕುಗಳ ನಡುವೆ ನೀರು ತುಂಬಿಕೊಳ್ಳುತ್ತಿರುವುದರಿಂದ ಬಂಡೆಗಳು ಒಂದಕ್ಕೊಂದು ಜಾರುತ್ತಿದ್ದು, ನಿರಂತರವಾಗಿ ಸಣ್ಣ ಸಣ್ಣ ಭೂಕಂಪಗಳು (ಸಾಮಾನ್ಯವಾಗಿ 2 ರಿಂದ 3 ತೀವ್ರತೆಯುಳ್ಳವು) ಸಂಭವಿಸುತ್ತಿವೆ ಎಂದು ವಿಜ್ಞಾನಿಗಳು ವರದಿಯಲ್ಲಿ ವಿವರಿಸಿದ್ದಾರೆ.

ಒಟ್ಟಾರೆಯಾಗಿ, ಪರಮಾಣು ಅಸ್ತ್ರಗಳ ಪರೀಕ್ಷೆಯು ಕೇವಲ ತಕ್ಷಣದ ವಿನಾಶ ಮಾತ್ರವಲ್ಲದೆ, ಭೂಮಿಯ ಆಂತರಿಕ ರಚನೆಯನ್ನೇ ದಶಕಗಳ ಕಾಲ ಹೇಗೆ ಬದಲಾಯಿಸಬಲ್ಲದು ಎಂಬುದಕ್ಕೆ ಈ ಘಟನೆ ಕಣ್ಣಮುಂದಿರುವ ದೊಡ್ಡ ಸಾಕ್ಷಿಯಾಗಿದೆ.

# ತಿಂಗಳಲ್ಲಿ ಜಾರಿ ಭಾರತ–ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದ



**ನವದೆಹಲಿ, ಸೆ. 19:** ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದ ಮುಂದಿನ ಒಂದು ತಿಂಗಳೊಳಗೆ ಜಾರಿಗೆ ಬರುವ ಸಾಧ್ಯತೆ ಇದೆ. ಒಪ್ಪಂದವನ್ನು ಅನುಷ್ಠಾನಗೊಳಿಸಲು ಅಗತ್ಯವಿರುವ ಅಧಿಕೃತ ಪ್ರಕ್ರಿಯೆಗಳನ್ನು ಎರಡೂ ದೇಶಗಳು ಪೂರ್ಣಗೊಳಿಸುತ್ತಿವೆ. ಈಗ ಪರಸ್ಪರ ರಾಜತಾಂತ್ರಿಕ ನೋಟುಗಳ ವಿನಿಮಯ ನಡೆಯಬೇಕಿದೆ ಎಂದು ನ್ಯೂಜಿಲೆಂಡ್ ವ್ಯಾಪಾರ ಮತ್ತು ಹೂಡಿಕೆ ಸಚಿವ ಟಾಡ್ ಮೆಕ್ಕ್ಲೇ ಹೇಳಿದ್ದಾರೆ.

ನ್ಯೂಜಿಲೆಂಡ್ ಸಂಸತ್ತು ಸೆಪ್ಟೆಂಬರ್ 15ರಂದು ಭಾರತ?ನ್ಯೂಜಿಲೆಂಡ್ ಎಫ್ ಟಿಎ ಜಾರಿಗೆ ಅಗತ್ಯವಿರುವ ಕಾನೂನನ್ನು ಅಂಗೀಕರಿಸಿದೆ. ನ್ಯೂಜಿಲೆಂಡ್ ಸಂಸತ್ತಿನ ಅಧಿಕೃತ ದಾಖಲೆಗಳ ಪ್ರಕಾರ, ಮಸೂದೆ ಪರವಾಗಿ 93 ಮತಗಳು ಮತ್ತು ವಿರುದ್ಧವಾಗಿ 29 ಮತಗಳು ಬಿದ್ದಿವೆ. ಸೆಪ್ಟೆಂಬರ್ 17ರಂದು ಮಸೂದೆಗೆ ರಾಜಮುದ್ರೆಯೂ ದೊರೆತಿದ್ದು, ನ್ಯೂಜಿಲೆಂಡ್ ಕಡೆಯ ಆಂತರಿಕ ಶಾಸನಾತ್ಮಕ ಪ್ರಕ್ರಿಯೆ ಪೂರ್ಣಗೊಂಡಿದೆ.

ಭಾರತ ಮತ್ತು ನ್ಯೂಜಿಲೆಂಡ್ ಈಗ ಒಪ್ಪಂದ ಜಾರಿಗೆ ಅಗತ್ಯವಿರುವ ಅಧಿಕೃತ ನೋಟುಗಳನ್ನು ವಿನಿಮಯ ಮಾಡಿಕೊಳ್ಳಬೇಕಿದೆ. ಈ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಒಪ್ಪಂದ ಜಾರಿಯಾಗುವ ದಿನಾಂಕ ನಿಗದಿಯಾಗಲಿದೆ. ನಾವು ಈಗ ಒಪ್ಪಂದ ಜಾರಿಗೆ ಅತ್ಯಂತ ಸಮೀಪದಲ್ಲಿದ್ದೇವೆ. ಮುಂದಿನ ಒಂದು ತಿಂಗಳೊಳಗೆ ಇದು ಜಾರಿಗೆ ಬರುವ ನಿರೀಕ್ಷೆ ಇದೆ ಎಂದು ಮೆಕ್ಕ್ಲೇ ಹೇಳಿದ್ದಾರೆ. ಎಫ್‌ಟಿಎ ಎಂದರೆ ಎರಡು ಅಥವಾ ಹೆಚ್ಚು ದೇಶಗಳು ಪರಸ್ಪರ ವ್ಯಾಪಾರ ಮಾಡುವಾಗ ಸರಕುಗಳ ಮೇಲೆ ವಿಧಿಸುವ ಆಮದು ಸುಂಕವನ್ನು ಕಡಿಮೆ ಮಾಡುವುದು ಅಥವಾ ಸಂಪೂರ್ಣವಾಗಿ ತೆಗೆದುಹಾಕುವುದು, ಸೇವಾ ವಲಯಗಳಿಗೆ ಮಾರುಕಟ್ಟೆ ಪ್ರವೇಶವನ್ನು ಸುಲಭಗೊಳಿಸುವುದು, ಹೂಡಿಕೆಗೆ ಅನುಕೂಲ ಕಲ್ಪಿಸುವುದು ಹಾಗೂ ವ್ಯಾಪಾರದಲ್ಲಿನ ಕೆಲವು ಅಡೆತಡೆಗಳನ್ನು ಕಡಿಮೆ ಮಾಡುವ ಒಪ್ಪಂದ.

ಸರಳವಾಗಿ ಹೇಳುವುದಾದರೆ, ಭಾರತದಲ್ಲಿ ತಯಾರಾದ ಔಷಧ, ಬಟ್ಟೆ, ಯಂತ್ರೋಪಕರಣ ಅಥವಾ ಇತರ ಉತ್ಪನ್ನವನ್ನು ನ್ಯೂಜಿಲೆಂಡ್ಗೆ ಕಳುಹಿಸಿದಾಗ ಅಲ್ಲಿ ಭಾರತದ ಸರಕುಗಳ ಮೇಲೆ ಆಮದು ಸುಂಕ ವಿಧಿಸಲಾಗುವುದಿಲ್ಲ ಅಥವಾ ಕಡಿಮೆ ವಿಧಿಸಲಾಗುತ್ತದೆ. ಇದರಿಂದ, ಭಾರತೀಯ ಉತ್ಪನ್ನದ ಬೆಲೆ ನ್ಯೂಜಿಲೆಂಡ್ ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕವಾಗುತ್ತದೆ. ಪರಿಣಾಮ, ಭಾರತದ ಉತ್ಪನ್ನಗಳು ನ್ಯೂಜಿಲೆಂಡ್ ಮಾರುಕಟ್ಟೆಗೆ ಲಗ್ಗೆ ಇಡುತ್ತವೆ. ಅಂತೆಯೇ, ನ್ಯೂಜಿಲೆಂಡ್ ಉತ್ಪನ್ನಗಳಿಗೂ ಭಾರತ ಕೂಡ ಸುಂಕ ವಿನಾಯಿತಿ ನೀಡುತ್ತವೆ. ನ್ಯೂಜಿಲೆಂಡ್ ಉತ್ಪನ್ನಗಳು ಭಾರತೀಯ ಮಾರುಕಟ್ಟೆಗಳನ್ನು ಆಕ್ರಮಿಸಿಕೊಳ್ಳುತ್ತವೆ. ದೇಶೀಯ ಉತ್ಪನ್ನಗಳಿಗೆ ಪೈಪೋಟಿ ಕೊಡುತ್ತವೆ.

ಆದಾಗ್ಯೂ, ಎಫ್‌ಟಿಎ ಅಡಿಯಲ್ಲಿ ಉಭಯ ರಾಷ್ಟ್ರಗಳ ಎಲ್ಲ ಉತ್ಪನ್ನಗಳಿಗೂ ಸುಂಕವನ್ನು ರದ್ದುಗೊಳಿಸುವುದಿಲ್ಲ. ಉತ್ಪನ್ನಗಳ ಆಧಾರದ ಮೇಲೆ ತೆರಿಗೆ ವಿನಾಯಿತಿ/ಕಡಿತ ನಿರ್ಧಾರವಾಗುತ್ತದೆ ಎಂದು ಎರಡೂ ರಾಷ್ಟ್ರಗಳು ಹೇಳಿಕೊಂಡಿವೆ.

ಭಾರತ–ನ್ಯೂಜಿಲೆಂಡ್ ಒಪ್ಪಂದದಲ್ಲಿ ಭಾರತದಿಂದ ನ್ಯೂಜಿಲೆಂಡ್‌ಗೆ ರಫ್ತಾಗುವ ಸರಕುಗಳಿಗೆ ಶೂನ್ಯ ಸುಂಕದ ಮಾರುಕಟ್ಟೆ ಪ್ರವೇಶ ದೊರೆಯಲಿದೆ ಎಂದು ಭಾರತದ ವಾಣಿಜ್ಯ ಸಚಿವಾಲಯ ತಿಳಿಸಿದೆ. ಬಟ್ಟೆ ಮತ್ತು ಉಡುಪು, ಚರ್ಮ ಮತ್ತು ಪಾದರಕ್ಷೆ, ಇಂಜಿನಿಯರಿಂಗ್ ಸರಕು, ಔಷಧ, ಕೃಷಿ ಉತ್ಪನ್ನ, ಸಮುದ್ರೋತ್ಪನ್ನ, ರಾಸಾಯನಿಕ, ಎಲೆಕ್ಟ್ರಾನಿಕ್ಸ್ ಸೇರಿದಂತೆ ಹಲವು ಭಾರತೀಯ ವಲಯಗಳಿಗೆ ಇದರಿಂದ ಪ್ರಯೋಜನವಾಗಲಿದೆ ಎಂದು ಸಚಿವಾಲಯ ಹೇಳಿದೆ.

ನ್ಯೂಜಿಲೆಂಡ್ನಿಂದ ಭಾರತಕ್ಕೆ ಬರುವ ಸರಕುಗಳಿಗೆ ಸಂಪೂರ್ಣ ಶೂನ್ಯ ಸುಂಕವನ್ನು ಒಂದೇ ದಿನದಲ್ಲಿ ನೀಡಲಾಗುವುದಿಲ್ಲ. ನ್ಯೂಜಿಲೆಂಡ್‌ನ ಪ್ರಸ್ತುತ ಭಾರತ ರಫ್ತಿನ ಸುಮಾರು 57% ಭಾಗಕ್ಕೆ ಒಪ್ಪಂದ ಜಾರಿಯಾದ ಮೊದಲ ದಿನದಿಂದಲೇ ಸುಂಕ ರದ್ದಾಗಲಿದೆ. ಹಂತ ಹಂತವಾಗಿ ಈ ಪ್ರಮಾಣ 82%ಕ್ಕೆ ಏರಲಿದೆ; ಮತ್ತೊಂದು 13% ರಫ್ತಿಗೆ ಸುಂಕದಲ್ಲಿ ಗಣನೀಯ ಕಡಿತ ದೊರೆಯಲಿದೆ ಎಂದು ಸಚಿವಾಲಯ ಹೇಳಿಕೊಂಡಿದೆ. ಆದಾಗ್ಯೂ, ಒಟ್ಟಾರೆ ನ್ಯೂಜಿಲೆಂಡ್ನ ಪ್ರಸ್ತುತ ರಫ್ತಿನ ಸುಮಾರು 95% ಭಾಗಕ್ಕೆ ಭಾರತದಲ್ಲಿ ಸುಂಕ ಸೌಲಭ್ಯ ಸಿಗಲಿದೆ. ನ್ಯೂಜಿಲೆಂಡ್‌ನ ಕುರಿಮಾಂಸ, ಉಣ್ಣೆ, ಕಲ್ಲಿದ್ದಲು ಸೇರಿದಂತೆ ಕೆಲವು ಉತ್ಪನ್ನಗಳಿಗೆ ಮೊದಲ ದಿನದಿಂದಲೇ ಸುಂಕ ವಿನಾಯಿತಿ ದೊರೆಯಲಿದೆ. ಮೀನು ಮತ್ತು ಸಮುದ್ರೋತ್ಪನ್ನಗಳ ಸುಂಕವನ್ನು ಕೆಲವು ವರ್ಷಗಳಲ್ಲಿ ಹಂತಹಂತವಾಗಿ ತೆಗೆದುಹಾಕಲಾಗುತ್ತದೆ. ಕಿವಿ ಹಣ್ಣು ಮತ್ತು ಸೇಬುಗಳಿಗೂ ಸುಂಕ ಕಡಿತದ ಸೌಲಭ್ಯಗಳನ್ನು ಭಾರತ ಒದಗಿಸಿದೆ.

ಒಪ್ಪಂದ ಜಾರಿಗೆ ಬಂದ ಬಳಿಕ ಭಾರತೀಯ ರಫ್ತುದಾರರಿಗೆ ನ್ಯೂಜಿಲೆಂಡ್ ಮಾರುಕಟ್ಟೆಯಲ್ಲಿ ಮೊದಲ ದಿನದಿಂದಲೇ ದೊಡ್ಡ ಅವಕಾಶ ಸಿಗಲಿದೆ. ವಿಶೇಷವಾಗಿ ರಾಸಾಯನಿಕ, ಔಷಧ, ಯಂತ್ರೋಪಕರಣ ಹಾಗೂ ತಂತ್ರಜ್ಞಾನ ಕ್ಷೇತ್ರಗಳಲ್ಲಿ ವ್ಯಾಪಾರ ಹೆಚ್ಚುವ ನಿರೀಕ್ಷೆ ಇದೆ ಎಂದು ಮೆಕ್ಕ್ಲೇ ಹೇಳಿದ್ದಾರೆ.

ಭಾರತದ ವಾಣಿಜ್ಯ ಸಚಿವಾಲಯದ ಮಾಹಿತಿಯ ಪ್ರಕಾರ, ಎಫ್ ಟಿಎಗೂ ಮೊದಲು ಕೆಲವು ಭಾರತೀಯ ಉತ್ಪನ್ನಗಳ ಮೇಲೆ 5ರಿಂದ 10%ವರೆಗೆ ಸುಂಕವಿತ್ತು; ಒಪ್ಪಂದದಡಿ ಇವು ಶೂನ್ಯಕ್ಕೆ ಇಳಿಯಲಿವೆ. ಇದರಿಂದ, ಭಾರತದ ಔಷಧ ಮತ್ತು ಜೆನೆರಿಕ್ ಔಷಧ ತಯಾರಿಕಾ ಕಂಪನಿಗಳು, ಕೈಗಾರಿಕಾ ರಾಸಾಯನಿಕ ಉತ್ಪಾದಕರು, ಯಂತ್ರೋಪಕರಣ ಮತ್ತು ಎಂಜಿನಿಯರಿಂಗ್ ಸರಕು ತಯಾರಕರು ಹಾಗೂ ಬಟ್ಟೆ–ಚರ್ಮ ಉತ್ಪನ್ನಗಳ ರಫ್ತುದಾರರಿಗೆ ನ್ಯೂಜಿಲೆಂಡ್ ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕ ಅವಕಾಶ ಸಿಗಬಹುದು.

ಸರಕು ವ್ಯಾಪಾರ ಮಾತ್ರವಲ್ಲದೆ ಸೇವಾ ವಲಯಕ್ಕೂ ಒಪ್ಪಂದದಡಿ ಸುಂಕ ವಿನಾಯಿತಿಗಳು ದೊರೆಯಲಿವೆ. ಮಾಹಿತಿ ತಂತ್ರಜ್ಞಾನ, ವೃತ್ತಿಪರ ಸೇವೆಗಳು, ದೂರಸಂಪರ್ಕ, ಪ್ರವಾಸೋದ್ಯಮ ಹಾಗೂ ಇತರ ಹಲವು ಸೇವಾ ಕ್ಷೇತ್ರಗಳಲ್ಲಿ ಭಾರತೀಯ ಕಂಪನಿಗಳು ಮತ್ತು ವೃತ್ತಿಪರರಿಗೆ ಹೆಚ್ಚಿನ ಅವಕಾಶ ದೊರೆಯುವ ನಿರೀಕ್ಷೆಯಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಭಾರತ–ನ್ಯೂಜಿಲೆಂಡ್ ನಡುವೆ ಎಫ್‌ಟಿಎ ಮಾತುಕತೆ2025ರ ಮಾರ್ಚ್‌ನಲ್ಲಿ ಆರಂಭವಾಗಿತ್ತು. ಒಂಬತ್ತು ತಿಂಗಳ ಮಾತುಕತೆಯ ಬಳಿಕ 2025ರ ಡಿಸೆಂಬರ್‌ನಲ್ಲಿ ಒಪ್ಪಂದದ ಕುರಿತು ಮಾತುಕತೆ ಪೂರ್ಣಗೊಂಡಿತ್ತು. ನಂತರ 2026ರ ಏಪ್ರಿಲ್ 27ರಂದು ದೆಹಲಿಯಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಮತ್ತು ನ್ಯೂಜಿಲೆಂಡ್ ವ್ಯಾಪಾರ ಮತ್ತು ಹೂಡಿಕೆ ಸಚಿವ ಟಾಡ್ ಮೆಕ್ಕ್ಲೇ ಅಧಿಕೃತವಾಗಿ ಒಪ್ಪಂದಕ್ಕೆ ಸಹಿ ಹಾಕಿದ್ದರು.ಪ್ರಸ್ತುತ ಭಾರತ–ನ್ಯೂಜಿಲೆಂಡ್ ನಡುವಿನ ವಾರ್ಷಿಕ ದ್ವಿಪಕ್ಷೀಯ ವ್ಯಾಪಾರವು 3.95 ಶತಕೋಟಿ ನ್ಯಾಜಿಲೆಂಡ್ ಡಾಲರ್ ಇದೆ. ಎಫ್‌ಟಿಎ ಜಾರಿಯಾದ ಬಳಿಕ ಸರಕು, ಸೇವೆ, ಹೂಡಿಕೆ ಮತ್ತು ಜನರ ಸಂಚಾರ ಹೆಚ್ಚುವ ಮೂಲಕ ದ್ವಿಪಕ್ಷೀಯ ಆರ್ಥಿಕ ಸಂಬಂಧ ಮತ್ತಷ್ಟು ವಿಸ್ತಾರವಾಗಲಿದೆ ಎಂದು ಎರಡೂ ಸರ್ಕಾರಗಳು ನಿರೀಕ್ಷಿಸಿವೆ.